ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 125

25–10–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 125

### ಹೈದರಾಬಾದ್‌ನಿಂದ ಬೆಂಗಳೂರಿಗೆ ತೆರಳುತ್ತಿದ್ದ ವೋಲ್ವೋ ಬಸ್‌ಗೆ ಬೆಂಕಿ

# 20 ಮಂದಿ ಸಜೀವ ದಹನ



**ಕರ್ನೂಲ್:** ಹೈದರಾಬಾದ್‌ನಿಂದ ಬೆಂಗಳೂರಿಗೆ ತೆರಳುತ್ತಿದ್ದ ಕಾವೇರಿ ಟ್ರಾವೆಲ್ಸ್‌ಗೆ ಸೇರಿದ ಐಷಾರಾಮಿ ವೋಲ್ವೋ ಬಸ್ ಇಂದು ನಸುಕಿನಲ್ಲಿ ಜಿಲ್ಲೆಯಲ್ಲಿ ಬೆಂಕಿಗಾಹುತಿಯಾಗಿ 20 ಮಂದಿ ಸಜೀವ ದಹನಗೊಂಡು ಹಲವರು ಗಾಯಗೊಂಡಿದ್ದಾರೆ. ಕರ್ನೂಲ್ ಉಪನಗರ ಚಿನ್ನಟೇಕೂರಿನಲ್ಲಿ ರಾಷ್ಟ್ರೀಯ ಹೆದ್ದಾರಿ 44 ರಲ್ಲಿ ವೇಮುರಿ ಕಾವೇರಿ ಟ್ರಾವೆಲ್ಸ್‌ಗೆ ಸೇರಿದ ವೋಲ್ವೋ ಬಸ್ ಬೆಂಕಿಗಾಹುತಿಯಾಗಿ ಬಸ್‌ನಲ್ಲಿದ್ದ 41 ಮಂದಿಯಲ್ಲಿ, 20ಕ್ಕೂ ಹೆಚ್ಚು ಮಂದಿ ಸಜೀವ ದಹನವಾದರೆ, 19 ಮಂದಿ ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾರೆ. ನತದೃಷ್ಟ ಬಸ್ಸಿನಲ್ಲಿ 39 ಮಂದಿ ವಯಸ್ಕರು ಮತ್ತು ಇಬ್ಬರು ಚಿಕ್ಕ ಮಕ್ಕಳು ಸೇರಿ 41 ಜನ ಇದ್ದರು. ಈವರೆಗೆ 11 ಶವಗಳನ್ನು ಹೊರತೆಗೆಯಲಾಗಿದ್ದು, ಅವರನ್ನು ಗುರುತಿಸುವ ಪ್ರಕ್ರಿಯೆ ಮುಂದುವರೆದಿದೆ. ಸುರಕ್ಷಿತವಾಗಿರುವ 19 ಜನರನ್ನು ಗುರುತಿಸಲಾಗಿದ್ದು, ಅವರಲ್ಲಿ ಹಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಡಿಐಜಿ ಪ್ರವೀಣ್ ಮಾಹಿತಿ ನೀಡಿದ್ದಾರೆ. ರಾತ್ರಿ 10.30ಕ್ಕೆ ಹೈದರಾಬಾದ್‌ನಿಂದ ಬೆಂಗಳೂರಿಗೆ ಬರುತ್ತಿದ್ದ ಬಸ್‌ಗೆ ಕರ್ನೂಲ್ ನಗರದ ಹೊರವಲಯದಲ್ಲಿರುವ ಉಲಿಂದಕೊಂಡ ಬಳಿ ನಸುಕಿನ 3.30ರ ವೇಳೆ ಹಿಂದಿನಿಂದ ದ್ವಿಚಕ್ರ ವಾಹನ ಡಿಕ್ಕಿ ಹೊಡೆದಿದೆ. ಬಸ್‌ನ ಕೆಳಗೆ ಹೋಗಿ ಇಂಧನ ಟ್ಯಾಂಕ್‌ಗೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಬೆಂಕಿ ಹೊತ್ತಿಕೊಂಡು ಬಸ್ ಸುಟ್ಟು ಕರಕಲಾಗಿದೆ.

ಗಾಢ ನಿದ್ರೆಯಲ್ಲಿದ್ದ ಪ್ರಯಾಣಿಕರು ಎಚ್ಚರಗೊಂಡು, ಕೆಲವರು ಸಹಾಯಕ್ಕಾಗಿ ಕಿರುಚಿಕೊಂಡು, ಬಸ್ಸಿನ ತುರ್ತು ಬಾಗಿಲು ಮುರಿದು ಹೊರಬಂದರೆ, ಇನ್ನೂ ಹಲವರು ಬೆಂಕಿಯಲ್ಲಿ ಸಿಲುಕಿಕೊಂಡು ಸಜೀವ ದಹನವಾಗಿದ್ದಾರೆ. ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದರು. ಗಾಯಾಳುಗಳನ್ನು ಕರ್ನೂಲ್ ಜನರಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಇಡೀ ಬಸ್ ಸಂಪೂರ್ಣವಾಗಿ ಸುಟ್ಟುಹೋಗಿದ್ದು, ಹೆಚ್ಚಿನ ಪ್ರಯಾಣಿಕರು ಹೈದರಾಬಾದ್ ನಗರದವರಾಗಿದ್ದಾರೆ. ಅಪಘಾತ ನಡೆದ ತಕ್ಷಣ ಬಸ್ ಚಾಲಕ ಹಾಗೂ ಸಿಬ್ಬಂದಿ ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಘಟನೆ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದು, ಬೈಕ್ ಸವಾರ ಕೂಡ ಸಾವನ್ನಪ್ಪಿದ್ದಾನೆ.

ಪುಟ್ಟಪರ್ತಿಯಿಂದ ಹೈದರಾಬಾದ್‌ಗೆ ಬರುತ್ತಿದ್ದ ಹೈಮಾ ರೆಡ್ಡಿ, ಬಸ್‌ಗೆ ಬೆಂಕಿ ಹೊತ್ತಿಕೊಂಡಿರುವುದನ್ನು ನೋಡಿ ಬಸ್ ನಿಲ್ಲಿಸಿದ್ದಾರೆ. ನಂತರ ಪೊಲೀಸರಿಗೂ ಮಾಹಿತಿ ನೀಡಿದ್ದು, ಅವರು ತಕ್ಷಣ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಯನ್ನು ಕೈಗೊಂಡರು. ಸ್ಥಳೀಯರ ಮಾಹಿತಿ ಆಧರಿಸಿ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ರಕ್ಷಣಾ ಪರಿಹಾರ ಕಾರ್ಯಾಚರಣೆ ಕೈಗೊಂಡರು. ಆದರೆ ಅದಾಗಲೇ ತೀವ್ರ ಬೆಂಕಿಯಿಂದಾಗಿ ಬಸ್ ಸಂಪೂರ್ಣವಾಗಿ ಸುಟ್ಟುಹೋಗಿತ್ತು. ರಾಮಿ ರೆಡ್ಡಿ, ವೇಣುಗೋಪಾಲ್ ರೆಡ್ಡಿ, ಸತ್ಯನಾರಾಯಣ, ಶ್ರೀಲಕ್ಷ್ಮಿ, ನವೀನ್ ಕುಮಾರ್, ಅಖಿಲ್, ಜಶ್ಮಿತಾ, ಅಕಿರಾ, ರಮೇಶ್, ಜಯಸೂರ್ಯ ಮತ್ತು ಸುಬ್ರಮಣಿಯಂ ಅಪಘಾತದಲ್ಲಿ ಬದುಕುಳಿದರು. ಹಿಂದೂಪುರದ ನವೀನ್ ತಮ್ಮ ಕಾರಿನಲ್ಲಿ ಆರು ಗಾಯಾಳುಗಳನ್ನು ಕರ್ನೂಲ್ ಆಸ್ಪತ್ರೆಗೆ ಕರೆದೊಯ್ದರು. ಘಟನೆಯಿಂದಾಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಭಾರೀ ಸಂಚಾರ ದಟ್ಟಣೆ ಉಂಟಾಗಿತ್ತು.

**ಸಿಎಂ ನಾಯ್ಡು ಆಘಾತ:** ಘಟನೆ ಬಗ್ಗೆ ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಆಘಾತ ವ್ಯಕ್ತಪಡಿಸಿದ್ದಾರೆ. ಜೊತೆಗೆ ತಕ್ಷಣ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಉನ್ನತ ಅಧಿಕಾರಿಗಳೊಂದಿಗೆ ಮಾತನಾಡಿ ಪರಿಸ್ಥಿತಿ ಬಗ್ಗೆ ಮಾಹಿತಿ ಪಡೆದು, ಕ್ರಮಕ್ಕೆ ಸೂಚನೆ ನೀಡಿದ್ದಾರೆ. ಗಾಯಾಳುಗಳಿಗೆ ತಕ್ಷಣ ಚಿಕಿತ್ಸೆ ನೀಡಲು ಮತ್ತು ಮೃತರ ಕುಟುಂಬಗಳಿಗೆ ಸಾಧ್ಯವಿರುವ ಎಲ್ಲ ಸಹಕಾರವನ್ನು ನೀಡುವಂತೆ ನಿರ್ದೇಶಿಸಿದ್ದಾರೆ.

**ಡಿಕ್ಕಿ ಹೊಡೆದ ಬೈಕ್ ಬಸ್ ಇಂಜಿನ್ ಗೆ ಸಿಲುಕಿ ಬೆಂಕಿ:** ವೋಲ್ವೋ ಬಸ್ ಗೆ ಹಿಂದಿನಿಂದ ವೇಗವಾಗಿ ಬಂದ ಬೈಕ್‌ಗೆ ಡಿಕ್ಕಿ ಹೊಡೆದು ಬಸ್ ಅಡಿ ನುಗ್ಗಿ ಇಂಜಿನ್ ಬಳಿ ಸಿಲುಕಿ ನೆಲಕ್ಕೆ ಉಜ್ಜಿದ್ದರಿಂದ ಬೆಂಕಿ ಹೊತ್ತಿಕೊಂಡು ಚಾಲಕನ ಗಮನಕ್ಕೆ ಬರುವಷ್ಟರಲ್ಲಿ ಇಡೀ ಬಸ್ ಅನ್ನೇ ಆವರಿಸಿದ್ದು, ಅದಾಗಲೇ ಬೈಕ್ ಸವಾರ ಮೃತಪಟ್ಟಿದ್ದನು. ಬೈಕ್ ಡಿಕ್ಕಿ ಹೊಡೆದ ಸ್ಥಳದಲ್ಲೇ ಬಸ್ ನಿಲ್ಲಿಸಿದ್ದರೆ, ಇಷ್ಟೊಂದು ಪ್ರಮಾಣದ ಸಾವು ನೋವು ಸಂಭವಿಸುತ್ತಿರಲಿಲ್ಲ. ಬಸ್ ಚಾಲಕ ಬದಲಿ ಚಾಲಕನನ್ನು ಎಬ್ಬಿಸಿ ಪ್ರಯಾಣಿಕರನ್ನು ಬಸ್‌ನಿಂದ ಕೆಳಗೆ ಇಳಿಸುವ ಪ್ರಯತ್ನ ಮಾಡಿದರೂ ಇಂಜಿನ್ ಗೆ ಬೆಂಕಿ ತಗುಲಿದ್ದರಿಂದ, ಕೆಲವೇ ನಿಮಿಷಗಳಲ್ಲಿ ಇಡೀ ಬಸ್ ಆವರಿಸಿದೆ ಮುಚ್ಚಿದ್ದ ಕಿಟಕಿಗಳನ್ನು ಒಡೆದು ಪ್ರಯಾಣಿಕರನ್ನು ಹೊರತರಲಾಯಿತು. ಅಷ್ಟರೊಳಗೆ ಹಲವು ಪ್ರಯಾಣಿಕರು ಉಸಿರುಚೆಲ್ಲಿದ್ದಾರೆ,

ಪ್ರತ್ಯಕ್ಷದರ್ಶಿಗಳು ಹೇಳುವಂತೆ ಬೆಂಕಿ ಎಷ್ಟು ಬೇಗನೆ ಹರಡಿತೆಂದರೆ, ಹೆಚ್ಚಿನ ಪ್ರಯಾಣಿಕರು ಏನಾಗುತ್ತಿದೆ ಎಂದು ಅರಿತುಕೊಳ್ಳುವ ಮೊದಲೇ ಬೆಂಕಿಯಲ್ಲಿ ಬೆಂದುಹೋಗಿದ್ದಾರೆ, ಕೆಲವರು ಸುಟ್ಟಗಾಯಗಳಿಂದ ಮತ್ತೆ ಕೆಲವರು ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ.

# ರಾಜ್ಯದಲ್ಲಿ 13 ಕಂಪನಿಗಳಿಂದ 27 ಸಾವಿರ ಕೋಟಿ ರೂ. ಹೂಡಿಕೆಗೆ ಸರ್ಕಾರ ಅಸ್ತು



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಶುಕ್ರವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ರಾಜ್ಯ ಉನ್ನತ ಮಟ್ಟದ ಯೋಜನಾ ಮಂಜೂರಾತಿ ಸಮಿತಿಯ ಸಭೆಯಲ್ಲಿ ಒಟ್ಟು 27,607.26 ಕೋಟಿ ರೂಪಾಯಿ ಬಂಡವಾಳ ಹೂಡಿಕೆಗೆ ಒಪ್ಪಿಗೆ ನೀಡಲಾಗಿದೆ.

ಇದರಲ್ಲಿ 11 ಹೊಸ ಕೈಗಾರಿಕಾ ಯೋಜನೆಗಳು ಮತ್ತು 2 ಹೆಚ್ಚುವರಿ ಹೂಡಿಕೆ ಪ್ರಸ್ತಾವನೆಗಳು ಸೇರಿವೆ ಎಂದು ಸಭೆ ಬಳಿಕ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಒಟ್ಟು ಈ 13 ಯೋಜನೆಗಳಿಂದ 8,704 ನೇರ ಉದ್ಯೋಗಗಳು ಸೃಷ್ಟಿಯಾಗಲಿವೆ ಅವರು ಹೇಳಿದ್ದಾರೆ. 11 ಹೊಸ ಹೂಡಿಕೆ ಯೋಜನೆಗಳ ಪೈಕಿ ತೇಜಸ್ ನೆಟ್ವರ್ಕ್ಸ್ 542.19 ಕೋಟಿ ರೂ, ವಾಯು ಅಸೆಟ್ಸ್ 1,251 ಕೋಟಿ ರೂ, ಜಿಂದಾಲ್ ಸ್ಟೀಲ್ಸ್ 1,300.57 ಕೋಟಿ ರೂ, ಜಿಂದಾಲ್ ಎಲೆಕ್ಟ್ರಿಕಲ್ ಸ್ಟೀಲ್ 7,102 ಕೋಟಿ ರೂ, ಗ್ರಾಸಿಂ ಇಂಡಸ್ಟ್ರೀಸ್1,386 ಕೋಟಿ ರೂ, ಎಸ್‌ಎಫ್‌ಎಕ್ಸ್ ಇಂಡಿಯಾ 9,298 ಕೋಟಿ ರೂ, ಸ್ನೀಡರ್ ಎಲೆಕ್ಟ್ರಿಕ್ ಐಟಿ ಬಿಝಿನೆಸ್, ಎಚ್‌ಎಸ್‌ಎಸ್ ಟೆಕ್ಸ್ಟೈಲ್ಸ್ 740 ಕೋಟಿ ರೂ, ಸ್ನೈಡರ್ ಎಲೆಕ್ಟ್ರಿಕ್ ಬಿಸಿನೆಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ 1,520.75 ಕೋಟಿ ರೂ, ಕ್ಯೂಪಿಐಎಐ ಇಂಡಿಯಾ 1,136 ಕೋಟಿ ರೂ, ಟೊಯೋಟಾ ಇಂಡಸ್ಟ್ರೀಸ್ ಎಂಜಿನ್ ಇಂಡಿಯಾ ಲಿಮಿಟೆಡ್ 1,330 ಕೋಟಿ ರೂ ಮತ್ತು ರಿಲಯನ್ಸ್ ಕನ್ಸೂಮರ್ ಪ್ರಾಡಕ್ಟ್ಸ್ 1,622 ಕೋಟಿ ರೂ. ಹೂಡಿಕೆ ಮಾಡಲಿವೆ.

ಉಳಿದಂತೆ, ಎಂಬೆಸಿ ಇಂಡಸ್ಟ್ರಿಯಲ್ ಪಾರ್ಕ್ ಮತ್ತು ಬಾಲಾಜಿ ವೇಫರ್ಸ್ ಕಂಪನಿಗಳು ಕ್ರಮವಾಗಿ 80 ಮತ್ತು 298.75 ಕೋಟಿ ರೂ. ಹೆಚ್ಚುವರಿ ಬಂಡವಾಳ ತೊಡಗಿಸಲಿವೆ ಎಂದು ಅವರು ಹೇಳಿದ್ದಾರೆ.

# ಅ.25 ಮತ್ತು 26 ರಂದು ಯುಗಪುರುಷ ಅಲ್ಬರ್ಟ್ ಐನ್ ಸ್ಟೀನ್ ನಾಟಕ ಪ್ರದರ್ಶನ

**ದಾವಣಗೆರೆ:** ಬಾಪೂಜಿ ವಿದ್ಯಾಸಂಸ್ಥೆ ಮತ್ತು ಬೆಂಗಳೂರಿನ ಪಿ.ಇ.ಎಸ್ ವಿಶ್ವವಿದ್ಯಾಲಯದ ಪ್ರದರ್ಶಕ ಕಲೆಗಳ ವಿಭಾಗದ ಸಹಯೋಗದಲ್ಲಿ ದಾವಣಗೆರೆಯ ಅನ್ವೇಷಕರು ಆರ್ಟ್ ಫೌಂಡೇಶನ್ ಸಹಕಾರದಲ್ಲಿ 'ಯುಗಪುರುಷ ಆಲ್ಬರ್ಟ್ ಐನ್ ಸ್ಟೀನ್ ನಾಟಕ ಪ್ರದರ್ಶನ'ವನ್ನು ಅ.25 ಮತ್ತು 26 ರಂದು ನಗರದ ಬಿ.ಐ.ಇ.ಟಿ ಕಾಲೇಜಿನ ಆವರಣದಲ್ಲಿರುವ ಎಸ್. ಎಸ್ ಮಲ್ಲಿಕಾರ್ಜುನ ಸಾಂಸ್ಕೃತಿಕ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಪರಮಾಣು ವಿಜ್ಞಾನಿ, ಬೆಂಗಳೂರು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಡಾ. ಕೆ ಸಿದ್ದಪ್ಪನವರು ರಚಿಸಿದ್ದಾರೆ ಮತ್ತು ಪಿ.ಬಿ.ಎಸ್. ವಿಶ್ವವಿದ್ಯಾಲಯದ ಪ್ರದರ್ಶಕ ಕಲೆಗಳ ವಿಭಾಗದ ಮುಖ್ಯಸ್ಥರಾದ ಡಾ. ಎಸ್ ವಿ ಸುಷ್ಮಾ ಇವರು ನಿರ್ದೇಶಿಸಲಿದ್ದಾರೆ. ನಾಟಕದ ಮೊದಲ ಪ್ರದರ್ಶನವು ಅ.25 ರಂದು ಬೆಳಗ್ಗೆ 11 ಗಂಟೆಗೆ ನಾಟಕದ ಪ್ರದರ್ಶನದ ಉದ್ಘಾಟನೆಯನ್ನು ಸಾಣೆಹಳ್ಳಿಯ ಡಾ. ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಜಿಗಳು ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಡಾ. ಕೆ. ಸಿದ್ದಪ್ಪ ಮತ್ತು ಪ್ರತಿಮಾ ಸಭಾದ ಗೌರವಾಧ್ಯಕ್ಷರಾದ ಪ್ರೊ ಎಸ್ ಹಾಲಪ್ಪ ನವರು ಉಪಸ್ಥಿತರಿರಲಿದ್ದಾರೆ. ಹಾಗೂ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ವಹಿಸಲಿದ್ದಾರೆ.

ಬೆಳಿಗ್ಗೆ11ಕ್ಕೆ ಹೈಸ್ಕೂಲ್ ವಿದ್ಯಾರ್ಥಿಗಳಿಗೆ ಮತ್ತು ಸಂಜೆ 6ಕ್ಕೆ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಮಾತ್ರ ಉಚಿತ ಪ್ರವೇಶವಿರುತ್ತದೆ. ಅ.26 ಬೆಳಗ್ಗೆ 11ಗಂಟೆಗೆ ದಾವಣಗೆರೆಯ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಉಚಿತ ಪ್ರವೇಶ ಇರುತ್ತದೆ.

# ನೀರನ್ನು ಕುದಿಸಿ, ಆರಿಸಿ ಕುಡಿಯಿರಿ

**ದಾವಣಗೆರೆ :** ದಾವಣಗೆರೆ ಜಿಲ್ಲೆಯಲ್ಲಿ ಇತ್ತೀಚೆಗೆ ಆಗುತ್ತಿರುವ ಮಳೆಯಿಂದಾಗಿ ರಾಜನಹಳ್ಳಿ ಗ್ರಾಮದ ಬ್ಯಾರೇಜ್ ಹತ್ತಿರ ಇರುವ ಜಾಕ್‌ವೆಲ್‌ನಲ್ಲಿ ತುಂಗಾಭದ್ರ ನದಿಯ ನೀರಿನ ಮಟ್ಟವು ಹೆಚ್ಚಾಗಿದ್ದು, ನದಿಯ ನೀರು ಕೆಸರಿನಿಂದ ಕೂಡಿರುತ್ತದೆ.

ನೀರು ಶುದ್ದೀಕರಿಸಿ ಪೂರೈಕೆ ಮಾಡಿದ್ದರೂ ಕಡ್ಡಾಯವಾಗಿ ಕುದಿಸಿ, ಆರಿಸಿದ ನೀರನ್ನು ಕುಡಿಯಲು ಉಪಯೋಗಿಸಬೇಕು. ಹಾಗೂ ನೀರನ್ನು ವ್ಯರ್ಥ ಮಾಡದೇ ಮಿತವಾಗಿ ಬಳಸಬೇಕೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

# ಅಂಗೈಯಲ್ಲಿರುವ ಆರೋಗ್ಯವನ್ನು ಕಾಪಾಡಿಕೊಳ್ಳಿ

### ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಕಚೇರಿ ಉದ್ಘಾಟನಾ ಸಮಾರಂಭದಲ್ಲಿ ನ್ಯಾ. ಮಂಜಪ್ಪ ಹನುಮಂತಪ್ಪ

**ದಾವಣಗೆರ:** ಮನಸ್ಸು ಸ್ವಚ್ಛವಾಗಿದ್ದರೆ ಅವರು ಎಲ್ಲಾದರಲ್ಲಿ ಆರೋಗ್ಯವಂತನಾಗಿ ಶ್ರೀಮಂತನಾಗಿರುತ್ತಾನೆ ಎಂದು 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಅಧ್ಯಕ್ಷರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ ಅಭಿಪ್ರಾಯಪಟ್ಟರು.

ಶುಕ್ರವಾರ(ಅ.24) ಚಿಗಟೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಿಗಟೇರಿ ಜಿಲ್ಲಾ ಆಸ್ಪತ್ರೆ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಕಚೇರಿ ಉದ್ಘಾಟಿಸಿ ಮಾತನಾಡಿದರು.

ಆರೋಗ್ಯವಂತರು ಎಂದರೆ ಯಾವುದೇ ಕಾಯಿಲೆ ಇಲ್ಲದೆ ದೈಹಿಕ, ಮಾನಸಿಕ ಮತ್ತು ಸಾಮಾಜಿಕವಾಗಿ ಚೆನ್ನಾಗಿರುವುದೇ ಆಗಿದೆ. ಎಲ್ಲಾ ಸಮಯ, ಸಂದರ್ಭದಲ್ಲಿ ನೆಮ್ಮದಿಯಿಂದ ಇರುತ್ತಾ ಎಲ್ಲರೊಡನೆ ಹೊಂದಾಣಿಕೆಯಿಂದ ಬದುಕುತ್ತಾ, ಸ್ವಾವಲಂಬಿಯಾಗಿ, ಸಂತೋಷವಾಗಿ, ತೃಪ್ತಿಕರವಾಗಿರುವುದೇ ಮಾನಸಿಕ ಆರೋಗ್ಯ, ದೇಹ ಮತ್ತು ಮನಸ್ಸು ಒಂದೇ ನಾಣ್ಯದ




ಎರಡು ಮುಖಗಳು. ಒಂದಕ್ಕೆ ತೊಂದರೆಯಾದರೆ ಮತ್ತೊಂದಕ್ಕೆ ತೊಂದರೆ, ದೈಹಿಕ ಕಾಯಿಲೆ ಮಾನಸಿಕ ನೆಮ್ಮದಿಯನ್ನು ಕೆಡಿಸಿದರೆ, ಮಾನಸಿಕ ಸಮಸ್ಯೆ ದೇಹದ ಆರೋಗ್ಯವನ್ನು ಕೆಡಿಸಬಲ್ಲದು.

ಕಣ್ಣು ನೋಡಿದ ಸೌಂದರ್ಯವನ್ನು ಮನಸ್ಸು ಸಂತೋಷವಾಗಿಸಬೇಕು. ಅದ್ದರಿಂದ ಮತ್ತೊಬ್ಬರಿಗೆ ತೊಂದರೆಯಾಗಬಾರದು. ಕಿವಿಯಿಂದ ಇಂಪಾದ ಸಂಗೀತವನ್ನು ಕೇಳಬೇಕೇ ಹೊರತು, ಕೆಟ್ಟಮಾತುಗಳನ್ನು ಹಾಡಬಾರದು. ಆಗ ಮಾತ್ರ ಅವನ ಮಾನಸಿಕ ಸ್ಥಿತಿ ಕೇಡುವುದಿಲ್ಲ.

ನಾವು ಮಾತನಾಡುವ ರೀತಿ, ನೋಡುವ ದೃಷ್ಠಿ ಸರಿಯಾಗಿ ಇದ್ದರೆ ಆಗ ಮಾತ್ರ ನಮಗೆ ಯಾವುದೇ ರೀತಿಯ ಮಾನಸಿಕ ಆರೋಗ್ಯ ಕೇಡುವುದಿಲ್ಲ. ಒಂದು ಮನೆಯಲ್ಲಿ ಒಬ್ಬ ವ್ಯಕ್ತಿ ಮಾನಸಿಕ ರೋಗಿ ಆಗಿದ್ದರೆ ಆಗ ಅವರ ಮನೆಯ ಪರಿಸ್ಥಿತಿ ಹೇಗಿರುತ್ತದೆ ಎಂದರೆ ತಮ್ಮ ಕೆಲಸ, ಕರ್ತವ್ಯಗಳನ್ನು ಮಾಡಲಾರರು, ದುಡಿಯಲಾರರು. ಅವರನ್ನು ನೋಡಿಕೊಳ್ಳುವುದು ಮನೆಯವರ ಕೆಲಸವಾಗಿ, ಕುಟುಂಬದ ಮಾನಸಿಕ, ಆರ್ಥಿಕ ನೆಮ್ಮದಿ ಹಾಳಾಗುತ್ತದೆ. ರೋಗಿಗಳ ಮನೆಯವರು ಮೌನವಾಗಿ ನಾನಾ ಸಂಕಟಗಳಿಗೆ ತುತ್ತಾಗುತ್ತಾರೆ. ಇದರಿಂದ ಇಡೀ ಸಮುದಾಯ ನೋವಿಗೆ ಒಳಗಾಗುತ್ತಾರೆ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣನವರ ಮಾತನಾಡಿ ಮಾನಸಿಕ ಅಸ್ವಸ್ಥತೆವುಳ್ಳ ವ್ಯಕ್ತಿ ತಿರುಗಾಡುತ್ತಿದ್ದರೆ ಮತ್ತು ತನ್ನನ್ನು ತಾನೇ ನೋಡಿಕೊಳ್ಳಲು ಅಸಮರ್ಥನಾದರೆ ಅವರನ್ನು ರಕ್ಷಣೆಗಾಗಿ ಪೊಲೀಸರು ವಶಕ್ಕೆ ತೆಗೆದುಕೊಳ್ಳಬೇಕು. ರಕ್ಷಣೆಗೆ ತೆಗೆದುಕೊಂಡಂತಹ ವ್ಯಕ್ತಿಯನ್ನು ಪೊಲೀಸರು ಯಾವ ಕಾರಣಕ್ಕಾಗಿ ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂಬುದನ್ನು ಆತನಿಗೆ ಅಥವಾ ನಾಮನಿರ್ದೇಶಿತ ಪ್ರತಿನಿಧಿಗೆ ತಿಳಿಸಬೇಕು. ಜಿಲ್ಲಾ ಆಸ್ಪತ್ರೆಯ ಅಧೀಕ್ಷಕರಾದ ಡಾ.ನಾಗೇಂದ್ರಪ್ಪ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ಮಂಜುನಾಥ ಎಲ್. ಪಾಟೀಲ್, ಜಿಲ್ಲಾ ಆಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ. ನಾಗವೇಣಿ, ಜಿಲ್ಲಾ ಆಸ್ಪತ್ರೆಯ ಮನೋರೋಗ ತಜ್ಞರಾದ ಡಾ. ಮರುಳಸಿದ್ದಪ್ಪ.ಪಿ.ಎಂ, ಮನೋರೋಗ ವಿಭಾಗದ ಮುಖ್ಯಸ್ಥರಾದ ಡಾ.ಅನುಪಮ, ಡಾ.ಮೃತ್ಯುಂಜಯ, ವೈದ್ಯಾಧಿಕಾರಿ ಡಾ.ಸುಧೀಂದ್ರ, ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಸದಸ್ಯರಾದ ಬಿ.ನಾಗಮ್ಮ, ಶಂಕರಮ್ಮ ಉಪಸ್ಥಿತರಿದ್ದರು.

# ಪೂಜ್ಯರಿಗೆ ಸದ್ಭಕ್ತರಿಂದ ಗುರುವಂದನಾ ಕಾರ್ಯಕ್ರಮ



ವಿಜಯನಗರ ಜಿಲ್ಲೆ ಹರಪನಹಳ್ಳಿ ತಾಲ್ಲೂಕು, ಮತ್ತಿಹಳ್ಳಿ ಗ್ರಾಮದ ಮುತ್ತಿಗಿ ರಸ್ತೆಯಲ್ಲಿ ಬರುವಂತಹ ಪೂಜ್ಯ ಹನುಮಾವತಾರಿ ಶ್ರೀ ಶ್ರೀ ಶ್ರೀ ಬಸವರಾಜ ಗುರೂಜಿಯವರ ಮಠವಿದ್ದು, ಈ ಮಠದ ಆವರಣದಲ್ಲಿ ಶ್ರೀ ಪಂಚಮುಖಿ ಆಂಜನೇಯ ಸ್ವಾಮಿ ದೇವಾಲಯದ ಕಟ್ಟಡ ನಿರ್ಮಾಣಗೊಳ್ಳುತ್ತಿದ್ದು, ಭಕ್ತಾಧಿಗಳು ಕಾಣಿಕೆ ರೂಪದಲ್ಲಿ ಹಾಗೂ ಯಾವುದೇ ರೀತಿಯ ಸೇವೆಯನ್ನು ಸಲ್ಲಿಸುತ್ತಿರುವುದರಿಂದ ಭಕ್ತಾಧಿಗಳ ಸಹಕಾರದಿಂದ ದೇವಾಲಯವು ನಿರ್ಮಾಣಗೊಳ್ಳುತ್ತಿದೆ. ಹಾಗೆಯೇ ಸದ್ಭಕ್ತರಾದಂತಹ ವಿಜಯನಗರ ಜಿಲ್ಲೆ ಹೂವಿನಹಡಗಲಿ ತಾಲ್ಲೂಕು, ಬೂದನೂರು ಗ್ರಾಮದ ಶ್ರೀಮತಿ ಲಲಿತಾ ಎ. ಕೋಂ. ಶ್ರೀ ಹೊನ್ನತ್ತಪ್ಪ (ಪಿ.ಎಲ್.ಡಿ. ಅಧ್ಯಕ್ಷರು) ಹಾಗೂ ಕುಟುಂಬಸ್ತರುಗಳು ಸೇರಿ ಪೂಜ್ಯರಾದಂತಹ ಹನುಮಾವತಾರಿ ಶ್ರೀ ಶ್ರೀ ಶ್ರೀ ಬಸವರಾಜ ಗುರೂಜಿಯವರನ್ನು ತಮ್ಮ ವಾಸ ಗೃಹಕ್ಕೆ ದಿನಾಂಕ: 24–10–2025 ರ ಶುಭ ಶುಕ್ರವಾರ ದಿನದಂದು ಬರಮಾಡಿಕೊಂಡು ಪೂಜ್ಯರನ್ನು ತುಂಬು ಆದರದಿಂದ ಸ್ವಾಗತಿಸಿ ಪೂಜ್ಯರಿಗೆ ಶಾಲು ಹೊದಿಸಿ ಮಾಲೆ ಹಾಕಿ ಫಲ ತಾಂಬೂಲ ಕೊಟ್ಟು ಆರತಿ ಬೆಳಗುವುದರೊಂದಿಗೆ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಪೂಜ್ಯರು ದಂಪತಿಗಳಿಗೂ ಹಾಗೂ ಕುಟುಂಬಸ್ಥರೆಲ್ಲರಿಗೂ ಆಶೀರ್ವದಿಸಿದರು. ದಂಪತಿಗಳು ಶ್ರೀ ಪಂಚಮುಖಿ ಆಂಜನೇಯ ದೇವಸ್ಥಾನದ ನಿರ್ಮಾಣಕ್ಕೆ ಕಾಣಿಕೆಯನ್ನು ನೀಡಿದರು. ಪೂಜ್ಯರು ಎಲ್ಲರನ್ನು ಆಶೀರ್ವದಿಸಿ "ನಿಮ್ಮ ಅಪಾರವಾದ ನಂಬಿಕೆ ಭಕ್ತಿ ನಿಮ್ಮನ್ನು ಗೆಲ್ಲಿಸುತ್ತದೆ" ಎಂದು ನುಡಿದು ಹಾರೈಸಿದರು. ಈ ಸಂದರ್ಭದಲ್ಲಿ ಶ್ರೀಮತಿ ಲಲಿತಾ ಎ. ಕೋಂ. ಹೊನ್ನತ್ತಪ್ಪ ಹಾಗೂ ಕುಟುಂಬಸ್ಥರಾದ ಶ್ರೀ ಕೊಟ್ರೇಶ್ ಎ., ಶ್ರೀಮತಿ ಶೋಭಾ ಎ., ಶ್ರೀಮತಿ ಸರಸ್ವತಿ ಎ., ಶ್ರೀ ಶರಣಪ್ಪ ಎ. ಹಾಗೂ ಶ್ರೀ ರೊಟ್ಟಿ ವೀರಣ್ಣ, ಶ್ರೀ ವೀರಣ್ಣ ಗೌಡ್ರು, ಶ್ರೀ ಷಣ್ಮುಖಪ್ಪ, ಶ್ರೀಮತಿ ಶಶಿಕಲಾ, ಶ್ರೀಮತಿ ಜ್ಯೋತಿ ಹಾಗೂ ಊರಿನ ಹಿರಿಯರು, ಗ್ರಾಮಸ್ಥರುಗಳು ಇನ್ನಿತರರು ಉಪಸ್ಥಿತರಿದ್ದರು.

# ಸಾಮಾಜಿಕ ಸಾಮರಸ್ಯಕ್ಕೆ ದೇವಾಲಯಗಳು ಪೂರಕ

### ಹಿರಿಯ ಪತ್ರಕರ್ತ ಡಾ.ಎಚ್.ಬಿ. ಮಂಜುನಾಥ

**ದಾವಣಗೆರೆ.ಅ.24.** ಶ್ರೀ ಕಾಶೀಲಿಂಗೇಶ್ವರ ಮಹಾರಾಜ್ ಕೀ ಜೈ... ಲಿಂಗೇಶ ದೊರೆಯೇ ನಿನಗಾರು ಸರಿಯೇ ಸರಿ ಸರಿ ಎಂದವರ ಹಲ್ಲು ಮುರಿಯೆ ಬಹುಪರಾಕ್.. ಎಂಬ ಜಯ ಘೋಷಣೆಗಳೊಂದಿಗೆ ಹೆಬ್ಬಾಳು ಮಠದ ಶ್ರೀ ಮಹಾಂತ ರುದ್ರಸ್ವಾಮಿಗಳ ನೇತೃತ್ವದಲ್ಲಿ ಕಾಶೀಪುರ ಗ್ರಾಮದಲ್ಲಿ ನಿರ್ಮಿಸಲಾದ ಶ್ರೀ ಕಾಶೀಲಿಂಗೇಶ್ವರ ಸ್ವಾಮಿಯ ನೂತನ ದೇವಸ್ಥಾನ ಅದ್ದೂರಿಯಾಗಿ ಲೋಕರ್ಪಣೆಗೊಂಡಿತು.

ಸಾವಿರಾರು ಭಕ್ತರು ಈ ಕಾರ್ಯಕ್ರಮದಲ್ಲಿ ಶ್ರದ್ಧಾ ಭಕ್ತಿಯಿಂದ ಪಾಲ್ಗೊಂಡು ನೇತ್ರೋನ್ಮಿಲನ ಮತ್ತು ಕಳಸರೋಹಣವನ್ನು ಕಣ್ತುಂಬಿಕೊಂಡು ಕಾಶೀಲಿಂಗೇಶ್ವರ ಸ್ವಾಮಿಯ ದರ್ಶನ ಪಡೆದರು.

ಈ ವೇಳೆ ಹೆಬ್ಬಾಳು ಮಠದ ಶ್ರೀ ಮಹಾಂತ ರುದ್ರೇಶ್ವರ ಸ್ವಾಮಿಗಳು ಭಕ್ತರಿಗೆ ಆಶೀರ್ವಚನ ನೀಡಿತ್ತಾ, ತಾರತಮ್ಯ ಭೇದವಿಲ್ಲದೆ ಎಲ್ಲರೂ ಭಕ್ತಿ ಸಮರ್ಪಿಸಲು ದೇವಾಲಯಗಳು ಕಾರಣವಾಗಿ ತನ್ಮೂಲಕ ಸಾಮಾಜಿಕ ಸಾಮರಸ್ಯ ವೃದ್ಧಿಯಾಗುತ್ತದೆ ಎಂದು ಹೇಳಿದರು.

ಊರಿನ ನ್ಯಾಯ ನಿರ್ಣಯಗಳು ಊರಿನ ದೇವರುಗಳ ಸಾಕ್ಷಿಯಾಗಿ ನೆರವೇರುತ್ತಾ ವ್ಯಾಜ್ಯ ತೀರ್ಮಾನವಾಗುತ್ತಿದ್ದ ಸನಾತನ ಸಂಸ್ಕೃತಿ ನಮ್ಮದು, ಸನಾತನ ಧರ್ಮಾಧಾರಿತ ಭಗವಂತನ ಪ್ರತಿಷ್ಠಾಪನೆಗೊಂಡ ಪವಿತ್ರ ಕ್ಷೇತ್ರದಲ್ಲಿ ದುಶ್ಚಟಗಳಿಗೆ ಆಸ್ಪದವಿಲ್ಲದಂತೆ ನೋಡಿಕೊಳ್ಳಬೇಕು. ದೀನ ದುರ್ಬಲರಿಗೆ ಸಹಾಯ ಮಾಡುವುದು ನಮ್ಮ ಸನಾತನ ಧರ್ಮದ ಪರಂಪರೆ ಎಂದರಲ್ಲದೆ ಕಾಶಿ ಕ್ಷೇತ್ರದಿಂದಲೇ ಈಶ್ವರಲಿಂಗ ತಂದು ಮೂರು ಕೋಟಿ ರೂಪಾಯಿಗೂ ಅಧಿಕ ವೆಚ್ಚದ ಸಂಪೂರ್ಣ ಶಿಲಾ ಕೆತ್ತನೆಯ ಈ ದೇವಸ್ಥಾನ ನಿರ್ಮಾಣಕ್ಕೆ ಜಾತಿ ಮತ ಭೇದವಿಲ್ಲದೆ ಎಲ್ಲರೂ ಸ್ವಯಂ ಪ್ರೇರಣೆಯಿಂದ ನೀಡಿರುವವರು ಪುಣ್ಯಾತ್ಮರು, ಗ್ರಾಮದವರಲ್ಲದೆ ಸುತ್ತಮುತ್ತಲಿನ ಕ್ಯಾಂಪು ಗಳವರೂ, ಇತರರೂ ಸಹಕರಿಸಿದ್ದಾರೆ ಎಂದರು. ಟ್ರಸ್ಟಿನ ಅಧ್ಯಕ್ಷರು ಪದಾಧಿಕಾರಿಗಳು ಸದಸ್ಯರು ದಾನ ದೇಣಿಗೆ ನೀಡಿದ ಸರ್ವರನ್ನು ಸ್ವಾಮಿಗಳು ಸ್ಮರಿಸಿದರು.

'ಸನಾತನ ಧರ್ಮ ಮತ್ತು ದೇವಾಲಯ ಸಂಸ್ಕೃತಿ'ಯ ಬಗ್ಗೆ ಪ್ರಧಾನ ಉಪನ್ಯಾಸ ನೀಡಿದ ಹಿರಿಯ ಪತ್ರಕರ್ತ ಡಾ. ಎಚ್ ಬಿ ಮಂಜುನಾಥ ಬದುಕಿನ ಭರವಸೆಗಾಗಿ ದೈವ ಕೃಪೆ ನಿರೀಕ್ಷಿಸಿ ಬರಲು ದೇವಾಲಯಗಳು ಕಾರಣವಾಗುವುದಷ್ಟೇ ಅಲ್ಲ ನಮ್ಮ ಸನಾತನ ಸಂಸ್ಕೃತಿಯ ಮೌಲ್ಯಗಳ ಪ್ರತಿಪಾದನೆಗೂ ದೇವಾಲಯ ಸಂಸ್ಕೃತಿಯಲ್ಲಿ ಅವಕಾಶವಿದ್ದು ಅನೇಕ ವಿದೇಶೀಯರೂ ಇದರ ಮಹತ್ವ ಅರಿತು ಆಚರಿಸಲು ನಮ್ಮ ದೇಶಕ್ಕೆ ಬರುತ್ತಿದ್ದು ನಮ್ಮಲ್ಲೇ ಕೆಲವರು ಸನಾತನ ಧರ್ಮವನ್ನು ಹಾದಿ ತಪ್ಪಿಸಲು ಹೊರಟು ತಾವೇ ಹಾದಿತಪ್ಪುತ್ತಿದ್ದಾರೆ ಎಂಬುದನ್ನು ನಿದರ್ಶನಗಳ ಸಹಿತ ವಿವರಿಸಿದರು.

ಸಗುಣ ಸಾಕಾರವಾಗಿಯೇ ಆಗಲಿ ನಿರ್ಗುಣ ನಿರಾಕಾರವಾಗಿಯೇ ಆಗಲಿ, ನಾಮರೂಪ ಸಹಿತವಾಗಿಯೇ ಆಗಲಿ ರಹಿತವಾಗಿಯೇ ಆಗಲಿ ಸ್ಥಾವರವಾಗಿಯೇ ಆಗಲಿ ಜಂಗಮವಾಗಿಯೇ ಆಗಲಿ ಎಲ್ಲ ರೀತಿಯ ಆಚರಣೆಗಳಿಗೂ ಪ್ರಪಂಚದಲ್ಲಿ ಅವಕಾಶ ಸ್ವಾತಂತ್ರ್ಯ ಕೊಟ್ಟಿರುವ ಧರ್ಮವೆಂದರೆ ಅದು ನಮ್ಮ ಭಾರತೀಯ ಧರ್ಮ ಎಂದರು.

ಬನವಾಸಿ ಕದಂಬ ಸಿಂಹ ಲಾಂಛನದ ದೊರೆ ರವಿವರ್ಮನು ತ್ರಯಂಬಕ ದೇವರಿಗೆ ಹೊಳಲಕೆರೆಯ ದುಮ್ಮಿ ಮುಂತಾದ ಗ್ರಾಮಗಳನ್ನು ದತ್ತಿ ಕೊಟ್ಟ ಉಲ್ಲೇಖವಿರುವ ತಾಮ್ರ ಶಾಸನಸ್ಥ ಗ್ರಾಮ ವಾಗಿರುವ ಕಾಶೀಪುರವು ಪುರಾತನ ಐತಿಹ್ಯ ಹೊಂದಿದ್ದು ಈ ದೇವಾಲಯವು ಆಗಮಗಳ ಅನುಸಾರವಾಗಿಯೇ ನಿರ್ಮಾಣಗೊಂಡಿದೆ ಎಂದರು.

ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ. ವಾಮದೇವಪ್ಪ ಮಾತನಾಡಿ ಹಿಂದಿನ ಕಾಲದಲ್ಲಿ ಕಷ್ಟಪಟ್ಟಾದರೂ ಕಾಶಿ ಯಾತ್ರೆಗೆ ಹೋಗುತ್ತಿದ್ದರು, ಈಗ ಕಾಶಿಗೆ ಹೋಗಲಾರದವರು ಈ ಕಾಶಿಪುರಕ್ಕೆ ಬಂದು ಕಾಶಿ ವಿಶ್ವನಾಥನ ದರ್ಶನ ಪಡೆಯಬಹುದಾಗಿದೆ ಎಂದರು.

# ಹೆಣ್ಣನ್ನು ಸುರಕ್ಷಿತವಾಗಿರಿಸಲು ಸರ್ಕಾರಗಳು ಅನೇಕ ಕಾಯ್ದೆಗಳ ರಚನೆ

**ಚಿಕ್ಕಮಗಳೂರು:** ಹೆಣ್ಣು ಸಮಾಜದ ಕಣ್ಣು. ದೇಶದ ವಿವಿಧ ಸ್ಥರಗಳಲ್ಲಿ ಮಹಿಳೆಯರು ಗೌರವಾನ್ವಿತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಮಾದರಿಯಾಗಿದ್ದು, ಹೆಣ್ಣನ್ನು ತಿರಸ್ಕರಿಸುವ ಅಥವಾ ಅಸಡ್ಡೆ ತೋರುವ ಆಲೋಚನೆ ಪಾಲಕರು ಬಿಡಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ಹೇಳಿದರು.

ತಾಲ್ಲೂಕಿನ ಮೈಲಿಮನೆ ಗ್ರಾಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಟಾಟಾ ಕಾಫಿ ಲಿಮಿಟೆಡ್ ಮೈಲಿಮನೆ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ ಹಾಗೂ ವಕೀಲರ ಸಂಘದಿಂದ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೆಣ್ಣು ಇಂದಿನ ಕಾಲಮಾನದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಮುಂಚೂಣಿ ಕಂಡಿದ್ದಾರೆ. ರಾಷ್ಟ್ರಪತಿ, ಪ್ರಧಾನಿ,




ಐಪಿಎಸ್ ಹಾಗೂ ಐಎಎಸ್‌ನಂತ ಪ್ರಮುಖ ಸ್ಥಾನವನ್ನು ಅಲಂಕರಿಸಿದ್ದಾರೆ. ಹಾಗಾಗಿ ಹೆಣ್ಣುಮಕ್ಕಳನ್ನು ಅಲ್ಲಗಳೆಯದೆ ಗಂಡಿನಂತೆ ಸರಿಸಮಾನಾಗಿ ಗೌರವಿಸುವ ಪರಿಕಲ್ಪನೆ ರೂಢಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಇತ್ತೀಚೆಗೆ ಎಸ್ಟೇಟ್‌ನ ಕಾರ್ಮಿಕ ವಲಯದಲ್ಲಿ ಪೋಕ್ಸೋ, ಬಾಲ್ಯವಿವಾಹ ಪ್ರಕರಣಗಳು ದಾಖಲಾಗುತ್ತಿವೆ. ಹೆಣ್ಣುಮಕ್ಕಳನ್ನು ಪ್ರೌಢಾವಸ್ಥೆಯ ಮುಂಚೆಯೇ ಮದುವೆ ಮಾಡಿಸುವುದು, ಹೆಣ್ಣು-ಗಂಡೆಂದು ತಿಳಿಯಲು ಭ್ರೂಣಲಿಂಗ ಪತ್ತೆ ಪ್ರಕರಣಗಳು ಕಾನೂನು ಚೌಕಟ್ಟಿನಲ್ಲಿ ಶಿಕ್ಷಾರ್ಹ ಅಪರಾಧ ಜೊತೆಗೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದರು.

ಬಾಲ್ಯವಸ್ಥೆಯ ಹೆಣ್ಣುಮಕ್ಕಳಿಗೆ ಲೈಂಗಿಕ ದೌರ್ಜನ್ಯ, ಬಾಲಗರ್ಭಿಣಿ ಪ್ರಕರಣಕ್ಕೆ ಕಡಿವಾಣ ಹಾಕಲು ಪಾಲಕರು ನಿಗಾವಹಿಸಬೇಕು. ಮದುವೆ ವಯಸ್ಸಿಗಿಂತ ಮೊದಲೇ ಪ್ರೇಮವಿವಾಹಕ್ಕೆ ಮುಂದಾದರೆ ಎರಡು ಕಡೆಯ ಇಡೀ ಕುಟುಂಬ, ಮದುವೆಯಲ್ಲಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬರ ಮೇಲು ಪ್ರಕರಣ ದಾಖಲಾಗುತ್ತವೆ ಎಂಬುದು ಅರಿತುಕೊಳ್ಳಬೇಕು ಎಂದರು.

ಹೆಣ್ಣು ಸಮಾಜದಲ್ಲಿ ಶೋಷಣೆಗೆ ಒಳಗಾಗುತ್ತಿರುವ ಕಾರಣ ದೇಶದಲ್ಲಿ ಪ್ರತಿ ಎಂಟು ಗಂಟೆಗೊಮ್ಮೆ ಅತ್ಯಾಚಾರ ಪ್ರಕರಣ ದಾಖಲಾಗುತ್ತಿವೆ ಎಂದ ಅವರು, ಸರ್ಕಾರಗಳು ಆ ನಿಟ್ಟಿನಲ್ಲಿ ಹೆಣ್ಣನು ಸುರಕ್ಷಿತವಾಗಿರಿಸಲು ಅನೇಕ ಕಾಯ್ದೆಗಳನ್ನು ರಚಿಸುವ ಮೂಲಕ ಮಹಿಳೆಯರಿಗೆ ಕಾನೂನಿನ ತಿಳುವಳಿಕೆ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು. ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು.

### ವೃಷಭ ರಾಶಿ

ನಿಮ್ಮ ಒತ್ತಡ ನಿವಾರಿಸಲು ಕುಟುಂಬದ ಸದಸ್ಯರ ಬೆಂಬಲ ಪಡೆಯಿರಿ. ಅವರ ಸಹಾಯವನ್ನು ಗೌರವದಿಂದ ಸ್ವೀಕರಿಸಿ. ನೀವು ಭಾವನೆಗಳು ಮತ್ತು ಒತ್ತಡಗಳನ್ನು ಒಳಗೆ ಅದುಮಿಡಬಾರದು. ಆಗಾಗ ನಿಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳುವುದು ಸಹಾಯ ಮಾಡುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

### ಮಿಥುನ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಹೊಸ ವಿಷಯಗಳ ಬಗ್ಗೆ ಗಮನ ಹರಿಸಿ ಮತ್ತು ನಿಮ್ಮ ಅತ್ಯುತ್ತಮ ಸ್ನೇಹಿತರ ಬಳಿ ಸಹಾಯ ಕೇಳಿ. ನಿಮ್ಮ ಸಂಪೂರ್ಣ ಹಾಗೂ ಪ್ರಶ್ನಾತೀತ ಪ್ರೀತಿ ಒಂದು ಜಾದುವಿನಂಥ ಸೃಜನಶೀಲ ಶಕ್ತಿಯನ್ನು ಹೊಂದಿದೆ.

### ಕರ್ಕ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ. ನೀವು ನಿಮ್ಮ ಕೌಶಲ್ಯ ಮತ್ತು ಪ್ರತಿಭೆಗಳನ್ನು ಸರಿಯಾದ ಜನರಿಗೆ ತೋರಿಸಿದಲ್ಲಿ ನೀವು ಶೀಘ್ರದಲ್ಲೆ ಹೊಸ ಮತ್ತು ಒಳ್ಳೆಯ ಸಾರ್ವಜನಿಕ ವ್ಯಕ್ತಿತ್ವವನ್ನು ಹೊಂದಲು ಸಾಧ್ಯವಿದೆ.

### ಸಿಂಹ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಪ್ರತಿಯೊಂದು ವಿಷಯದಲ್ಲಿ ಪ್ರೀತಿಯನ್ನು ತೋರಿಸುವುದು ಸರಿಯಿಲ್ಲ. ಇದು ನಿಮ್ಮ ಸಂಬಂಧವನ್ನು ಸುಧಾರಿಸುವ ಬದಲು ಹಾಳುಮಾಡುತ್ತದೆ.

### ಕನ್ಯಾ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ಸಂಬಂಧಿಕರ ಜೊತೆ ಕಳೆದ ಸಮಯ ನಿಮಗೆ ಅನುಕೂಲಕರವಾಗಿರುತ್ತದೆ. ಪ್ರೀತಿಗಾಗಿ ವಿಶೇಷ ದಿನ–ರಾತ್ರಿಗಾಗಿ ಯಾವುದಾದರೂ ಯೋಜನೆ ಹಾಕಿ ಮತ್ತು ಇದನ್ನು ಸಾಧ್ಯವಾದಷ್ಟು ಪ್ರಣಯಮಯವಾಗಿಸಲು ಪ್ರಯತ್ನಿಸಿ. ಕೆಲಸದಲ್ಲಿ ಎಲ್ಲವೂ ನಿಮ್ಮ ಪರವಾಗಿ ಇದ್ದಂತೆ ತೋರುತ್ತದೆ.

### ತುಲಾ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು ಮತ್ತು ಅವರಿಗೆ ಸಹಾಯ ಮಾಡಿ ನೀವು ಸ್ವತಃ ಆರ್ಥಿಕ ಒತ್ತಡಕ್ಕೆ ಬರಬಹುದು. ಆದಾಗ್ಯೂ ಪರಿಸ್ಥಿತಿ ಬೇಗ ಸುಧಾರಿಸುತ್ತದೆ. ನಿಮ್ಮ ಹೆತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ.

### ವೃಶ್ಚಿಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

### ಧನು ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಮಕರ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ.

### ಕುಂಭ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸ ಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಕಲ್ಪನೆಗಳ ಹಿಂದೆ ಓಡಬೇಡಿ ಹಾಗೂ ಸಾಧ್ಯವಾದಷ್ಟೂ ವಾಸ್ತವವಾದಿಗಳಾಗಿರಿ.

### ಮೀನ ರಾಶಿ

ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು – ಯಾವುದೇನಿರ್ಧಾರ ಕೈಗೊಳ್ಳುವ ಮೊದಲು ಸಮತೋಲಿತ ನೋಟ ಹೊಂದಿ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ ಆದರೆ ರಾತ್ರಿಯ ಸಮಯದಲ್ಲಿ ಯಾವುದೊ ಹಳೆಯ ವಿಷ್ಯದ ಬಗ್ಗೆ ನೀವು ಜಗಳವಾಡಬಹುದು.

# ಹೋರಾಟಕ್ಕೆ ಖಡ್ಗ ಬೇಕಿಲ್ಲ, ಪೆನ್ನು ಬೇಕಿದೆ; ಕೆ. ಎಸ್ ಬಸಂತಪ್ಪ

**ದಾವಣಗೆರೆ :** ಮಹಿಳೆಯರು ತಮ್ಮ ಹಕ್ಕಿಗಾಗಿ ಖಡ್ಗದ ಬದಲು, ಪೆನ್ನು ಹಿಡಿದು ಜೋರಾಡಬೇಕು, ಶಾಸಕ ಕೆ.ಎಸ್. ಬಸವಂತಪ್ಪ ಕರೆನೀಡಿದರು.

ನಗರದ ಕುವೆಂಪು ಕನ್ನಡ ಭವನದಲ್ಲಿ ಗುರುವಾರ ನಡೆದ ವೀರರಾಣಿ ಕಿತ್ತೂರು ಚೆನ್ನಮ್ಮನ 2ಜಯಂತಿ ಹಾಗೂ ವಿಜಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು

'ರಾಣಿ ಚೆನ್ನಮ್ಮ ಕಷ್ಟಕಾಲದಲ್ಲಿ ಹೋರಾಡಿ ಸಾಮ್ರಾಜ್ಯ ಕಟ್ಟಿದ್ದರು. ಚೆನ್ನಮ್ಮನ ಹೋರಾಟ, ಆದರ್ಶ ಮುಂದಿನ ಪೀಳಿಗೆಗೆ ಸ್ಪೂರ್ತಿಯಾಗಬೇಕು. ಇಂದು ಹೋರಾಟಕ್ಕೆ ಖಡ್ಗ ಹಿಡಿವ ಅವಶ್ಯಕತೆ ಇಲ್ಲ, ಪೆನ್ನು ಹಿಡಿಯಬೇಕಿದೆ. ಚೆನ್ನಮ್ಮ ಎಲ್ಲಾ ಸಮಾಜದವರ ಒಳಿತಿಗಾಗಿ ಹೋರಾಡಿದರು. ಈಗ ಹೋರಾಟದಲ್ಲಿ ಬರೀ ಸ್ವಾರ್ಥ ತುಂಬಿದೆ. ಹೋರಾಟದಿಂದ ತಮಗೇನಾದರೂ ಲಾಭವಿದೆಯೇ ಎಂದು ಚಿಂತಿಸುವವರ ಸಂಖ್ಯೆ ಹೆಚ್ಚಿದೆ. ಮಹಿಳೆಯರ ಮೇಲಿನ ದೌರ್ಜನ್ಯ ತಡೆಯಲು ಎಲ್ಲರೂ ಹೋರಾಡಬೇಕು. ಮಾಜಿ ಸಚಿವೆ ನಾಗಮ್ಮ ಕೇಶವಮೂರ್ತಿ ಕಟ್ಟಿದ ಮಹಿಳಾ ಸಮಾಜದಂತೆ ಸಂಘ –ಸಂಸ್ಥೆಗಳು ಮಹಿಳೆಯರ ರಕ್ಷಣೆ ಮಾಡುವಂತಾಗಬೇಕು. ಪಂಚಮಸಾಲಿಗಳು ಲಿಂಗಾಯತರಲ್ಲಿ ಬಹುಸಂಖ್ಯಾತರಾಗಿದ್ದು, ಕೃಷಿಯಿಂದಲೇ ಜೀವನ ನಡೆಸುತ್ತಿದ್ದಾರೆ. ಬಡವರೇ ಹೆಚ್ಚಾಗಿದ್ದಾರೆ. ಸರ್ಕಾರಕ್ಕೆ ಒತ್ತಡಹಾಕಿ



ಪಂಚಮಸಾಲಿಗಳಿಗೆ ಕಾರ್ಯಕ್ರಮ ರೂಪಿಸಲು ಯತ್ನಿಸುವೆ. ಸಮಾಜದ ಪರ ಕೆಲಸ ಮಾಡುತ್ತೇನೆ, ಎಂದರು.

ಸಾಹಿತಿ ಡಾ. ದಾದಾಪೀರ್ ನವಿಲಿಹಾಳ್ ಉಪನ್ಯಾಸ ನೀಡಿ, ಗಂಡನಿಲ್ಲದೆಯೂ ರಾಣಿಯಾಗಬಹುದು ಎಂಬುದನ್ನು ತೋರಿಸಿದ್ದು ಚೆನ್ನಮ್ಮ. ಮಲ್ಲಸರ್ಜನಿಗೆ ಚೆನ್ನಮ್ಮ ಎರಡನೇ ಹೆಂಡತಿಯಾಗಿದ್ದಳು. ಆಂಗ್ಲರ ಆಳ್ವಿಕೆ ಮುಂದುವರಿಯಲು ಸಂಸ್ಥಾನಗಳ ಒಳಜಗಳ ಕಾರಣ. ಮಲ್ಲಸರ್ಜ ಮರಣಾನಂತರ ಚೆನ್ನಮ್ಮ ನೇರ ಆಡಳಿತದ ಚುಕ್ಕಾಣಿ ಹಿಡಿದಿದ್ದಳು. ರಾಣಿ ಚೆನ್ನಮ್ಮ ಕಟ್ಟಿಕೊಟ್ಟ ಪರಂಪರೆಯನ್ನು ನಾವು ಮುಂದುವರಿಸಬೇಕು. ಭೂತಕಾಲದ ಸುಳ್ಳುಗಳನ್ನು ವರ್ತಮಾನದ ಕಾಲಕ್ಕೆ ತಂದಿಡಬಾರದು. ನಮಗೆ ಅನ್ಯರ ಬಗ್ಗೆ ಕರುಣೆ, ಸಹಿಷ್ಣುತೆ ಇರಬೇಕು. ರಾಣಿ ಚೆನ್ನಮ್ಮ ಸಹನೆಯ ಪ್ರತಿನಿಧಿಯಾಗಿ ಕಂಡುಬರುತ್ತಾರೆ. ಮುಂದಿನ ಪೀಳಿಗೆಗೆ ರಾಷ್ಟ್ರೀಯತೆ ಕಟ್ಟಿಕೊಡಲು ಚೆನ್ನಮ್ಮನ ಬದುಕು ಸಹಕಾರಿ ಎಂದರು.

ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಸಿ. ಉಮಾಪತಿ, ಮಹನೀರ ಹೆಸರಿನಲ್ಲಿ ರಾಜಕೀಯ ಸಲ್ಲದು. ಸಮಾಜ ಒಡೆಯಬಾರದು, ನಾವೆಲ್ಲರೂ ಒಂದೇ ಎಂಬುದನ್ನು ತೋರಿಸಬೇಕು. ನಮ್ಮ ಮಕ್ಕಳಿಗೆ ಸಂಸ್ಕಾರ ಬೇಕಿದೆ. ಇತಿಹಾಸ ಅರ್ಥೈಸುವ ಕೆಲಸ ತಾಯಂದಿರಿಂದ ಆಗಬೇಕು, ಎಂದು ಕರೆ ನೀಡಿದರು.

ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾ ಘಟಕದ ಅಧ್ಯಕ್ಷ ಅಶೋಕ್ ಗೋಪನಾಳ್, ರಾಣಿ ಚೆನ್ನಮ್ಮ ಮೂರ್ತಿ ಪ್ರತಿಮೆ ಇಂದಿಗೂ ಆಗಿಲ್ಲ. ಪ್ರತಿಮೆ ನಿರ್ಮಾಣಕ್ಕೆ ಸಮಾಜ ಬಾಂಧವರು ಹಣ ಹಾಕಿ, ಚೆನ್ನಮ್ಮ ಮೂರ್ತಿ ನಿರ್ಮಿಸೋಣ. ಜನ ಕೇವಲ ಶ್ರೀಮಂತರ ಹಿಂದೆ ಹೋಗುವುದಿಲ್ಲ ಜನಸಾಮಾನ್ಯರಿಗೂ ಸ್ಪಂದಿಸುತ್ತಾರೆ ಎಂಬುದು ಇಂದು ಸಾಬೀತಾಗಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರ ಸಂದೇಶವನ್ನು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ವಾಚಿಸಿದರು.

ವರಾಣಿ ಚೆನ್ನಮ್ಮನ ಜೀವನ ಸಾಧನೆ ಕುರಿತು ನಡೆಸಿದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಜಿಲ್ಲಾಧಿಕಾರಿ ಕೆ. ಎಂ ಗಂಗಾಧರ ಸ್ವಾಮಿ, ಮಾಜಿ ಶಾಸಕ ನಂದಿಹಳ್ಳಿ ಹಾಲಪ್ಪ, ದೂಡಾ ಅಧ್ಯಕ್ಷ ಕೆ ಶೆಟ್ಟಿ ದೂಡ ಸದಸ್ಯೆ ವಾಣಿ ಬಕ್ಕೇಶ್, ಲಿಂಗಾಯತ ಪಂಚಮಸಾಲಿ ಟ್ರಸ್ಟ್ ದಾವಣಗೆರೆ ಜಿಲ್ಲಾಧ್ಯಕ್ಷ ಚಿಕ್ಕ ಮೇಗಳಗೆರೆ ಚನ್ನಬಸಪ್ಪ, ಯುವ ಘಟಕದ ಅಧ್ಯಕ್ಷ ಅಭಿ ಕಾಟನ್ ಬಕ್ಕೇಶ್, ಕ್ಯಾರಕಟ್ಟೆ ಗೌಡ್ರು,

ಮತ್ತು ಪಂಚಮಸಾಲಿ ಸಮಾಜದ ವಿವಿಧ ಘಟಕಗಳ ಅಧ್ಯಕ್ಷರು, ಸದಸ್ಯರು ಇದ್ದರು.

## ಕಲಾಕುಂಚದಿಂದ ಮೈಸೂರು ಶಾಖೆಯ ಅಧ್ಯಕ್ಷರಾಗಿ ಡಾ. ನಾಗರಾಜ್ ವಿ. ಬೈರಿ ಆಯ್ಕೆ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಮೈಸೂರು ಶಾಖೆಯ ಅಧ್ಯಕ್ಷರಾಗಿ ಡಾ. ನಾಗರಾಜ್ ವಿ. ಬೈರಿ ಆಯ್ಕೆಯಾಗಿದ್ದಾರೆ ಎಂದು ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಉಪಾಧ್ಯಕ್ಷರಾಗಿ ನ.ಗಂಗಾಧರಪ್ಪ, ಪ್ರಧಾನ ಕಾರ್ಯದರ್ಶಿ ಶ್ರೀಮತಿ ಸಂಗೀತ ಪ್ರಸನ್ನ ನಾಡಿಗ್, ಖಜಾಂಚಿಯಾಗಿ ಪಿ.ಸಿದ್ದೇಶ್ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಚಂದ್ರಶೇಖರ್, ಸಂತೋಷ್‌ಕುಮಾರ್, ಪ್ರಭು ಕೆ., ವೆಂಕಟೇಶ್ ಎಸ್.ವೆಂಕಟೇಶ್, ಮಹಾದೇವ್, ಶ್ರೀಮತಿ ವಂದನಾ ಶ್ರೀಧರ್‌ನಾಯಕ್, ಮಹಾಬಲೇಶ್ವರ ಬೈರಿ ಅಯ್ಕೆಯಾಗಿದ್ದಾರೆ. ಸದ್ಯದಲ್ಲೆ ಕಲಾಕುಂಚ ಮೈಸೂರು ಶಾಖೆ ಉದ್ಘಾಟನೆಯ ಜೊತೆಗೆ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಪರೀಕ್ಷೆಯ ಪೂರ್ವಭಾವಿ ಸಿದ್ಧತಾ ಉಚಿತ ಕಾರ್ಯಾಗಾರ ನಡೆಯಲಿದೆ ಎಂದು ದಾವಣಗೆರೆಯ ಕಲಾಕುಂಚದ



ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಪ್ರಕಟಿಸಿದ್ದಾರೆ.

## ಅಪಘಾತ ವಿಮೆ ನೀಡದೆ ಸೇವಾ ನ್ಯೂನತೆ: ಬಡ್ಡಿ ಸಹಿತ ನೀಡಲು ಆದೇಶ

**ಚಿಕ್ಕಮಗಳೂರು:** ಅಪಘಾತವಾದ ವಾಹನದ ವಿಮೆ ಮೊತ್ತವನ್ನು ನೀಡದೆ ಸೇವಾ ನ್ಯೂನತೆ ಎಸಗಿದ ಆರೋಪದಲ್ಲಿ ದಿ ನ್ಯೂ ಇಂಡಿಯಾ ಅಶ್ಯುರೆನ್ಸ್ ಕಂಪನಿಯ ವಿರುದ್ಧ ತೀರ್ಪು ನೀಡಿರುವ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ವಿಮಾ ಮೊತ್ತವನ್ನು ಬಡ್ಡಿ ಸೇರಿಸಿ ನೀಡುವಂತೆ ಹಾಗೂ ಪರಿಹಾರ ಮತ್ತು ಖರ್ಚು–ವೆಚ್ಚವನ್ನು ಗ್ರಾಹಕನಿಗೆ ನೀಡುವಂತೆ ಆದೇಶ ನೀಡಿದೆ.

ಕಳಸದ ಹಿರೇಬೈಲು ಇಡಕಣಿ ಬೂದಿಗುಂಡಿಯ ಅಶ್ವಿನಿ ಎಂಬುವವರು ದಿ ನ್ಯೂ ಇಂಡಿಯಾ ಅಶ್ಯುರೆನ್ಸ್ ಕಂಪನಿಯಿಂದ ತಮ್ಮ ಮಾಲೀಕತ್ವದ ಹುಂಡೈ ಐ20 ವಾಹನಕ್ಕೆ ವಿಮೆ ಪಡೆದುಕೊಂಡಿದ್ದರು. ಈ ವಾಹನವು 2024ರ ಆಗಸ್ಟ್ 8 ರಂದು ಅಪಘಾತಕ್ಕೀಡಾಗಿತ್ತು. ಈ ಹಿನ್ನೆಲೆಯಲ್ಲಿ ಅಶ್ವಿನಿಯವರು ಕಂಪನಿಯಿಂದ ವಿಮಾ ಪರಿಹಾರವನ್ನು ನೀಡುವಂತೆ ಕೋರಿದ್ದರು. ಆದರೆ ಕಂಪನಿಯ ಬೆಂಗಳೂರಿನ ಎರಡು ಕಡೆಯ ಇಬ್ಬರು ವ್ಯವಸ್ಥಾಪಕರು ಹಾಗೂ ಮಂಗಳೂರು ವ್ಯವಸ್ಥಾಪಕರ ವಿರುದ್ಧ ನಗರದ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಕಳೆದ ಏಪ್ರಿಲ್ 9 ರಂದು ಅಶ್ವಿನಿ ದೂರು ಸಲ್ಲಿಸಿದ್ದರು.ಈ ಬಗ್ಗೆ ವಿಚಾರಣೆ ನಡೆಸಿದ ಆಯೋಗವು ಸೆಪ್ಟಂಬರ್ 23 ರಂದು ಕಂಪನಿಯು ಸೇವಾ ನ್ಯೂನತೆ ಎಸಗಿರುವುದನ್ನು ಖಾತ್ರಿಪಡಿಸಿದ್ದು, ಕಂಪನಿಯು ವಾಹನವನ್ನು ತನ್ನ ವಶಕ್ಕೆ ಪಡೆದುಕೊಂಡು ವಾಹನದ ವಿಮಾ ಮೊತ್ತ ರೂ.2,00,000 ಗಳನ್ನು ವಾರ್ಷಿಕ ಶೇ.9ರ ಬಡ್ಡಿ ಸೇರಿಸಿ ನೀಡುವಂತೆಯೂ, ರೂ.30,000 ಗಳನ್ನು ಪರಿಹಾರವಾಗಿ ನೀಡುವಂತೆ ಹಾಗೂ ಪ್ರಕರಣದ ಖರ್ಚು–ವೆಚ್ಚವೆಂದು ರೂ. 10,000 ಗಳನ್ನು ದೂರುದಾರರಿಗೆ ನೀಡುವಂತೆ ಆದೇಶಿಸಿದೆ.ಅಧ್ಯಕ್ಷರಾದ ಎನ್.ಆರ್.ಚೆನ್ನಕೇಶವ, ಸದಸ್ಯರಾದ ಈ.ಪ್ರೇಮಾ ಮತ್ತು ಡಾ.ಮಂಜುನಾಥ ಎಂ.ಬಮ್ಮನಕಟ್ಟಿ ಇವರನ್ನು ಒಳಗೊಂಡ ಆಯೋಗವು ಪ್ರಕರಣದ ವಿಚಾರಣೆ ನಡೆಸಿ ಈ ತೀರ್ಪು ನೀಡಿದ್ದು, ವಿಮಾ ಕಂಪನಿಯ ಸೇವಾ ನ್ಯೂನತೆಯನ್ನು ಎತ್ತಿ ಹಿಡಿದಿದ್ದಾರೆ. ದೂರುದಾರರ ಪರವಾಗಿ ವಕೀಲರಾದ ಹಳೆಕೋಟೆ ಎ.ತೇಜಸ್ವಿ ವಾದ ಮಂಡಿಸಿದ್ದರು.

## ಡಿ.13 ರಂದು ರಾಷ್ಟ್ರೀಯ ಲೋಕ ಅದಾಲತ್

**ಚಿಕ್ಕಮಗಳೂರು:** ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಡಿಸೆಂಬರ್ 13 ರಂದು ರಾಷ್ಟ್ರೀಯ ಲೋಕ ಅದಾಲತ್ ಅನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಂಬಂಧ ಹೆಚ್ಚಿನ ಸಂಖ್ಯೆಯಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸುವ ಕುರಿತು ಹಾಗೂ ಜಿಲ್ಲಾದ್ಯಂತ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಪೂರ್ವಭಾವಿ ಲೋಕ ಅದಾಲತ್ ಬೈಠಕ್‌ಗಳನ್ನು ನಡೆಸಲಾಗುತ್ತಿದೆ.

ಈ ಲೋಕ್ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕಕ್ಷಿದಾರರು ಇಚ್ಛಿಸಿದ್ದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳಿಗೆ ಆನ್‌ಲೈನ್, ವೀಡಿಯೋ ಕಾನ್ಸರೆನ್ಸ್, ಇ–ಮೇಲ್, ಎಸ್.ಎಂ.ಎಸ್., ವಾಟ್ಸ್‌ಆಪ್, ಎಲೆಕ್ಟ್ರಾನಿಕ್ ಮೋಡ್ ಮುಖಾಂತರ ಸಂಪರ್ಕಿಸಿ ಮಾಹಿತಿ ಪಡೆದು ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಕೋರಲಾಗಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 08262–295321 ಅಥವಾ dlsa.chikkamagaluru@yahoo.com <mailto:dlsa.chikkamagaluru@yahoo.com> ಅನ್ನು ಸಂಪರ್ಕಿಸಬಹುದು.

ಲೋಕ್ ಅದಾಲತ್‌ನಿಂದ ಪ ್ರಯೋಜನಗಳು: ಪ್ರಕರಣಗಳನ್ನು ಜನತಾ ನ್ಯಾಯಾಲಯದಲ್ಲಿ ಶೀಘ್ರವಾಗಿ ಇತ್ಯರ್ಥಗೊಳಿಸಿಕೊಳ್ಳಲು ಕಕ್ಷಿದಾರರೇ ನೇರವಾಗಿ ಅಥವಾ ವಕೀಲರ ಮೂಲಕ ಭಾಗವಹಿಸಬಹುದು. ನ್ಯಾಯಾಲಯಗಳಲ್ಲಿ ಉಭಯ ಪಕ್ಷಕಾರರು ರಾಜೀ ಮಾಡಿಕೊಳ್ಳಲು ಮಾರ್ಗದರ್ಶನ ಮಾಡಲಾಗುವುದು. ಉಭಯ ಕಡೆಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ಬಗೆಹರಿಯುತ್ತದೆ. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು (ವ್ಯಾಜ್ಯ ಪೂರ್ವ ಪ್ರಕರಣಗಳು) ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ವ್ಯಾಜ್ಯ ಪೂರ್ವ ಪ್ರಕರಣಗಳಲ್ಲಿ ನ್ಯಾಯಾಲಯ ಶುಲ್ಕ (ಕೋರ್ಟ್ ಫೀ) ಕೊಡಬೇಕಾಗಿಲ್ಲ. ರಾಜಿ ಸಂಧಾನದ ಮೂಲಕ ಪ್ರಕರಣವನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಪೂರ್ಣವಾಗಿ ಹಿಂತಿರುಗಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ನಿಮಗೆ ಒಪ್ಪಿಗೆಯಾದಲ್ಲಿ ಮಾತ್ರ ಕಕ್ಷಿದಾರರು ರಾಜೀ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು, ಹಿರಿಯ ಸಿವಿಲ್ ನ್ಯಾಯಾಧೀಶರಾದ ವಿ.ಹನುಮಂತಪ್ಪ ಅವರು ತಿಳಿಸಿದ್ದಾರೆ.

## ಒಂದು ದಿನದ ಅಂತರ ಪೀಳಿಗೆಯ ಬಾಂಧವ್ಯ ಮೇಳ

**ದಾವಣಗೆರೆ :** ಅಕ್ಟೋಬರ್ 26 ರಂದು ಬೆಳಿಗ್ಗೆ 10.30ಕ್ಕೆ ನಗರದ ಬಾಪೂಜಿ ಸ್ಕೂಲ್ ಮೈದಾನದಲ್ಲಿ ಒಂದು ದಿನದ ಅಂತರ ಪೀಳಿಗೆಯ ಬಾಂಧವ್ಯ ಮೇಳದ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ, ರಾಜ್ಯ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಹಾಗೂ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಲಾದ ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣನವರ ಉದ್ಘಾಟಿಸುವರು.

ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷರು ಹಾಗೂ ದಾ.ಜಿ.ಹಿ ನಾ.ಸಂಘದ ಅಧ್ಯಕ್ಷರಾದ ಎಸ್.ಗುರುಮೂರ್ತಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಡಾ.ವೀರಯ್ಯ, ಹಿ.ನಾ.ಸಹಾಯವಾಣಿ ಕೇಂದ್ರದ ಕಾರ್ಯದರ್ಶಿ ಮರಿಯಾಚಾರ್.ಕೆ.ಪಿ, ವಕೀಲರ ಸಂಘದ ಮಾಜಿ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್ ಭಾಗವಹಿಸುವರು.

## ಕನ್ನಡ ರಾಜ್ಯೋತ್ಸವದಂದು ರಾಷ್ಟ್ರಧ್ವಜದ ಜೊತೆಗೆ ನಾಡ ಧ್ವಜಾರೋಹಣಕ್ಕೆ ಕ್ರಮ



**ಚನ್ನಪಟ್ಟಣ :** ನವೆಂಬರ್ 1 ರ ಕನ್ನಡ ರಾಜ್ಯೋತ್ಸವದಂದಯ ಜಿಲ್ಲೆಯಲ್ಲಿ ಜಿಲ್ಲಾಡಳಿತ ನಡೆಸುವ ರಾಷ್ಟ್ರಧ್ವಜದ ಜೊತೆಗೆ ನಾಡಧ್ವಜಾರೋಹಣ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ಯಶವಂತ್ ಗುರುಕರ್ ಅವರು ಭರವಸೆ ನೀಡಿದ್ದಾರೆ.

ಕನ್ನಡ ನಾಡಿನಲ್ಲಿ ರಾಜ್ಯೋತ್ಸವದ ದಿನ ನಾಡ ಧ್ವಜಾರೋಹಣ ಮಾಡಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲೆಯ ಕನ್ನಡಪರ ಸಂಘಟನೆಗಳು ಈ ಬಗ್ಗೆ ಧ್ವನಿ ಎತ್ತ ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ನಡೆದ ಕನ್ನಡಪರ ಸಂಘಟನೆಗಳ ಜಿಲ್ಲಾಧ್ಯಕ್ಷರುಗಳ ಸಭೆಯಲ್ಲಿ ಜಿಲ್ಲಾಧಿಕಾರಿಗಳು ಈ ಬಗ್ಗೆ ಸಂಘಟನೆಗಳ ಅಭಿಪ್ರಾಯ ಪಡೆದು ನವೆಂಬರ್ 1 ರಂದು ಜಿಲ್ಲೆಯ ಜಿಲ್ಲಾಡಳಿತ ನಡೆಸುವ ರಾಷ್ಟ್ರ ಧ್ವಜಾರೋಹಣದ ಜೊತೆಗೆ ನಾಡ ಧ್ವಜಾರೋಹಣ (ಕನ್ನಡಬಾವುಟ) ಮಾಡಲು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿಗಳು ಭರವಸೆ ನೀಡಿದರು.

ಇದಕ್ಕೂ ಮುನ್ನ ಕನ್ನಡಪರ ಸಂಘಟನೆಗಳ ಜಿಲ್ಲಾಧ್ಯಕ್ಷರುಗಳು ಹಾಗೂ ಪದಾಧಿಕಾರಿಗಳು ಎಡಿಸಿ ಚಂದ್ರಯ್ಯ ಅವರ ಬಳಿ ಈ ಬಗ್ಗೆ ಚರ್ಚೆ ಮಾಡಿದ್ದರು. ಜೊತೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸತೀಶ್ ಬಳಿ ಸಹ ಸಭೆ ಮಾಡಿ ಚರ್ಚೆ ಮಾಡಿ ಬೇರೆ ಜಿಲ್ಲೆಗಳಲ್ಲಿ ನವೆಂಬರ್ 1 ರಂದು ಕನ್ನಡ ಬಾವುಟ ಹಾರಿಸುವ ಬಗ್ಗೆ ಮನವರಿಕೆ ಮಾಡಿಕೊಟ್ಟು ನಮ್ಮ ಜಿಲ್ಲೆಯಲ್ಲಿ ಸಹ ಕನ್ನಡ ಬಾವುಟ ಹಾರಿಸಲು ಕ್ರಮ ಕೈಗೊಳ್ಳಿ ಎಂದು ಮನವಿ ಮಾಡಲಾಯಿತು. ಅಂತಿಮವಾಗಿ ಜಿಲ್ಲಾಧಿಕಾರಿಗಳು ಈ ಬಗ್ಗೆ ಅಧಿಕಾರಿಗಳು ಮತ್ತು ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳ ಜೊತೆ ಚರ್ಚೆ ಮಾಡಿ ಕನ್ನಡ ರಾಜ್ಯೋತ್ಸವದಂದು ರಾಷ್ಟ್ರಧ್ವಜದ ಜೊತೆಗೆ ಕನ್ನಡ ಬಾವುಟ ಹಾರಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಕಕಜವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೇಶ್‌ಗೌಡ, ಕಸಾಪ ಜಿಲ್ಲಾಧ್ಯಕ್ಷ ಬಿ.ಟಿ. ನಾಗೇಶ್, ಪ್ರೊ. ಶಿವನಂಜೇಗೌಡ, ಕರುನಾಡ ಸೇನೆಯ ರಾಜ್ಯ ಉಪಾಧ್ಯಕ್ಷ ಜಗದೀಶ್, ಕರವೆ ಪ್ರವೀಣ್‌ಶೆಟ್ಟಿ ಬಣದ ಜಿಲ್ಲಾಧ್ಯಕ್ಷ ರಾಜು ಎಂ.ಎನ್. ಆರ್, ಕರವೇ ಸ್ವಾಭಿಮಾನಿ ಬಣದ ರಾಜ್ಯ ಉಸ್ತುವಾರಿ ಶಿವುಗೌಡ, ಜಿಲ್ಲಾಧ್ಯಕ್ಷ ಕಿರಣ್, ಕಾರ್ಯಾಧ್ಯಕ್ಷ ಲೋಕೇಶ್, ಮಾಗಡಿ ತಾಲ್ಲೂಕು ಅಧ್ಯಕ್ಷ ವಿನೋದ್‌ರಾಜ್, ಜಿಲ್ಲಾಧ್ಯಕ್ಷ ಜೈಕುಮಾರ್, ತಾಲ್ಲೂಕು ಅಧ್ಯಕ್ಷ ಗಂಗಾಧರ್, ಸಂಘಟನಾ ಕಾರ್ಯದರ್ಶಿ ಜಗದಾಪುರ ಕೃಷ್ಣೇಗೌಡ, ಬಿಳಗುಂಬ ದಿನೇಶ್, ಸುರೇಶ್, ಚೇತನ್‌ಕುಮಾರ್, ಅರುಣ್‌ಕುಮಾರ್, ಜಯಮ್ಮ, ಕುಮಾರ್,

**ನವೆಂಬರ್ 1 ರಂದು ಜಿಲ್ಲೆಯ ಜಿಲ್ಲಾಡಳಿತ ನಡೆಸುವ ರಾಷ್ಟ್ರ ಧ್ವಜಾರೋಹಣದ ಜೊತೆಗೆ ನಾಡ ಧ್ವಜಾರೋಹಣ (ಕನ್ನಡಬಾವುಟ) ಮಾಡಲು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿಗಳು ಭರವಸೆ ನೀಡಿದರು.**

## ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶ ಮಂಡಳಿ ಕಚೇರಿಯ ಉದ್ಘಾಟನಾ ಸಮಾರಂಭ

**ದಾವಣಗೆರೆ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಿಗಟೇರಿ ಜಿಲ್ಲಾ ಆಸ್ಪತ್ರೆ ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಅ.24 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಮಾನಸಿಕ ಆರೋಗ್ಯ ವಿಭಾಗ ಜಿಲ್ಲಾ ಆಸ್ಪತ್ರೆ ಇಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿ ಕಚೇರಿಯ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಅಧ್ಯಕ್ಷರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ ಉದ್ಘಾಟಿಸುವರು. ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಅಧೀಕ್ಷಕರಾದ ಡಾ.ನಾಗೇಂದ್ರಪ್ಪ ಎಂ.ಬಿ ಅಧ್ಯಕ್ಷತೆ ವಹಿಸುವರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣನವರ ಘನ ಉಪಸ್ಥಿತರಾಗಿರುವರು.

ಮುಖ್ಯ ಅತಿಥಿಗಳಾಗಿ ಅಪರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಸದಸ್ಯರಾದ ಶೀಲವಂತ ಶಿವಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ಮಂಜುನಾಥ ಎಲ್. ಪಾಟೀಲ್, ಜಿಲ್ಲಾ ಆಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ. ನಾಗವೇಣಿ, ಜಿಲ್ಲಾ ಆಸ್ಪತ್ರೆಯ ಮನೋರೋಗ ತಜ್ಞರಾದ ಡಾ.ಮರುಳಸಿದ್ದಪ್ಪ.ಪಿ.ಎಂ, ಮನೋರೋಗ ವಿಭಾಗದ ಮುಖ್ಯಸ್ಥರಾದ ಡಾ.ಅನುಪಮ, ಡಾ.ಮೃತ್ಯುಂಜಯ, ವೈದ್ಯಾಧಿಕಾರಿ ಡಾ.ಸುಧೀಂದ್ರ, ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಸದಸ್ಯರಾದ ಬಿ.ನಾಗಮ್ಮ, ಶಂಕರಮ್ಮ ಭಾಗವಹಿಸುವರು.

## ಕೃಷಿ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬಳ್ಳಾರಿ:** ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರಿನ 17ನೇ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ಕಲ್ಯಾಣ ಕರ್ನಾಟಕ ಭಾಗದ ಅತ್ಯುತ್ತಮ ಸಾಧನೆಗೈದ ಪ್ರಗತಿಪರ ಕೃಷಿಕರಿಗೆ ಕೃಷಿ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಲು 2024-25ನೇ ಸಾಲಿಗೆ ಕಲ್ಯಾಣ ಕರ್ನಾಟಕ ಭಾಗದ ಅರ್ಹರಿಂದ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಹಾಗೂ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು ಇಲ್ಲಿ ಪಡೆಯಬಹುದು.

ಅರ್ಜಿಯನ್ನು ವಿಶ್ವವಿದ್ಯಾಲಯದ ವೆಬ್ ಸೈಟ್ https://uasraichur.karnataka.gov.in ನಲ್ಲಿ ಸಹ ಪಡೆಯಬಹುದು.

ಆಸಕ್ತ ರೈತರು ಸಂಬಂಧಿಸಿದ ಎಲ್ಲಾ ದಾಖಲೆಗಳೊಂದಿಗೆ ಅರ್ಜಿಯನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರಗಳ ಮುಖ್ಯಸ್ಥರಿಗೆ ಅಥವಾ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರಗಳ ಮುಖ್ಯಸ್ಥರ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನವೆಂಬರ್ 10 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ ಅಥವಾ ಮೊ. 9480696314 ಗೆ ಸಂಪರ್ಕಿಸಬಹುದು ಎಂದು ರಾಯಚೂರು ಕೃ.ವಿ.ವಿ. ವಿಸ್ತರಣಾ ನಿರ್ದೇಶಕರು ತಿಳಿಸಿದ್ದಾರೆ.

## ಅ.27 ರಂದು ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ

**ಶಿವಮೊಗ್ಗ:** ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು ಮತ್ತು ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಅ.27 ರಂದು ಮದ್ಯಾಹ್ನ 1.30ಕ್ಕೆ ಜಿಲ್ಲಾ ಪಂಚಾಯತ್ ಶ್ರೀ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ 2025-26ನೇ ಸಾಲಿನ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಶಿವಮೊಗ್ಗ ಮೆಸ್ಕಾಂ ನಗರ ಉಪವಿಭಾಗ-3, ಗುಡ್‌ಲಕ್ ಸರ್ಕಲ್ ಹತ್ತಿರ, ಎಸ್.ವಿ.ಬಡಾವಣೆ, ಮೆಸ್ಕಾಂ ಕಛೇರಿಯಲ್ಲಿ ಅ 24 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ ;9480841339.

## ಜಿಲ್ಲಾ ಮಟ್ಟದ ಯುವಜನೋತ್ಸವ

**ಚಿಕ್ಕಮಗಳೂರು:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರೂ ಯುವ ಕೇಂದ್ರದ ಸಹಯೋಗದಲ್ಲಿ ಅಕ್ಟೋಬರ್ 28 ರಂದು ನಿಗದಿಪಡಿಸಲಾಗಿದ್ದ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಮುಂದೂಡಿ ನವೆಂಬರ್ 4 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕುವೆಂಪು ಕಲಾ ಮಂದಿರದಲ್ಲಿ ಆಯೋಜಿಸಲಾಗಿದೆ.

ಜಿಲ್ಲೆಯ ಎಲ್ಲ ತಾಲ್ಲೂಕುಗಳ ಯುವಜನರಿಗೆ ಜನಪದ ನೃತ್ಯ, ಜನಪದ ಗೀತೆ, ಕಥೆ ಬರೆಯುವುದು, ಕವಿತೆ ಬರೆಯುವುದು, ಘೋಷಣೆ, ಚಿತ್ರಕಲೆ, ವಿಜ್ಞಾನ ಮೇಳ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶವಿದೆ. 15 ರಿಂದ 29ರ ವಯೋಮಿತಿಯ ಎಲ್ಲ ಯುವಕ, ಯುವತಿಯರು ಈ ಸ್ಪರ್ಧಾ ಕಾರ್ಯಕ್ರಮದಲ್ಲಿ ಮುಕ್ತವಾಗಿ ಭಾಗವಹಿಸಬಹುದು. ಆಸಕ್ತ ಯುವಜನರು ತಮ್ಮ ಹೆಸರು, ವಿಳಾಸ, ವಯಸ್ಸಿನ ಪ್ರಮಾಣಪತ್ರ ಸಹಿತ ಭಾಗವಹಿಸುವ ಸ್ಪರ್ಧೆ ವಿವರಗಳೊಂದಿಗೆ ನವೆಂಬರ್ 4 ರಂದು ಬೆಳಿಗ್ಗೆ 9.30 ಗಂಟೆಯೊಳಗೆ ಕುವೆಂಪು ಕಲಾ ಮಂದಿರದಲ್ಲಿ ವರದಿ ಮಾಡಿಕೊಳ್ಳಲು ಕೋರಲಾಗಿದೆ. ವಿಜೇತರಿಗೆ ಪಾರಿತೋಷಕ, ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಕಚೇರಿ ವೇಳೆಯಲ್ಲಿ (ದೂರವಾಣಿ ಸಂಖ್ಯೆ:-08262-295724) ಸಂಪರ್ಕಿಸಬಹುದು. ವಿಜ್ಞಾನ ಮೇಳಕ್ಕೆ ಸಂಪರ್ಕಿಸಬೇಕಾದ ಸಂಖ್ಯೆ: 7892442286 ಹಾಗೂ ಚಿತ್ರಕಲೆ ಸ್ಪರ್ಧೆಗೆ ಸಂಪರ್ಕಿಸಬೇಕಾದ ಸಂಖ್ಯೆ: 6360448844 ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

### ಸ್ವಾಭಿಮಾನದ ಪ್ರತೀಕ ವೀರರಾಣಿ ಕಿತ್ತೂರು ಚನ್ನಮ್ಮ

# ಸ್ವಾತಂತ್ರ ಸಂಗ್ರಾಮದ ಬೆಳ್ಳಿ ಚುಕ್ಕಿ. ಧೈರ್ಯ, ನ್ಯಾಯ ಮತ್ತು ಮಹಿಳಾ ಶಕ್ತಿಯ ಪ್ರತಿರೂಪ

**ಗದಗ:** ವೀರರಾಣಿ ಕಿತ್ತೂರು ಚನ್ನಮ್ಮ ಸ್ವಾಭಿಮಾನದ ಪ್ರತೀಕ. ಸ್ವಾತಂತ್ರ ಸಂಗ್ರಾಮದಲ್ಲಿ ಬ್ರಿಟೀಷರೊಂದಿಗೆ ಧೈರ್ಯ, ಶೌರ್ಯದಿಂದ ಹೋರಾಡಿದ ವೀರಮಾತೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಗುರುವಾರ ಜರುಗಿದ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬ್ರಿಟೀಷರು ಪ್ರತಿ ವರ್ಷ ಬ್ರಿಟೀಷ್ ಸಾಮ್ರಾಜ್ಯಕ್ಕೆ ಇಂತಿಷ್ಟು ಕಪ್ಪ (ಕರ) ನೀಡಬೇಕೆಂದು ವಿವಿಧ ರಾಜರುಗಳಿಗೆ ಕರಾರು ಹಾಕಿದರು. ಭಾರತದಲ್ಲಿಯ ರಾಜ್ಯಗಳ ರಾಜರಿಂದ ಬ್ರಿಟೀಷರು ಈ ರೀತಿ ಕಪ್ಪವನ್ನು ವಸೂಲು ಮಾಡುತ್ತಿದ್ದರು. ಆದರೆ ಕಿತ್ತೂರು ವೀರರಾಣಿ ಚನ್ನಮ್ಮ ಮಾತ್ರ ಬ್ರಿಟೀಷರಿಗೆ " ನಿಮಗೇಕೆ ಕೊಡಬೇಕು ಕಪ್ಪ. ನೀವೇನು ಒಡಹುಟ್ಟಿದವರಾ ? ಅಣ್ಣತಮ್ಮಂದಿರಾ? ನೀವೇನು ಉತ್ತಿ ಬಿತ್ತೀದ್ದೀರಾ ಎಂದು ಬ್ರಿಟೀಷರಿಗೆ ಎಚ್ಚರಿಕೆ ನೀಡಿದರು. ಕ್ರಿ.ಶ. 1824 ರಲ್ಲಿ ಬ್ರಿಟೀಷರ ವಿರುದ್ಧ ತನ್ನ ಸಾಮ್ರಾಜ್ಯವನ್ನು ಉಳಿಸಿಕೊಳ್ಳಲು ವೀರಾವೇಶದಿಂದ ಹೋರಾಡಿದ ದಿಟ್ಟ ಮಹಿಳೆ. ರಾಣಿ ಚನ್ನಮ್ಮಳ ಧರ್ಯ, ಸಾಹಸ ಎಲ್ಲರಿಗೂ ಮಾದರಿ ಎಂದರು.

ಭಾರತ ಸ್ವಾತಂತ್ರ ಹೋರಾಟದಲ್ಲಿ ಅಪ್ರತಿಮ ಹೋರಾಟವನ್ನು ಮಾಡಿ ಬ್ರಿಟೀಷರ ಸದೆಬಡೆದ ಕೆಚ್ಚೆದೆಯ ಹೋರಾಟಗಾರ್ತಿ ಹಾಗೂ ಕನ್ನಡ ನಾಡಿನ ವೀರಮಹಿಳೆ, ಅಪ್ರತಿಮ ದೇಶಭಕ್ತೆ, ಕಿತ್ತೂರ ಸಂಸ್ಥಾನದ ಮಹಾರಾಣಿ ಕಿತ್ತೂರು ರಾಣಿಚನ್ನಮ್ಮ ಅವರ ಧೈರ್ಯ, ಶೌರ್ಯ, ಸ್ವಾಭಿಮಾನ ನಮ್ಮೆಲ್ಲರಿಗೂ ಸ್ಪೂರ್ತಿದಾಯಕ ಎಂದು ರಾಣಿ ಚನ್ನಮ್ಮ ಅವರ ಹೋರಾಟದ ದಿಟ್ಟತನವನ್ನು



ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಬಣ್ಣಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಮಾತನಾಡಿ ವೀರರಾಣಿ ಕಿತ್ತೂರು ಚನ್ನಮ್ಮ ದೇಶದ ಸ್ವಾತಂತ್ರ ಕ್ಕಾಗಿ ಬ್ರಿಟೀಷರ ವಿರುದ್ಧ ಧರ್ಯದಿಂದ ಹೋರಾಡಿದ ವೀರಮಾತೆ. ದೇಶಭಕ್ತಿಯ ಸಂಕೇತ. ಭವ್ಯ ಭಾರತದಲ್ಲಿ ಸ್ವಾತಂತ್ರ ಹೋರಾಟದ ಕಿಚ್ಚನ್ನು ಪಸರಿಸಿದ ಕೀರ್ತಿ ವೀರರಾಣಿ ಚನ್ನಮ್ಮ ಅವರಿಗೆ ಸಲ್ಲುತ್ತದೆ ಎಂದರು.

ನಾಡರಕ್ಷಣೆಗಾಗಿ ಬ್ರಿಟೀಷರ್ ವಿರುದ್ಧ ಕಚ್ಚೆ ಕಟ್ಟಿ ರಣಾಂಗಣದಲ್ಲಿ ದಿಟ್ಟ ಹೋರಾಟವನ್ನು ಮಾಡಿ ಬ್ರಿಟೀಷರಿಗೆ ನಡುಕ ಹುಟ್ಟಿಸಿದ ಸ್ವಾತಂತ್ರದ ದೃವತಾರೆ ಕಿತ್ತೂರ ರಾಣಿ ಚನ್ನಮ್ಮ ಅವರ ಹೋರಾಟ ಅವರೊಂದಿಗೆ ಅಂತ್ಯವಾಗದೇ ಸ್ವಾತಂತ್ರ ದ ಕಿಚ್ಚು ಬೃಹದಾಕಾರವಾಗಿ ಬೆಳೆಯಲು ನಾಂದಿ ಹಾಡಿತು ಎಂದು ಹೇಳಿದರು.

ಗಣ್ಯರಾದ ವಿಜಯಕುಮಾರ ಗಡ್ಡಿ ಮಾತನಾಡಿ ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಸರ್ಕಾರದಿಂದ ಆಚರಿಸುತ್ತಿರುವುದು ಸಂತಸದ ವಿಷಯ. ಕನ್ನಡ ನಾಡಿನ ಜನರು ಹೆಮ್ಮೆ ಪಡುವ ವಿಷಯವಾಗಿದೆ. ಕಿತ್ತೂರು ರಾಣಿ ಚನ್ನಮ್ಮನವರು ಭಾರತದ ಸ್ವಾತಂತ್ರ ದ ಪ್ರಪ್ರಥಮ ಮಹಿಳಾ ಹೋರಾಟಗಾರತಿ. ಇವರ ಶರ್ಯ, ತ್ಯಾಗಎಲ್ಲ ಮಹಿಳೆಯರಿಗೂ ಪ್ರೇರಣೆಯಾಗಿವೆ ಎಂದರು.

ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಮಾತನಾಡಿ ವೀರರಾಣಿ ಕಿತ್ತೂರ ಚನ್ನಮ್ಮ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರ ಶೌರ್ಯ, ಮಾನವೀಯ ಮೌಲ್ಯಗಳ ಕುರಿತು ಈಗಿನ ಮಕ್ಕಳಿಗೆ ತಿಳುವಳಿಕೆ ನೀಡಬೇಕು. ಮಕ್ಕಳಿಗೆ ಆತ್ಮಸ್ಥೈರ್ಯ ವೃದ್ಧಿಸಲು ಕರಾಟೆ, ಕುಸ್ತಿಗಳಂತಹ ಸ್ವಯಂ ರಕ್ಷಣಾ ಕಲೆಗಳನ್ನು ಕಲಿಸಬೇಕು ಎಂದರು.

ಅಗಡಿ ಇಂಜನೀಯರಿಂಗ್ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ.ಸೋಮಶೇಖರ ಕೆರಿಮನಿ ಉಪನ್ಯಾಸಕ ನೀಡುತ್ತಾ ಕಿತ್ತೂರು ಸಂಸ್ಥಾನದ ರಕ್ಷಣೆಗಾಗಿ ಹೋರಾಡಿದ ಪ್ರಥಮ ಸ್ವಾತಂತ್ರ ಸಂಗ್ರಾಮಕ್ಕೆ ನಾಂದಿ ಹಾಡಿದ ಮಹಿಳೆ ಚನ್ನಮ್ಮ. ಇದು ನಮಗೆಲ್ಲ ಅಭಿಮಾನದ ಸಂಗತಿಯಾಗಿದೆ. ಭವ್ಯ ಭಾರತದ ಇತಿಹಾಸದಲ್ಲಿ ಸ್ವಾತಂತ್ರ ದ ಹೊಸ ಕಲ್ಪನೆ ನೀಡಿದ ಪುಣ್ಯಭೂಮಿಯೇ ಕಿತ್ತೂರು ಸಂಸ್ಥಾನ. ಸತ್ತರೆ ವೀರ ಸ್ವರ್ಗ, ಉಳಿದರೆ ಕಿತ್ತೂರು ನೆಲ ಎಂದ ರಾಣಿ ಚನ್ನಮ್ಮ ಬ್ರೀಟೀಷರಿಗೆ ನಡುಕ ಹುಟ್ಟಿಸಿದ್ದಲ್ಲದೇ ಪ್ರಥಮ ಸ್ವಾತಂತ್ರ ಸಂಗ್ರಾಮದ ದೃವತಾರೆ ಎಂದು ಬಣ್ಣಿಸಿದರು.


ಕ್ರಿ.ಶ.1824 ರಲ್ಲಿ ಬ್ರಿಟೀಷರು ಕಿತ್ತೂರು ಸಾಮ್ರಾಜ್ಯಕ್ಕೆ ಆಕ್ರಮಣ ಮಾಡಲು ಬಂದಾಗ ತನ್ನ ರಾಜಕೀಯ ಚಾಣಾಕ್ಷತೆ, ಶೌರ್ಯ, ಸ್ಥೈರ್ಯದಿಂದ ನಾಡಿನ ರಕ್ಷಣೆಗಾಗಿ ಹೋರಾಡಿದ ಸ್ವಾತಂತ್ರ ಸಂಗ್ರಾಮದ ಬೆಳ್ಳಿಚುಕ್ಕಿಯಾಗಿದ್ದಾರೆ. ಹೆಣ್ಣು ಅಬಲೆಯಲ್ಲ, ಸಬಲೆ ಅವಳು ಮನಸ್ಸು ಮಾಡಿದರೆ ಹೊಸ ಇತಿಹಾಸಕ್ಕೆ ನಾಂದಿ ಹಾಡಬಲ್ಲಳು ಎನ್ನುವುದನ್ನು ತನ್ನ ನಾಡ ರಕ್ಷಣೆಗಾಗಿ ಪ್ರಾಣಾರ್ಪಣೆ ಮಾಡಿದ ವೀರರಾಣಿ ಕಿತ್ತೂರ ಚನ್ನಮ್ಮ ನಿಂದ ಕಲಿಯಬೇಕು . ವೀರರಾಣಿ ಕಿತ್ತೂರು ಚನ್ನಮ್ಮ ಅವರ ಜೀವನ ಚರಿತ್ರೆ ಹಾಗೂ ವೀರರಾಣಿಯ ಯಶೋಗಾಥೆಗಳನ್ನು ವಿವರಿಸಿದ ಪ್ರೊ. ಸೋಮಶೇಖರ ಕೆರಿಮನಿ ವೀರರಾಣಿ ಕಿತ್ತೂರು ಚನ್ನಮ್ಮ ಕುರಿತು ಅನೇಕ ಸಂಶೋಧನೆಗಳು ನಡೆದಿವೆ. ಕಿತ್ತೂರು ರಾಣಿ ಚನ್ನಮ್ಮ ಅವರ ಹೆಸರು ಅಜರಾಮರವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಹಾಗೂ ಸಮಾಜ ಸೇವೆಯಲ್ಲಿ ತೊಡಗಿದ ವಿವಿಧ ಸಾಧಕರನ್ನು ಸನ್ಮಾನಿಸಲಾಯಿತು. ಜಾನಪದ ಅಕಾಡೆಮಿ ಸದಸ್ಯರಾದ ಶಂಕ್ರಣ್ಣ ಸಂಕಣ್ಣವರ ಹಾಗೂ ಬಸವರಾಜ ಹಡಗಲಿ ತಂಡದವರು ವೀರರಾಣಿ ಕಿತ್ತೂರ ಚನ್ನಮ್ಮ ಕುರಿತು ಜನಪದ ಗೀತೆ ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಅಧಿಕಾರಿಗಳಾದ ಶ್ರೀನಿವಾಸಮೂರ್ತಿ ಕುಲಕರ್ಣಿ,ಆರ್. ಎಸ್.ಬುರುಡಿ, ಡಾ.ಬಸವರಾಜ ಬಳ್ಳಾರಿ, ಸಮಾಜದ ಗಣ್ಯರಾದ ಈರಣ್ಣ ಕರಿಭೀಷ್ಠಿ, ಎಫ್. ಮರಿಗೌಡ್ರ, ಶರಣಪ್ಪ ಗುಡಿಮನಿ, ಬಸಣ್ಣಪ್ಪ ಚಿಂಚಲಿ, ಅಯ್ಯಪ್ಪ ಅಂಗಡಿ, ಅಜ್ಜಣ್ಣ ಹಿರೇಮನಿ ಪಾಟೀಲ, ಶಿವು ಕವಲೂರು, ಮಹಾಬಲೇಶ ಶೆಟ್ಟರ, ರವಿ ಪಾಟೀಲ, ಮುರುಗೇಶ ಹಡಗಲಿ, ಎಸ್ ಎಸ್ ಹುಡಕಲ್ಲಿ, ಪಶಾಂತ ನರೇಗಲ್ಲ,ಪರಪ್ಪ ಕಮತರ, ಚಿನ್ನೂರ, ಚನ್ನವೀರಪ್ಪ ಮಳಗಿ, ಮಹೇಶ ಕರಿಭೀಷ್ಠಿ, ವಿರುಪಾಕ್ಷಪ್ಪ ಮಟ್ಟಿ, ಸ್ವಾತಿ ಅಕ್ಕಿ , ಈರಮ್ಮ ತಾಳಿಕೋಟಿ ಜಯಶ್ರೀ ಉಗಲಾಟದ , ಜಯಾಶ್ರೀ ಅಣ್ಣಿಗೇರಿ

ವೀರಣ್ಣ ಮಾಳವಾಡ, ಮರಿಗೌಡ್ರ, ಸಿ.ಕೆ.ಮಾಳಶೆಟ್ಟಿ, ರಾಜು ಬಗಾಡೆ, ಸೇರಿದಂತೆ ಇತರರು ಇದ್ದರು. ಪ್ರೊ.ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು.

## 247ನೇ ವೀರಮಾತೆ ರಾಣಿ ಚೆನ್ನಮ್ಮ ಜಯಂತೋತ್ಸವ



**ದಾವಣಗೆರೆ :** ನಗರದ ರಾಣಿ ಚೆನ್ನಮ್ಮ ವೃತ್ತದಲ್ಲಿ ಕರ್ನಾಟಕ ದಲಿತ ಹಿಂದುಳಿದ ಅಲ್ಪಸಂಖ್ಯಾತರ ಜಿಲ್ಲಾ ಸಮಿತಿ ವತಿಯಿಂದ ವೀರಮಾತೆ ಕಿತ್ತೂರುರಾಣಿ ಚೆನ್ನಮ್ಮನ 247ನೇ ಜಯಂತೋತ್ಸವವನ್ನು ಪುಷ್ಪಾರ್ಚನೆ ಮತ್ತು ಮಾಲಾರ್ಪಣೆ ಮಾಡುವ ಮೂಲಕ ನೆರವೇರಿಸಲಾಯಿತು.

ಈ ಕಾರ್ಯಕ್ರಮದ ನೇತೃತ್ವದಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷರಾದ ಶ್ರೀ ಬಿ.ಡಿ.ಗುರುಮೂರ್ತಿ ಜಯಂತೋತ್ಸವವನ್ನು ಉದ್ದೇಶಿಸಿ ಮಾತನಾಡುತ್ತಾ, ರಾಣಿ ಚೆನ್ನಮ್ಮನವರ ದೇಶಪ್ರೇಮ, ಧೈರ್ಯ ಮತ್ತು ತ್ಯಾಗ ಇಂದಿನ ಮಹಿಳಾ ಮಣಿಗಳಿಗೆ ಸ್ಫೂರ್ತಿಯಾಗಿದ್ದಾರೆ. ಮಹಿಳೆಯರಿಗೆ ಮಾತ್ರವಲ್ಲ ನಮ್ಮೆಲ್ಲರಿಗೂ ಪ್ರೇರಣೆಯಾಗಿದ್ದರು. ಅವರು ಮಹಿಳೆಯರ ಶಕ್ತಿ ಮತ್ತು ಶೌರ್ಯಕ್ಕೆ ಉದಾರಣೆ ಎಂದು ಜಿಲ್ಲಾಧ್ಯಕ್ಷರು ಬಣ್ಣಿಸಿದರು.

ಈ ಸಂದರ್ಭದಲ್ಲಿ ಬಿ.ಜೆ.ಪಿ. ಯುವಮುಖಂಡರಾದ ಪಂಜು ಪೈಲ್ವಾನ್ ಹಾಗೂ ಸಂಘಟನಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ ಅಣ್ಣಾಪುರ, ನಿರಂಜನ್, ಸುಮಂತ್, ಹೆಚ್.ಬಿ.ರಮೇಶ್, ಹಾಗೂ ಸುರೇಂದ್ರಚಾರ ಜೊತೆಗೆ ಜಿಲ್ಲಾ ಎಲ್ಲಾ ಪದಾಧಿಕಾರಿಗಳು ಭಾಗವಹಿಸಿದ್ದರು.

## ಹಕ್ಕು ಪಡೆಯದೆ ಉಳಿದಿರುವ ಬ್ಯಾಂಕ್ ಠೇವಣಿಗಳನ್ನು ವಾರಸುದಾರರಿಗೆ ತಲುಪಿಸಲು ವಿಶೇಷ ಕಾರ್ಯಕ್ರಮ

**ಶಿವಮೊಗ್ಗ :** ಜಿಲ್ಲೆಯ ರಾಷ್ಟ್ರೀಯ ಬ್ಯಾಂಕುಗಳಲ್ಲಿ, ವಿಮಾ ಕಂಪನಿಗಳಲ್ಲಿ ಹಾಗೂ ಮ್ಯೂಚ್ಯುಯಲ್ಫಂಡ್ಗಳಲ್ಲಿ ತೊಡಗಿಸಿದ ಹಣದ ಮೂಲ ವ್ಯಕ್ತಿಗಳಿದ್ದಲ್ಲಿ ಅಥವಾ ಅವರ ವಾರಸುದಾರರಿದ್ದಲ್ಲಿ ಸೂಕ್ತ ದಾಖಲೆಗಳನ್ನು ಸಲ್ಲಿಸಿ, ಹಣ ಪಡೆದುಕೊಳ್ಳಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಅಭಿಷೇಕ್ ಅವರು ಹೇಳಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದೀರ್ಘಕಾಲದವರೆಗೆ ಹಕ್ಕು ಪಡೆಯದೆ ಉಳಿದಿರುವ ಬ್ಯಾಂಕ್ ಠೇವಣಿಗಳು, ವಿಮಾ ಕಂತುಗಳು ಮತ್ತು ಷೇರುಗಳನ್ನು ಅವುಗಳ ಮಾಲೀಕರು ಅಥವಾ ಕಾನೂನುಬದ್ಧ ವಾರಸುದಾರರಿಗೆ ಹಸ್ತಾಂತರಿಸುವ ಸಂಬಂಧ ಏರ್ಪಡಿಸಲಾಗಿದ್ದ ವಿಶೇಷ ಆಂದೋಲನಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ಈ ವಿಶೇಷ ಆಂದೋಲನವು ಅಕ್ಟೋಬರ್ಮಾಹೆಯಿಂದ ಆರಂಭಗೊಂಡು ಡಿಸೆಂಬರ್ಮಾಸಾಂತ್ಯದವರೆಗೆ ನಡೆಯಲಿದೆ. ಜಿಲ್ಲೆಯ ರಾಷ್ಟ್ರೀಯ ಬ್ಯಾಂಕುಗಳಲ್ಲಿನ ಒಟ್ಟು 3.66ಲಕ್ಷ ಖಾತೆಗಳಿದ್ದು ಅವುಗಳಲ್ಲಿನ ಆಯ್ದ 79ಕೋಟಿ+, ವಿಮಾ ಕಂಪನಿಗಳಲ್ಲಿ 1043ಖಾತೆಗಳ ಪೈಕಿ 1.82ಕೋಟಿ ಮೊತ್ತ ವಾರಸುದಾರರಿಲ್ಲದೆ ಉಳಿದುಕೊಂಡಿದದೆ. ಜಿಲ್ಲೆಯ ಆಯ್ದ 08ರಾಷ್ಟ್ರೀಯ ಬ್ಯಾಂಕುಗಳಲ್ಲಿ ತಲಾ 1ಕೋಟಿಗೂ ಹೆಚ್ಚಿನ ಮೊತ್ತ ವಾರಸುದಾರರಿಲ್ಲದೆ ಉಳಿದುಕೊಂಡಿರುವುದನ್ನು ಗುರುತಿಸಲಾಗಿದೆ.

ಶೇ.20ರಷ್ಟು ವಾರಸುದಾರರಿಗೆ ಸದರಿ ಮೊತ್ತವನ್ನು ತಲುಪಿಸಲು ಗುರಿ ನೀಡಲಾಗಿದೆ ಎಂದ ಅವರು, 34ಮ್ಯೂಚ್ಯುಯಲ್ಫಂಡ್ಗಳಲ್ಲಿ ತೊಡಗಿಸಲಾಗಿದ್ದ ಹಣವನ್ನು ಸಂಬಂಧಿಸಿದ ವಾರಸುದಾರರಿಗೆ ತಲುಪಿಸಲಾಗಿದೆ ಎಂದವರು ನುಡಿದರು.ಈ ಶಿಬಿರದಲ್ಲಿ ಖಾತೆದಾರರು ಅಥವಾ ಕಾನೂನುಬದ್ಧ ವಾರಸುದಾರರು

ಬ್ಯಾಂಕಿನಲ್ಲಿ ಸತತ 10 ವರ್ಷಗಳಿಗೂ ಹೆಚ್ಚು ಕಾಲ ನಿಷ್ಕ್ರಿಯವಾಗಿರುವ ಖಾತೆಗಳಲ್ಲಿನ ಹಣ ಮತ್ತು ಕ್ಲೈಮ್ ಮಾಡದ ಠೇವಣಿಗಳನ್ನು ಹಿಂಪಡೆದುಕೊಳ್ಳಬಹುದಾಗಿದೆ. ಬ್ಯಾಂಕಿಂಗ್ ವಲಯ, ವಿಮಾ ವಲಯ, ಹಣಕಾಸು ವಲಯ ಮತ್ತು ಇತರ ವಲಯಗಳ ಅಧಿಕಾರಿಗಳು ಶಿಬಿರದಲ್ಲಿ ಭಾಗವಹಿಸಿ ಆಸಕ್ತರಿಗೆ ಸಲಹೆ ನೀಡಲಿದ್ದಾರೆ ಎಂದರು.

ಸೂಕ್ತ ಸಲಹೆಯನ್ನು ಪಡೆಯಬಹುದು ಮತ್ತು ಹಕ್ಕು ಪಡೆಯದ ಮೊತ್ತವನ್ನು ಮರುಪಡೆಯಲು ಈ ಶಿಬಿರವನ್ನು ಬಳಿಸಿಕೊಳ್ಳಬಹುದಾಗಿದೆ ಎಂದವರು ನುಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮಾರ್ಗದರ್ಶಿ ಬ್ಯಾಂಕಿನ ವ್ಯವಸ್ಥಾಪಕ ಹನುಮಂತಪ್ಪ, ಸಂಯೋಜಕ ಬಿ.ಹೊನ್ನಪ್ಪ ಸೇರಿದಂತೆ ಲೀಡ್ ಬ್ಯಾಂಗ್ ಹಾಗು ಎಲ್ಲ ಬ್ಯಾಂಕುಗಳ ಪ್ರಬಂಧಕರು ಉಪಸ್ಥಿತರಿದ್ದರು.

## ಜಾತಿ ಮೀರಿ ಬದುಕಿದ್ದ ರಾಣಿ ಚೆನ್ನಮ್ಮ

**ಶಿವಮೊಗ್ಗ:** ಜಾತಿ ಮೀರಿ ಬದುಕಿದ್ದ ಕಿತ್ತೂರು ರಾಣಿ ಚೆನ್ನಮ್ಮ ತನ್ನ ಸಾಮ್ರಾಜ್ಯದಲ್ಲಿ ಜನಸಾಮಾನ್ಯರನ್ನು ಒಗ್ಗೂಡಿಸಿಕೊಂಡು ಈ ದೇಶದ ಒಳಿತಿಗಾಗಿ ಸ್ವತಂತ್ರ ಹೋರಾಟ ಮಾಡಿದರು ಎಂದು ಶಾಸಕ ಎಸ್.ಎನ್. ಚನ್ನಬಸಪ್ಪ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ನಗರದ ಕುವೆಂಪು ರಂಗಮಂದಿರಲ್ಲಿ ಆಯೋಜಿಸಿದ್ದ ವೀರವನಿತೆ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಸ್ವಾತಂತ್ರ ಹೋರಾಟವನ್ನು ನೆನಪು ಮಾಡುವ ದಿಸೆಯಲ್ಲಿ, ನಮ್ಮೆಲ್ಲರ ಮುಂದಿನ ಜೀವನ ಹೇಗೆಲ್ಲಾ ಆದರ್ಶಪ್ರಾಯವಾಗಿರಬೇಕೆಂಬ ಉದ್ದೇಶದಲ್ಲಿ ರಾಜ್ಯ ಸರ್ಕಾರ ಇಂತಹ ಮಹನೀಯರ ಜಯಂತಿಯನ್ನು ಮಾಡುತ್ತಿದ್ದು, ನಾವೆಲ್ಲರೂ ಅವರ ಜೀವನಾನುಕ್ರಮವನ್ನು ಅರಿತುಕೊಳ್ಳಬೇಕಿದೆ ಎಂದರು.

ಸ್ವಾತಂತ್ರ ಹೋರಾಟದಲ್ಲಿ ಕಿತ್ತೂರು ರಾಣಿ ಚೆನ್ನಮ್ಮನ ಕೊಡುಗೆ ಅಪಾರ. ಬ್ರಿಟಿಷರು ಹಾಗೂ ಮೊಘಲರ ವಿರುದ್ದ ಹೋರಾಡಿದ ವೀರವನಿತೆ ಕಿತ್ತೂರು ರಾಣಿ ಚೆನ್ನಮ್ಮ ಸದಾ ಸಮಾಜಕ್ಕೆ ಒಳಿತಾಗಬೇಕೆಂದು ಯೋಚಿಸುತ್ತಿದ್ದರು. ಜಾತಿ ಭೇದದ ಅಂಕೆ ಇಲ್ಲದೆ ಎಲ್ಲರನ್ನೂ ದೇಶದ ಸ್ವಾತಂತ್ರ ಹೋರಾಟದಲ್ಲಿ ತೊಡಗಿಸಿಕೊಂಡಿದ್ದ ಇವರು ಸಮಗ್ರವಾಗಿ ಯೋಚಿಸಿ ರಾಜ್ಯಭಾರ ಮಾಡಿದರು ಎಂದರು.

ಕಿತ್ತೂರು ರಾಣಿಯ ಚೆನ್ನಮ್ಮನ ಆದರ್ಶವನ್ನು ಇಂದಿನ ಯುವ ಪೀಳಿಗೆಗಳಿಗೆ ತಿಳಿಸುವ ಪ್ರಯತ್ನ ಮಾಡಬೇಕು. ಇದರಿಂದ ಅವರ ಹೋರಾಟದ ಬದುಕು, ಜೀವನಶೈಲಿಯನ್ನು ಅರಿತುಕೊಂಡು ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಿ



ರೂಪಗೊಳ್ಳಲು ಸಾಧ್ಯವಾಗುತ್ತದೆ ಎಂದರು.

ಕನ್ನಡ ಉಪನ್ಯಾಸಕ ಹಾಗೂ ಕರ್ನಾಟಕ ನಾಟಕ ಅಕಾಡೆಮಿಯ ಜಿಲ್ಲಾ ಸಂಚಾಲಕರಾದ ಡಾ.ಗಣೇಶ ಆರ್. ಕೆಂಚನಾಲ್ ವಿಶೇಷ ಉಪನ್ಯಾಸ ನೀಡಿ, 1778 ಅ.23 ರಂದು ಬೆಳಗಾವಿಯ ಕಾಕತೀಯ ಹಳ್ಳಿಯಲ್ಲಿ ಜನಿಸಿದ ಚೆನ್ನಮ್ಮ, ಆರಂಭದಲ್ಲೆ ಕತ್ತಿವರೆಸಿ ಸೇರಿದಂತೆ ಅನೇಕ ಯುದ್ಧೋಪಾಯವನ್ನು ಕಲಿತಳು. ತನ್ನ 15 ನೇ ವಯಸ್ಸಿನಲ್ಲಿ ಮಲ್ಲಸರ್ಜನನ 2 ನೇ ಮಡದಿಯಾಗಿ ವಿವಾಹವಾದರು. ನಂತರ ರಾಜ್ಯದ ಜವಾಬ್ದಾರಿಯನ್ನು ಹೊತ್ತ ಚೆನ್ನಮ್ಮ 1824 ರಲ್ಲಿ ದತ್ತುಪುತ್ರನನ್ನು ಸ್ವೀಕಾರ ಮಾಡುವ ಮೂಲಕ ಬ್ರಿಟಿಷರ ನಿಯಮವನ್ನು ಮುರಿದಳು. ಇದರಿಂದ ಕೋಪಗೊಂಡ ಬ್ರಿಟಿಷ್ ಅಧಿಕಾರಿ ತಾಕ್ರೆ ಕಿತ್ತೂರಿನ ಮೇಲೆ ಯುದ್ಧ ಸಾರಿದ, ಚೆನ್ನಮ್ಮ ತಾಕ್ರೆ ಸೈನ್ಯವನ್ನು ಯುದ್ಧದಲ್ಲಿ ಸೋಲಿಸಿದಳು. ಆ ಮೂಲಕ ದೇಶದಲ್ಲಿ ಬ್ರಿಟಿಷರನ್ನು ಪ್ರಥಮ ಬಾರಿಗೆ ಸಂಪೂರ್ಣವಾಗಿ ಸೋಲಿಸಿ ಕೀರ್ತಿ ಕಿತ್ತೂರು ರಾಣಿ ಚೆನ್ನಮ್ಮರವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.

ರಾಣಿ ಚೆನ್ನಮ್ಮ ಸದಾ ದೇಶ ಸೇವೆಗಾಗಿ ಹಾತೊರಿಯುತ್ತಿದ್ದಳು. ಮೊಘಲರು, ಬ್ರಿಟಿಷರ ವಿರುದ್ಧ ದಿಟ್ಟವಾಗಿ ಹೋರಾಡಿದ್ದಳು. ದೇಶ, ರಾಜ್ಯ ಬಂದಾಗ ನಾವೆಲ್ಲರೂ ಒಗ್ಗಟ್ಟಾಗಬೇಕು ಎಂದು ತಿಳಿಸಿದ್ದ ಅವರು ರಾಜ್ಯಭಾರ ಒಂದು ಕುಟುಂಬಕ್ಕೆ ಮಾತ್ರ ಸಿಮೀತವಾಗಬಾರದು, ಅದು ಜನಸಾಮಾನ್ಯರಿಗೂ ತಲುಪಬೇಕೆಂದ ಆಶಯವನ್ನು ಹೊಂದಿದ್ದಳು ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ನಿಕಟ ಪೂರ್ವ ಅಧ್ಯಕ್ಷ ಮಹೇಶ್ವರಪ್ಪ, ಸಂಘಟನೆಯ ಕಾರ್ಯದರ್ಶಿ ಎಂ.ಸಿದ್ದೇಶ್ ಬೇಗೂರು, ಜಿಲ್ಲಾ ಘಟಕದ ಅಧ್ಯಕ್ಷ ಚಂದ್ರಪ್ಪ ಮೇಡ್ಲೇರಿ, ಶಿವಮೊಗ್ಗ ನಗರದ ಅಧ್ಯಕ್ಷ ಟಿ.ಎಂ. ಕುಮಾರ್, ಪೊಲೀಸ್ ಹೆಚ್ಚುವರಿ ಅಧೀಕ್ಷಕರಾದ ರಮೇಶ್ ಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಹೆಚ್. ಉಮೇಶ್ ಹಾಗೂ ಸಮಾಜದ ಮುಖಂಡರು ಹಾಜರಿದ್ದರು.

## ನ.4 ರಿಂದ ಶ್ರೀ ಆದಿಚುಂಚನಗಿರಿ ಮಠದ ವಾರ್ಷಿಕೋತ್ಸವ/ ಆರಗದಲ್ಲಿ ಪುರಂದರದಾಸರ ಕೀರ್ತನೋತ್ಸವ ಆಯೋಜನೆ.

**ಶಿವಮೊಗ್ಗ:** ಶಿವಮೊಗ್ಗ ಶ್ರೀ ಆದಿಚುಂಚನಗಿರಿ ಶಾಖಾ ಮಠದ 35 ನೇ ವಾರ್ಷಿಕೋತ್ಸವ ಸಮಾರಂಭವನ್ನು ಅತ್ಯಂತ ವಿಭಿನ್ನ,ವಿಶೇಷವಾಗಿ ಆಚರಿಸಲು ಶ್ರೀ ಆದಿಚುಂಚನಗಿರಿ ಮಠ ತೀರ್ಮಾನಿಸಿದೆ.

ಇದೇ ಮೊದಲ ಬಾರಿಗೆ ದಾಸವರೇಣ್ಯ ಪುರಂದದಾಸರ ಕೀರ್ತನೋತ್ಸವ ಸಮಾರಂಭವನ್ನು ಮಾಜಿ ಸಚಿವ ಆರಗಜ್ಞಾನೇಂದ್ರ ಅವರ ಹುಟ್ಟೂರಿನಲ್ಲಿ ನಡೆಸಲು ತೀರ್ಮಾನಿಸಲಾಗಿದೆ. ಶಿವಮೊಗ್ಗದ ಶರಾವತಿ ನಗರದ ಶ್ರೀ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಪ್ರತಿವರ್ಷದಂತೆ ಈ ಬಾರಿಯೂ ನವೆಂಬರ್ 4 ಮತ್ತು 5 ರಂದು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ನವಂಬರ್ 4 ರಂದು ಬೆಳಗ್ಗೆ 10ರಿಂದ ತೀರ್ಥಹಳ್ಳಿ ತಾಲ್ಲೂಕಿನ ಆರಗದಲ್ಲಿರುವ ಸಹಕಾರ ಸಂಘ ಸಭಾ ಭವನದಲ್ಲಿ ದಾಸವರೇಣ್ಯ ಪುರಂದರದಾಸರ ಕೀರ್ತನೋತ್ಸವ ಕಾರ್ಯಕ್ರಮ ನಡೆಯಲಿದ್ದು, ದಿವ್ಯ ಸಾನಿಧ್ಯವನ್ನು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ 72ನೇ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಡಾ.ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಹಾಗೂ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರ ದಿವ್ಯ ಉಪಸ್ಥಿತಿಯಲ್ಲಿ ಜರುಗಲಿದ್ದು, ಕಾರ್ಯಕ್ರಮದಲ್ಲಿ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಶ್ರೀ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ನ.5ರ ಬೆಳಗ್ಗೆ 10 ಗಂಟೆಗೆ ಶ್ರೀ ಮಠದ 35 ನೇ ವಾರ್ಷಿಕೋತ್ಸವದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಹಾಗೂ ಕೃಷಿ ವಿಜ್ಞಾನ ಕ್ಷೇತ್ರದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆದ ನಮ್ಮ ಸಂಸ್ಥೆಯ ಹಿರಿಯ ವಿದ್ಯಾರ್ಥಿಗಳಿಗೆ ಪೂಜ್ಯರಿಂದ ಸನ್ಮಾನಿಸುವ ಕಾರ್ಯಕ್ರಮ ನಡೆಯುವುದು. ನವೆಂಬರ್ 5ರಂದು ಬೆಳಿಗ್ಗೆ 7 ಗಂಟೆಗೆ ಶರಾವತಿ ನಗರದ ಶ್ರೀ ಕಾಲಭೈರವೇಶ್ವರ ಸ್ವಾಮಿ ದೇವಾಲಯದಲ್ಲಿ ಪೂಜ್ಯ ಶ್ರೀಗಳ ಸಾನ್ನಿಧ್ಯದಲ್ಲಿ ಹೋಮ - ಹವನ ಮತ್ತು ವಿಶೇಷ ಪೂಜಾ ಕೈಂಕರ್ಯಗಳನ್ನು ನಡೆಸಲಾಗುವುದು. ಶ್ರೀ ಮಠದ ಶಾಖೆಯ ಶ್ರೀಗಳು, ಜನಪ್ರತಿನಿಧಿಗಳು ಭಾಗವಹಿಸಲಿದ್ದು, ಕಾರ್ಯಕ್ರಮಕ್ಕೆ ಸರ್ವರನ್ನು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಶಾಖಾಮಠ ಸ್ವಾಗತಿಸಿ, ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

3ನೇ ಅವಧಿ: ವಿದ್ವಾನ್ ಶೃಂಗೇರಿ ನಾಗರಾಜ್ ರವರ ಶಿಷ್ಯ ವೃಂದದವರಿಂದ ಮತ್ತು ಆರಗ ಗ್ರಾಮದ ಭಜನಾ ಮಂಡಳಿಯವರಿಂದ ಹಾಡುಗಾರಿಕೆ.

4ನೇ ಅವಧಿ : ವಿದ್ವಾನ್ ಹುಮಾಯುನ್ ಹರ್ಲಾಪುರ್, ವಿದ್ವಾನ್ ನವಶಾದ್ ಹರ್ಲಾಪುರ್, ವಿದ್ವಾನ್ ನಿಶಾದ್ ಹರ್ಲಾಪುರ್ ಮತ್ತು ಸಂಗಡಿಗರಿಂದ ಹಿಂದೂಸ್ತಾನಿ ಗಾಯನ.

5ನೇ ಅವಧಿ : ರಾಷ್ಟ್ರಪತಿ ಪ್ರಶಸ್ತಿ ವಿಜೇತ ವಿದ್ವಾನ್ ಮಾರುತಿ ಪ್ರಸಾದ್ ಬೆಂಗಳೂರು ಮತ್ತು ಸಂಗಡಿಗರಿಂದ ಹಾಡುಗಾರಿಕೆ.

### ವಿಶೇಷ ಕಾರ್ಯಕ್ರಮ:

ತೀರ್ಥಹಳ್ಳಿ ತಾಲೂಕಿನ ಆರಗದಲ್ಲಿ ನ. 4ರಂದು ನಡೆಯಲಿರುವ ವಿಶೇಷ, ವಿಭಿನ್ನವಾದ ದಾಸವರೇಣ್ಯ ಪುರಂದರ ದಾಸರ ಕೀರ್ತನೋತ್ಸವ ಸಮಾರಂಭದಲ್ಲಿ ನಾಡಿನ ಖ್ಯಾತ ಗಾಯಕರು ಆಗಮಿಸಿ ವಿವಿಧ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

ಮೊದಲ ಅವಧಿಯಲ್ಲಿ: ವಿದ್ವಾನ್ ಪಣೀಂದ್ರ ಬೆಂಗಳೂರು ಮತ್ತು ಸಂಗಡಿಗರಿಂದ ಹಾಡುಗಾರಿಕೆಯನ್ನು ನಡೆಸಿಕೊಡಲಿದ್ದಾರೆ.

2ನೇ ಅವಧಿ : ವಿದ್ವಾನ್ ಹೊಸಳ್ಳಿ. ಕೆ.ವೆಂಕಟರಾಂ,ವಿದ್ವಾನ್ ಹೊಸಳ್ಳಿ ಕೆ. ಸುಬ್ಬರಾವ್, ವಿದ್ವಾನ್ ಹೊಸಳ್ಳಿ ವಿ.ರಘುರಾಂ ಮತ್ತು ಸಂಗಡಿಗರಿಂದ ಪಿಟೀಲು ವಾದನ ನಡೆಸಿಕೊಡುವರು.

6ನೇ ಅವಧಿ: ಪೂಜ್ಯ ಶ್ರೀ ಶ್ರೀ ಸಾಯಿ ಕೀರ್ತಿನಾಥ ಸ್ವಾಮೀಜಿ ಹಾಗೂ ವಿದ್ವಾನ್ ಮಾರುತಿ ಪ್ರಸಾದ್ ಅವರಿಂದ ಹಾರ್ಮೋನಿಯಂ, ಕೀಬೋರ್ಡ್,ಜುಗಲ್ ಬಂದಿ ಕಾರ್ಯಕ್ರಮ ನಡೆಯುವುದು.

ಖ್ಯಾತ ಸಂಗೀತಗಾರರಿಂದ ಸಾಮೂಹಿಕ ಗಾಯನ ಹಾಗೂ ಸತ್ಸಂಗ ಕಾರ್ಯಕ್ರಮ ಆಯೋಜನೆ ಮಾಡಲಾಗಿದ್ದು, ಸಾರ್ವಜನಿಕರು, ಶ್ರೀಮಠದ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೆ ಸಹಕರಿಸಬೇಕಾಗಿ ಕಾರ್ಯಕ್ರಮದ ಆಯೋಜಕರು ಕೋರಿದ್ದಾರೆ.

# ರಫ್ತು ಉತ್ತೇಜನ ಮತ್ತು ಸುಗಮಗೊಳಿಸುವಿಕೆಗಾಗಿ ಒಂದು ದಿನನದ ಜಾಗೃತಿ ಕಾರ್ಯಾಗಾರ

**ಶಿವಮೊಗ್ಗ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಮತ್ತು ಕೆ.ಸಿ.ಟಿ.ಯು., ಬೆಂಗಳೂರು ಹಾಗೂ ಮಾಚೇನಹಳ್ಳಿ ಕೈಗಾರಿಕೆಗಳ ಸಂಘ ಇವರುಗಳ ಸಹಯೋಗದಲ್ಲಿ ಅ.28 ರಂದು ಬೆಳಗ್ಗೆ 1.30ಕ್ಕೆ ಶಿವಮೊಗ್ಗದ ಮಾಚೇನಹಳ್ಳಿಯ ಶಾಂತಲಾ ಸ್ಪೆರೋಕ್ಯಾಸ್ಟ್ ಲರ್ನಿಂಗ್ ಸೆಂಟರ್‌ನಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಮತ್ತು ವೇಗಗೊಳಿಸುವ ಯೋಜನೆಯಡಿ ರಫ್ತು ಉತ್ತೇಜನ ಮತ್ತು ಸುಗಮಗೊಳಿಸುವಿಕೆಗಾಗಿ ಒಂದು ದಿನದ ಜಾಗೃತಿ ಮೂಡಿಸುವ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹೇಮಂತ್ ಎನ್. ಉದ್ಘಾಟಿಸಲಿದ್ದಾರೆ. ಮಾಚೇನಹಳ್ಳಿ ಕೈಗಾರಿಕೆಗಳ ಸಂಘದ ಅಧ್ಯಕ್ಷ ಡಿ.ಜಿ.ಬೆನಕಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಆರ್. ಗಣೇಶ್ ಹಾಗೂ ವಿ.ಟಿ.ಪಿ.ಸಿ., ಬೆಂಗಳೂರು ಜಂಟಿ ನಿರ್ದೇಶಕ ಬಾಬು ಜಗದೀಶ್ ಸಿ.ಎಸ್., ಲೀಡ್ ಬ್ಯಾಂಕ್ ಅಧಿಕಾಋಇ ಹೊನ್ನಪ್ಪ ಬಿ. ಇವರುಗಳು ಉಪಸ್ಥಿತರಿರಲಿದ್ದಾರೆ.

# ಎಂ.ಎಸ್.ಎಂ.ಇ.: ಒಂದು ದಿನನದ ಅರಿವು ಮೂಡಿಸುವ ಕಾರ್ಯಾಗಾರ

**ಶಿವಮೊಗ್ಗ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಮತ್ತು ಕೆ.ಸಿ.ಟಿ.ಯು ಬೆಂಗಳೂರು ಹಾಗೂ ಜೆ.ಎನ್.ಎನ್.ಸಿ.ಇ. ಶಿವಮೊಗ್ಗ ಇವರುಗಳ ಸಹಯೋಗದಲ್ಲಿ ಅ.28 ರಂದು ಬೆಳಗ್ಗೆ 1.30ಕ್ಕೆ ಶಿವಮೊಗ್ಗದ ಜೆ.ಎನ್.ಎನ್.ಇಂಜಿನಿಯರಿಂಗ್ ಕಾಲೇಜ್‌ನ ಎಂ.ಬಿ.ಎ.ಮತ್ತು ಎಂ.ಸಿ.ಎ ಆಡಿಟೋರಿಯಂನಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಮತ್ತು ವೇಗಗೊಳಿಸುವ ಯೋಜನೆಯಡಿ ಇನ್‌ಕ್ಯುಬೇಷನ್ ಯೋಜನೆ ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಗೋಪಿನಾಥ ಬಿ.ರವರು ಉದ್ಘಾಟಿಸಲಿದ್ದಾರೆ. ಜೆ.ಎನ್.ಎನ್. ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ವೈ. ವಿಜಯಕುಮಾರ್‌ರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ನಾಗರಾಜ ಎಸ್.ಎನ್., ಜಿಲ್ಲಾ ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷ ಜೋಯಿಸ್ ರಾಮಾಚಾರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಆರ್. ಗಣೇಶ್ ಹಾಗೂ ಲೀಡ್ ಬ್ಯಾಂಕ್ ಕೆನರಾ ಬ್ಯಾಂಕ್ ಮುಖ್ಯ ವ್ಯವಸ್ಥಾಪಕ ಹನುಮಂತಪ್ಪ ಪಿ. ಇವರುಗಳು ಉಪಸ್ಥಿತರಿರಲಿದ್ದಾರೆ.

# ಮಾಹಿತಿ ತಂತ್ರಜ್ಞಾನ ನಿರ್ವಹಣೆ: ಮೆಸ್ಕಾಂನ ಆನ್ ಲೈನ್ ಸೇವೆಗಳು ತಾತ್ಕಾಲಿಕ ಅಲಭ್ಯ

**ಶಿವಮೊಗ್ಗ:** ಮೆಸ್ಕಾಂ ಮಾಹಿತಿ ತಂತ್ರಜ್ಞಾನ(ಐಟಿ) ವ್ಯವಸ್ಥೆಯ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿದ್ದು, ಬಂಟ್ವಾಳ, ಕಡೂರು, ತರೀಕೆರೆ, ಪುತ್ತೂರು, ಉಡುಪಿ, ಮಂಗಳೂರು, ಶಿಕಾರಿಪುರ, ಸಾಗರ, ಶಿವಮೊಗ್ಗ, ಭಧ್ರಾವತಿ, ಚಿಕ್ಕಮಗಳೂರು ನಗರ ಪ್ರದೇಶಗಳಲ್ಲಿ ಮೆಸ್ಕಾಂ ಆನ್ ಲೈನ್ ಸೇವೆಗಳಾದ ವಿದ್ಯುತ್ ಬಿಲ್ ಪಾವತಿ, ಹೆಸರು ಬದಲಾವಣೆ, ಜಕಾತಿ ಬದಲಾವಣೆ, ಹೊಸಸಂಪರ್ಕ ಇತ್ಯಾದಿ ಸೇವೆಗಳು ಅ.24 ರಾತ್ರಿ 08.00 ಗಂಟೆಯಿಂದ ಅ.25 ರ ಮಧ್ಯಾಹ್ನ 01.00 ಗಂಟೆಯವರೆಗೆ ಲಭ್ಯವಿರುವುದಿಲ್ಲ.

ನಗರ ಪ್ರದೇಶದ ಗ್ರಾಹಕರು ಬಿಲ್ ಪಾವತಿಗಾಗಿ ಹೆಚ್ಚಾಗಿ ಬಳಸುವ ಮೆಸ್ಕಾಂನ ಜಾಲತಾಣ (www.mescom.org.in) ಮೆಸ್ಕಾಂನ ಮೊಬೈಲ್ ಆಪ್ (ನನ್ನಮೆಸ್ಕಾಂ), ಕರ್ನಾಟಕ ಒನ್ ಕೌಂಟರ್‌ಗಳು, ಅಂಚೆ ಕಛೇರಿಯ ಕೌಂಟರ್‌ಗಳು ಹಾಗೂ ಇತರೆ ಬಿ,ಬಿ.ಪಿ.ಎಸ್.ನ ಚಾನಲ್‌ಗಳಲ್ಲಿ ಮೇಲೆ ತಿಳಿಸಿದ ಸಮಯದಲ್ಲಿ, ನಗರಪ್ರದೇಶದ ಗ್ರಾಹಕರಿಗೆ ಆನ್ ಲೈನ್ ಸೇವೆಗಳು ಲಭ್ಯವಿರುವುದಿಲ್ಲ, ಅಡಚಣೆಗಾಗಿ ವಿಷಾದಿಸುತ್ತಾ ಗ್ರಾಹಕರು ಸಹಕಾರ ನೀಡಬೇಕೆಂದು ಮೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

# ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮ

**ಶಿವಮೊಗ್ಗ:** ಕೃಷಿ ಇಲಾಖೆಯು ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮದಡಿ ಕಣ್ಮರೆಯಾಗುತ್ತಿರುವ ಹಾಗೂ ನಶಿಸಿಹೋಗುತ್ತಿರುವ ಸ್ಥಳೀಯ ಬೆಳೆಗಳನ್ನು ಸಂಗ್ರಹಿಸಲು ಮತ್ತು ಸಂರಕ್ಷಿಸುವ ಉದ್ದೇಶದಿಂದ ಒಂದು ಸಮೂದಾಯ ಬೀಜ ಬ್ಯಾಂಕ್ ಸ್ಥಾಪಿಸುತ್ತಿದ್ದು, ಆಸಕ್ತಿಯುಳ್ಳ ರೈತರಿಂದ ಅರ್ಜಿ ಆಹ್ವಾನಿಸಿದೆ.

ಆಯಾ ಪ್ರದೇಶದಲ್ಲಿ ಸ್ಥಳೀಯ ಅಥವಾ ಸಾಂಪ್ರದಾಯಕವಾಗಿ ಕೃಷಿ ಪದ್ಧತಿಯಿಂದ ಅಭಿವೃದ್ಧಿ, ಮತ್ತು ನಿರ್ವಹಿಸುವ ತಳಿಗಳನ್ನು ದೇಸಿ ತಳಿಗಳೆಂದು ಕರೆಯಲಾಗುತ್ತದೆ. ಈ ಕಾರ್ಯಕ್ರಮದಡಿ ಆಯ್ಕೆಯಾದ ಬೆಳೆಗಳೆಂದರೆ ಭತ್ತ, ರಾಗಿ, ಜೋಳ, ತೊಗರಿ, ಹುರುಳಿ, ಅವರೆ, ಅಲಸಂದೆ, ಮಡಕಿಕಾಳು, ಹುಚ್ಚೆಳ್ಳು, ಕುಸುಬೆ, ಎಳ್ಳು, ನವಣೆ, ಸಾಮೆ, ಊದಲು, ಕೊರಲೆ, ಹಾರಕ, ಬರಗು ಮತ್ತು ಸಲಹಾ ಸಮಿತಿ ಶಿಫಾರಸು ಮಾಡಲು ಇತರೆ ಬೆಳೆಗಳಲ್ಲಿ ದೇಸಿ ತಳಿಗಳಿದ್ದರೆ ರೈತರು ಸಮೀಪದ ರೈತ ಸಂಪರ್ಕ ಕೇಂದ್ರದಲ್ಲಿ ನೋಂದಾಯಿಸಿಕೊಳ್ಳುವುದು.

ಇತ್ತೀಚೆಗೆ ಕಣ್ಮರೆಯಾಗುತ್ತಿರುವ ದೇಸಿ ತಳಿಗಳನ್ನು ಮೂಲ ಸಮೀಕ್ಷೆ ಮೂಲಕ ಗುರುತಿಸಿ ಸಂರಕ್ಷಣೆಯನ್ನು ಮಾಡುವ ಗುರಿಯನ್ನು ಹೊಂದಲಾಗಿದ್ದು, ಯೋಜನೆಯಲ್ಲಿ ದೇಸಿ ತಳಿಗಳ ಸಂರಕ್ಷಣೆ ಮತ್ತು ಕೃಷಿಯಲ್ಲಿ ತೊಡಗಿರುವ ರೈತರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಒಪ್ಪಿಗೆ ಇರಬೇಕು. ಬೀಜ ಬ್ಯಾಂಕ್ ನಲ್ಲಿರಿಸಲು ರೈತರು ಕಡ್ಡಾಯವಾಗಿ ಅಗತ್ಯ ಪ್ರಮಾಣದ ದೇಸಿ ತಳಿಗಳ ಬೀಜಗಳನ್ನು ನೀಡಲು ಸಿದ್ಧರಿರಬೇಕು. ಜಾನುವಾರು ನಿರ್ವಹಣೆ, ಕೊಟ್ಟಿಗೆ ಗೊಬ್ಬರ, ಎರೆಹುಳು ಗೊಬ್ಬರ, ಪುನರುತ್ಪಾದಕ ಕೃಷಿ ಮತ್ತು ಇತರೆ ಸುಸ್ಥಿರ ಕೃಷಿ ಚಟುವಟಿಕೆಗಳನ್ನು ಕೈಗೊಂಡಿರಬೇಕು.

ಯೋಜನೆಯಡಿ ಆಸಕ್ತಿಯುಳ್ಳ ರೈತರು ನೋಂದಾಯಿಸಿಕೊಳ್ಳಲು ಅವಕಾಶವಿದ್ದು ಹೆಚ್ಚಿನ ಮಾಹಿತಿಗೆ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಶೌರ್ಯ, ಕ್ರೌರ್ಯದಲ್ಲಿ ಮೊದಲು ಕಿತ್ತೂರು ರಾಣಿ ಚೆನ್ನಮ್ಮ



**ಹಾಸನ:** ಮಹಿಳಾ ಸಬಲೀಕರಣದ ಸರ್ವೋತ್ತಮ ಉದಾಹರಣೆಯಲ್ಲಿ ಹಾಗೂ ಶೌರ್ಯ, ಕ್ರೌರ್ಯದಲ್ಲಿ ಮೊದಲನೇ ಸ್ಥಾನದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಅವರು ಇದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ವಿ ಮಂಜುನಾಥ್ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿಂದು ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ರಾಣಿ ಚೆನ್ನಮ್ಮ ಅವರಿಂದ ಕಡ್ಡಾಯವಾಗಿ ಕಲಿಯಲೇಬೇಕಾದ ವಿಷಯಗಳೆಂದರೆ ಭಾರತೀಯ ಪರಂಪರೆಯಲ್ಲಿ ನಾರಿಯ ಶಸಸ್ತ್ರೀಕರಣದ ವಿಶೇಷ ಸೌಭಾಗ್ಯ, ಹೆಣ್ಣು ಮಕ್ಕಳ ಶಿಕ್ಷಣ. ನಮ್ಮ ಒಗ್ಗಟ್ಟು, ಸಂಸ್ಕಾರ, ದೇಶಭಕ್ತಿ ಇವುಗಳನ್ನು ಕಲಿಯಬೇಕು ಎಂದರು.

ಈ ಹಿಂದೆ ಸ್ವಾತಂತ್ರ ಹೋರಾಟದಲ್ಲಿ ಹೆಣ್ಣು ಮಕ್ಕಳು ಬಹಳ ವಿರಳವಾಗಿ ಕಾಣುತ್ತಿದ್ದರು ಇದಕ್ಕೆ ಕಾರಣ ಶಿಕ್ಷಣ ಮತ್ತು ಹೆಣ್ಣಿಗೆ ಎಲ್ಲಿಯೂ ಮುಕ್ತವಾದ ಅವಕಾಶಗಳನ್ನು ನೀಡುತ್ತಿರಲಿಲ್ಲ ಎಂಬುದಾಗಿದೆ. ಆದರೆ ಇಂದು ಆದಾಯದ ದೃಷ್ಟಿಯಿಂದ ಉದ್ದೇಶದಿಂದ ಅಂಜಿಕೆಯಲ್ಲಿ ಮಕ್ಕಳನ್ನು ಬೆಳೆಸುತ್ತಿದ್ದೇವೆ. ಸೈನಿಕರಾಗಿ ದೇಶಕ್ಕಾಗಿ ಸೇವೆ ಸಲ್ಲಿಸಲು ಕಳುಹಿಸುತ್ತಿರುವುದು ಬಹಳ ಕಡಿಮೆ. ಹಾಗಾಗಿ ದೇಶ ಸೇವೆಗಾಗಿ ಧೈರ್ಯ, ಶೌರ್ಯದಿಂದ ಹೋರಾಟ ಮಾಡುವ ಸ್ವಭಾವವನ್ನು ನಮ್ಮ ಮಕ್ಕಳಲ್ಲಿ ಬೆಳೆಸಬೇಕು. ಆಗ ಮಾತ್ರ ನಾವು ಮತ್ತೆ ಉತ್ತಮವಾದ ಸಮಾಜವನ್ನು ನಿರ್ಮಾಣ ಮಾಡಬಹುದು ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ನಂತಹ ಅನೇಕರನ್ನು ಹುಟ್ಟಿಹಾಕಬಹುದು ಎಂದು ತಿಳಿಸಿದರು.

ಆಲೂರು ತಾಲ್ಲೂಕು ಕಾರ್ಜುವಳ್ಳಿಯ ಶ್ರೀ ಸಂಸ್ಥಾನ ಹಿರೇಮಠದ ಶ್ರೀ ಷ.ಬ್ರ ಸದಾಶಿವ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ ತೊಟ್ಟಿಲು ತೂಗುವ ಕೈ ಮನಸ್ಸು ಮಾಡಿದರೆ ಜಗತ್ತನ್ನೇ ಆಳಬಹುದು ಎಂಬುದಕ್ಕೆ ಪ್ರತ್ಯಕ್ಷ ಉದಾಹರಣೆ ಕಿತ್ತೂರು ರಾಣಿ ಚೆನ್ನಮ್ಮ. ದಿಟ್ಟತನದಿಂದ ಒಂದು ಸಂಸ್ಥಾನವನ್ನು ನಡೆಸಿ ಇಡೀ ಭಾರತ ದೇಶವನ್ನು ಆಕ್ರಮಿಸಿಕೊಂಡಿದ್ದ ಸೂರ್ಯ ಮುಳುಗದ ಆಡಳಿತ ವ್ಯವಸ್ಥೆಯ ವಿರುದ್ಧ ಒಬ್ಬ ಹೆಣ್ಣುಮಗಳು ಯುದ್ಧ ಕಹಳೆ ಊದುತ್ತಾಳೆ ಎಂದರೆ ಅವಳ ಧೈರ್ಯವನ್ನು ನಾವೆಲ್ಲರೂ ಶ್ಲಾಘಿಸಬೇಕು ಎಂದು ತಿಳಿಸಿದರು.ಯುದ್ಧ ಮಾಡುವ ಕಲೆ, ಬಿಲ್ಲು ಬಾಣ, ಬೇಟೆಯಾಡುವುದು ಹೀಗೆ ಎಲ್ಲಾ ಕೌಶಲ್ಯವನ್ನು ಅವರ ತಂದೆ ತಾಯಿ ಚೆನ್ನಮ್ಮ ಅವರಿಗೆ ಕಲಿಸಿದ್ದುದರಿಂದ ಇಂದು ಅವರನ್ನು ನೆನಪಿಸಿಕೊಳ್ಳಲು ಸಾಧ್ಯವಾಗಿದೆ. ಹಾಗಾಗಿ ಅವರ ಹೆತ್ತ ತಂದೆ–ತಾಯಿಯರಿಗೂ ಸಹ ಈ ಸಮಯದಲ್ಲಿ ಧನ್ಯವಾದಗಳನ್ನು ತಿಳಿಸಬೇಕು ಎಂದರು.

ಇಂದು ನಾವು ಮಕ್ಕಳನ್ನು ಹೇಗೆ ಬೆಳೆಸುತ್ತಿದ್ದೇವೆ. ಹಿಂದೆ ಕಿತ್ತೂರು ರಾಣಿ ಚೆನ್ನಮ್ಮನನ್ನು ಅವರ ತಂದೆ ತಾಯಿ ಹೇಗೆ ಬೆಳೆಸಿದರು ಎಂಬುದನ್ನು ನಾವು ತುಲನೆ ಮಾಡಬೇಕು. ಚೆನ್ನಮ್ಮ ಆಗಿನ ಕಾಲದಲ್ಲಿಯೇ 64 ವಿದ್ಯೆಗಳನ್ನು ಕಲಿತಿದ್ದರು. ಇಂದು ನಮ್ಮ ಮಕ್ಕಳಿಗೆ ನಾವು ಎಷ್ಟು ರೀತಿಯ ವಿದ್ಯೆಗಳನ್ನು ಕಲಿಸಿದ್ದೇವೆ ಎಂಬುದನ್ನು ಆಲೋಚಿಸಬೇಕು. ಹೇಳಿದ್ದನ್ನು ಕಾರ್ಯರೂಪಕ್ಕೆ ತಂದರೆ ನಮ್ಮ ದೇಶ ಮತ್ತೆ ಉನ್ನತ ಸ್ಥಾನಕ್ಕೆ ಹೋಗುವುದರಲ್ಲಿ ಸಂಶಯವಿಲ್ಲ ಎಂದರಲ್ಲದೆ, ಮಕ್ಕಳನ್ನು ಸಂಸ್ಕಾರಯುತವಾಗಿ ಬೆಳೆಸಬೇಕು. ಸಾಧನೆ ಮಾಡಲು ಮನಸ್ಸಿರುವ ಹೆಣ್ಣು ಮಕ್ಕಳಿಗೆ ಹೆಚ್ಚು ಪ್ರೋತ್ಸಾಹ ನೀಡಬೇಕು ಇದರ ಮೂಲಕ ನಾವು ಚೆನ್ನಮ್ಮನವರಿಗೆ ಕೃತಜ್ಞತೆ ಸಲ್ಲಿಸಿದ ಹಾಗೆ ಆಗುತ್ತದೆ ಎಂದು ತಿಳಿಸಿದರು. ಹಳೇಕೋಟೆಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಜಯಶೀಲಮ್ಮ ಅವರು ಮಾತನಾಡಿ ಬ್ರಿಟಿಷರ ವಿರುದ್ಧ ಹೋರಾಟ ಮಾಡಿ ಸ್ವಾತಂತ್ರ್ಯದ ಕಿಚ್ಚು ಹೆಚ್ಚಿಸಿದ ಪ್ರಪ್ರಥಮ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮ ಆಗಿದ್ದಾರೆ. ಇವರು ಮನುಕುಲಕ್ಕೆ ಮಹತ್ತರವಾದ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ರಾಣಿ ಚೆನ್ನಮ್ಮ ತನ್ನ ಜನರಿಗೆ ಸ್ಪೂರ್ತಿಯನ್ನು ತುಂಬಿ, ಬ್ರಿಟಿಷರ ವಿರುದ್ಧ ಹೋರಾಡಿದ ಧೀರ ಮಹಿಳೆ. ಬಹಳ ವೀರ ವೇಷದಿಂದ ಪುಟ್ಟ ಸಂಸ್ಥಾನದ ಒಡತಿಯಾಗಿ ಬ್ರಿಟಿಷರಿಗೆ ಸೋಲಿನ ರುಚಿ ತೋರಿಸಿದವಳು. ಅವರು ಸಾಗಿಬಂದ ಹಾದಿ ಸುಗಮವಾಗಿರಲಿಲ್ಲ, ಸತತ ಪರಿಶ್ರಮದಿಂದ ಸಾಧನೆ ಮಾಡಿ ಮನುಕುಲಕ್ಕೆ ಇಂದಿನ ಯುವ ಪೀಳಿಗೆಗೆ ಸ್ಪೂರ್ತಿಯ ಸೆಲೆಯಾಗಿದ್ದಾರೆ. ಇಂತಹ ಮಹನೀಯರನ್ನು ಅನುಕರಣೆ ಮಾಡಬೇಕು ಎಂದರು.

ಬ್ರಿಟಿಷರನ್ನು ಎದುರಿಸಿ ನಿಂತ ಏಕೈಕ ಸಂಸ್ಥಾನ ಕಿತ್ತೂರು ಅದರ ರಾಣಿ ಚೆನ್ನಮ್ಮ. ಇವರು ಸ್ವಾತಂತ್ರ್ಯ ಹೋರಾಟ ಮಾಡಿ ಬ್ರಿಟಿಷರಿಗೆ ಭಯ ಹುಟ್ಟಿಸಿದವರಾಗಿದ್ದಾರೆ. ಬಿಲ್ಲು ಬಾಣಗಳ ಪ್ರಯೋಗ, ಪುರುಷರಿಗೆ ಮೀಸಲಾಗಿದ್ದ ಕುದುರೆ ಸವಾರಿ ಎಲ್ಲವನ್ನು ಕಲಿತಿದ್ದರು ಹಾಗೂ ಯಾವ ರಾಜನಿಗೂ ಕಡಿಮೆ ಇಲ್ಲ ಎನ್ನುವಂತೆ ಮೀನಿನಂತೆ ಈಜುತ್ತಿದ್ದವಳು, ಯುದ್ಧ, ಸಮರಕಲೆ, ಬಿಲ್ಲು ಬಾಣ ಹೂಡುವುದರಲ್ಲಿ, ಬೇಟೆಯಾಡುವುದರಲ್ಲಿ ಹೀಗೆ ಸಾಹಸದಲ್ಲಿ ಕ್ಷತ್ರಿಯಳಾಗಿ, ಸಂಗೀತ ಮತ್ತು ಸಾಹಿತ್ಯದಲ್ಲಿ ಸರಸ್ವತಿಯಾಗಿ, ಸೌಂದರ್ಯದ ಗಣಿಯಾಗಿ, ಗಂಭೀರ ಸ್ವಭಾವದವಳಾಗಿ, ಭಾರತೀಯ ನಾರಿಯರಿಗೆ ಇರಬೇಕಾದ ಎಲ್ಲಾ ರೀತಿಯ ವಿದ್ಯೆಗಳಲ್ಲಿ ನೈಪುಣ್ಯತೆಯನ್ನು ಹೊಂದಿದ್ದಳು ಚೆನ್ನಮ್ಮ ಎಂದು ಸವಿವರವಾಗಿ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಹೆಚ್.ಪಿ ತಾರಾನಾಥ್, ಆರಕ್ಷಕ ನಿರೀಕ್ಷಕರಾದ ಅನು, ತಹಸೀಲ್ದಾರರಾದ ನಾಗರಾಜು, ಸಮುದಾಯದ ಮುಖಂಡರು, ಮತ್ತಿತರರು ಉಪಸ್ಥಿತರಿದ್ದರು.

# ಅ.26 ರಂದು ದೊಡ್ಡಬಾತಿಯಲ್ಲಿ ಗುರುವಂದನಾ ಕಾರ್ಯಕ್ರಮ

**ದಾವಣಗೆರೆ:** ಕರ್ನಾಟಕ ಪಬ್ಲಿಕ್ ಶಾಲೆ ಪ್ರೌಢಶಾಲಾ ವಿಭಾಗ ದೊಡ್ಡಬಾತಿಯ 2004–25ನೇ ಸಾಲಿನ ಹೈಸ್ಕೂಲ್ ವಿದ್ಯಾರ್ಥಿ ಬಳಗದಿಂದ ಶಾಲೆಯ ಆವರಣದಲ್ಲಿ ಅ.26 ರಂದು ಗುರುವಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬಳಗದ ಕೆ.ಪಿ.ಶಿವರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 9 ಗಂಟೆಗೆ ಗ್ರಾಮದ ಶ್ರೀರೇವಣಸಿದ್ದೇಶ್ವರ ದೇವಸ್ಥಾನದಿಂದ ಶಾಲೆಯ ಆವರಣದವರೆಗೆ 2004–25 ಸಾಲಿನಲ್ಲಿ ಶಾಲೆಯಲ್ಲಿದ್ದ 15 ಶಿಕ್ಷಕರನ್ನು ಮೆರವಣಿಗೆ ಮೂಲಕ ಕರೆತರಲಾಗುವುದು. ನಂತರ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಶಾಲೆಯ ಉಪಪ್ರಾಂಶುಪಾಲ ಕೆ.ಹೆಚ್. ಬೀರಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ದೊಡ್ಡಬಾತಿ ಗ್ರಾಮಪಂಚಾಯತಿ ಚುನಾಯಿತರು, ಶಾಲೆಯ ಎಸ್.ಡಿ.ಎಂ.ಸಿ. ಸದಸ್ಯರು ಹಾಗೂ ಗ್ರಾಮದ ಮುಖಂಡರು ಸೇರಿದಂತೆ ಸುಮಾರು 100 ಹಳೇ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದರು.

ಹಳೇ ವಿದ್ಯಾರ್ಥಿಗಳಿಂದ ಶಾಲೆಗೆ ಸುಮಾರು 35 ಸಾವಿರ ರೂ.ಗಳ ಇಂಟರ್‌ಕಾಮ್ ಸೌಂಡ್ ಸಿಸ್ಟಮ್ ನೀಡಲು ನಿರ್ಧರಿಸಿದ್ದು, ಅದನ್ನು ಶಿಕ್ಷಕರಿಂದಲೇ ಶಾಲೆಗೆ ಸಮರ್ಪಿಸಲಾಗುವುದು. ವೇದಿಕೆ ಕಾರ್ಯಕ್ರಮದ ನಂತರ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕೆ.ಪಿ.ಶಿವರಾಜ್, ಎನ್.ಎ.ಆದರ್ಶ, ಸಿದ್ದೇಶ್, ಸಂತೋಷ್ ಕುಮಾರ್, ಇರ್ಷದ್, ಚನ್ನೇಶ್ ಎಲಿಗಾರ್, ಮಂಜುನಾಥ್ ಎ.ಎನ್., ಸಿದ್ದೇಶ ಎಂ, ಆಶಾದೇವಿ ಎನ್.ವಿ., ಗಂಗಮ್ಮ, ಮಂಜುಳ ಇದ್ದರು.

# ಶ್ರೀ ಹಾಸನಾಂಬ ದೇವಿ ದರ್ಶನಕ್ಕೆ ತೆರೆ



**ಹಾಸನ :** ವರ್ಷಕ್ಕೊಮ್ಮೆ ದರ್ಶನ ನೀಡುವ ಶ್ರೀ ಹಾಸನಾಂಬ ದೇವಿಗೆ ಶಾಸ್ತ್ರೋಕ್ತವಾಗಿ ಪೂಜೆ ಸಲ್ಲಿಸಿ ಇಂದು ಮ.1.06 ನಿಮಿಷಕ್ಕೆ ಬಾಗಿಲು ಮುಚ್ಚಲಾಯಿತು.

ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣಬೈರೇಗೌಡ, ರಾಜ್ಯ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಸಂಸದರಾದ ಶ್ರೇಯಸ್ ಎಂ ಪಟೇಲ್, ಶಾಸಕರಾದ ಸ್ವರೂಪ್ ಪ್ರಕಾಶ್, ಶಾಸಕರಾದ ಸಿಮೆಂಟ್ ಮಂಜು, ಮಹಾನಗರ ಪಾಲಿಕೆಯ ಮೇಯರ್ ಗಿರೀಶ್ ಚನ್ನವೀರಪ್ಪ,ಉಪ ಮೇಯರ್ ಹೇಮಾಲತಾ, ಜಿಲ್ಲಾಧಿಕಾರಿ ಲತಾ ಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಪೂರ್ಣಿಮಾ, ಆಡಳಿತಾಧಿಕಾರಿ ಮಾರುತಿ ಮತ್ತಿತರರ ಸಮ್ಮುಖದಲ್ಲಿಂದು ಶ್ರೀ ಹಾಸನಾಂಬ ದೇವಿ ದೇವಾಲಯದ ಬಾಗಿಲು ಮುಚ್ಚುವ ಮೂಲಕ ಇಂದಿನ ವರ್ಷದ ಶ್ರೀ ಹಾಸನಾಂಬ ದೇವಿ ದರ್ಶನ ಹಾಗೂ ಶ್ರೀ ಸಿದ್ದೇಶ್ವರ ಜಾತ್ರಾ ಮಹೋತ್ಸವಕ್ಕೆ ತೆರೆ ಎಳೆಯಲಾಯಿತು.

# ಬ್ರಿಟಿಷರ ವಿರುದ್ಧ ಹೋರಾಡಿ ಮಹಿಳೆಯರಿಗೆ ಸ್ಪೂರ್ತಿಯಾಗಿದ್ದ ಕಿತ್ತೂರು ರಾಣಿ ಚೆನ್ನಮ್ಮ



**ಬಳ್ಳಾರಿ:** ಬ್ರಿಟಿಷರ ವಿರುದ್ಧ ಹೋರಾಡಿದ್ದ ಕೆಚ್ಚೆದೆಯ ಸ್ವಾತಂತ್ರ ಹೋರಾಟಗಾರ್ತಿ ಕಿತ್ತೂರು ರಾಣಿ ಚೆನ್ನಮ್ಮ ಅವರು ಅನೇಕ ವೀರ ಮಹಿಳೆಯರಿಗೆ ಪ್ರೇರಣೆಯಾಗಿದ್ದಾರೆ ಎಂದು ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣದ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಸ್ವಾತಂತ್ರ ಹೋರಾಟಗಾರ್ತಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಜೀವನದಲ್ಲಿ ಹೋರಾಟ ಮತ್ತು ಭೌತಿಕವಾದ ಶಕ್ತಿ ಇರಬೇಕು. ಬುದ್ಧ, ಬಸವ, ಅಂಬೇಡ್ಕರ್ ಅವರ ಚಿಂತನೆ ಮತ್ತು ಆದರ್ಶ ವಿಚಾರಗಳನ್ನು ಪಾಲಿಸಿ ಮೌಲ್ಯಯುತ ಬದುಕನ್ನು ರೂಪಿಸಿಕೊಳ್ಳೋಣ ಎಂದು ಕರೆ ನೀಡಿದರು.

ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೊರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ್ಮಣ ಅವರು ಮಾತನಾಡಿ, ಕಿತ್ತೂರು ರಾಣಿ ಚೆನ್ನಮ್ಮ ಅವರು ಬ್ರಿಟಿಷರ ವಿರುದ್ಧ ಹೋರಾಡಿದ ವೀರ ಮಹಿಳೆ ಎನಿಸಿಕೊಂಡಿದ್ದರು. ಸಮಾಜಕ್ಕೆ ಅವರು ಅಪಾರ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, 12ನೇ ಶತಮಾನದಲ್ಲಿ ಬಸವಣ್ಣನವರು ಸಾರಿದ ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ನೀತಿಯನ್ನು ನಾವು ಅಳವಡಿಸಿಕೊಂಡಿದ್ದರೆ ಬ್ರಿಟಿಷರು ನಮ್ಮ ದೇಶಕ್ಕೆ ಬಂದು ದಾಳಿ ಮಾಡುತ್ತಿರಲ್ಲಿಲ್ಲ. ನಾವು ನಮ್ಮ ಮನಸಲ್ಲಿ ಮನೋವಾದ ತುಂಬಿಕೊಂಡಿದ್ದೇವೆ. ಜಾತಿ, ಧರ್ಮ, ಭೇದ–ಭಾವವಿಲ್ಲದೆ ನಾವೆಲ್ಲರೂ ಒಗ್ಗಟ್ಟಾಗಿ ಜೀವನ ನಡೆಸಬೇಕು ಎಂದರು.

ಮೋಕಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ.ಕಲಾವತಿ ಬಿ.ಜಿ ಮಾತನಾಡಿ, ಶ್ರೇಷ್ಠ ವೀರನಾರಿ ಕಿತ್ತೂರು ರಾಣಿ ಚೆನ್ನಮ್ಮ ಅವರು ಕೇವಲ ತಮ್ಮ ಸಮುದಾಯಕ್ಕೆ ಸೀಮಿತವಾಗಿರದೇ, ಬ್ರಿಟಿಷರ ವಿರುದ್ಧ ಹೋರಾಡಿದ ಸ್ವಾತಂತ್ರ ಹೋರಾಟಗಾರ್ತಿಯಾಗಿದ್ದಾರೆ. ನಮ್ಮ ದೇಶದ ಸ್ವಾತಂತ್ರ ದಿನಾಚರಣೆಯಲ್ಲಿ ಪ್ರಸಿದ್ಧ ಕಪ್ಪ ಕಾಣಿಕೆಯ ಪ್ರಸಂಗ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ಅವರ ವೇಷ ಭೂಷಣ ಧರಿಸುವುದು ವಿಶೇಷವಾಗಿದೆ ಎಂದು ಹೇಳಿದರು.

ಕಿತ್ತೂರು ಚೆನ್ನಮ್ಮ ಅವರು 1778 ರ ಅಕ್ಟೋಬರ್ 23 ರಂದು ಬೆಳಗಾವಿ ಜಿಲ್ಲೆಯ ಕಾಕತಿ ಎಂಬ ಸಣ್ಣ ಹಳ್ಳಿಯಲ್ಲಿ ತಂದೆ ದೂಳಪ್ಪ, ತಾಯಿ ಪದ್ಮಾವತಿ ಮಗಳಾಗಿ ಜನಿಸಿದರು. ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ ಸೇರಿದ ಅವರು ಚಿಕ್ಕಂದಿನಿಂದಲೇ ಕುದುರೆ ಸವಾರಿ, ಕತ್ತಿವರಸೆ ಮತ್ತು ಬಿಲ್ಲುಗಾರಿಕೆಯಲ್ಲಿ ತರಬೇತಿ ಪಡೆದಿದ್ದರು. ಅವರು ದೇಸಾಯಿ ಮನೆತನದ ರಾಜಾ ಮಲ್ಲಸರ್ಜ ಅವರನ್ನು 15 ನೇ ವಯಸ್ಸಿನಲ್ಲಿ ವಿವಾಹವಾದರು ಎಂದು ಅವರ ಜೀವನದ ಬಗ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿಯ ಕು. ಜಯಲಕ್ಷ್ಮೀ ಎಂ.ಎಸ್ ಅವರು ವಚನ ಸಂಗೀತ ಪ್ರಸ್ತುತ ಪಡಿಸಿದರು. ಕಾರ್ಯಕ್ರಮಕ್ಕೂ ಮುನ್ನ ಸಂವಿಧಾನದ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು.

ಸ್ವಾತಂತ್ರ ಹೋರಾಟಗಾರ್ತಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಮೆರವಣಿಗೆಯು ಕಿತ್ತೂರು ರಾಣಿ ಚೆನ್ನಮ್ಮ ಭಾವಚಿತ್ರದೊಂದಿಗೆ ವಿವಿಧ ಕಲಾ ವಾದ್ಯಗಳ ಮೂಲಕ ನಗರದ ಮುನ್ಸಿಪಾಲ್ ಕಾಲೇಜು ಮೈದಾನದಿಂದ ಆರಂಭಗೊಂಡು ಇಂದಿರಾ ವೃತ್ತ, ಡಾ.ರಾಜ್ ಕುಮಾರ್ ರಸ್ತೆಯ ಮೂಲಕ ಸಾಂಸ್ಕೃತಿಕ ಸಮುಚ್ಚಯ ಸಂಭಾಗಣ ಕಾರ್ಯಕ್ರಮದವರೆಗೆ ತಲುಪಿ ಸಂಪನ್ನಗೊಂಡಿತು.

# ಅ.25 ರಂದು 'ಮಾದರಿ ಉದ್ಯಾನವನ' ಉದ್ಘಾಟನಾ ಸಮಾರಂಭ

**ಬಳ್ಳಾರಿ:** ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಆದರ್ಶ ಉದ್ಯಾನವನ ಅಭಿವೃದ್ಧಿ ಸಂಘ ಇವರ ಸಹಯೋಗದಲ್ಲಿ ಅ.25 ರಂದು ಸಂಜೆ 05 ಗಂಟೆಗೆ ನಗರದ ಜಿಎಸ್‌ಟಿ ಆಫೀಸ್ ಹತ್ತಿರದ ವಾರ್ಡ್ ನಂ.20 ರ ರಾಘವೇಂದ್ರ ಕಾಲೋನಿಯ 2ನೇ ಹಂತದಲ್ಲಿ 'ಮಾದರಿ ಉದ್ಯಾನವನ' ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಮತ್ತು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರು ಉದ್ಘಾಟಿಸುವರು.ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರೂ ಆದ ಕಂಪ್ಲಿ ಶಾಸಕ ಜೆ.ಎನ್. ಗಣೇಶ್, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಬೆಂಗಳೂರಿನ ಬಹು ಮಹಡಿಗಳ ಕಟ್ಟಡದ ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಆಯುಕ್ತಾಲಯದ ಆಯುಕ್ತ ವೆಂಕಟಚಲಪತಿ ಆರ್., ಅಧಿಕಾರಿ–ಸಿಬ್ಬಂದಿ ವರ್ಗ ಮತ್ತು ಸಾರ್ವಜನಿಕರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಆರೈಕೆದಾರರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನ

**ಹಾಸನ :** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2025ನೇ ಸಾಲಿನಿಂದ 2025–26ನೇ ಸಾಲಿನಿಂದ Cerebral Palsy, Muscular Dystrophy, Parkinson's Disease, Multiple Sclerosis Autism, intellectual disabilit, and Multiple disability (Hearing impaired and Blindness)ಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಲ್ಲಿ ಉತ್ತಮ ಆರೈಕೆದಾರರಿಗೆ ರಾಜ್ಯ ಪ್ರಶಸ್ತಿ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅರ್ಜಿದಾರರು ಈ ಕೆಳಕಂಡ ಮೇಲ್ ಐಡಿ ಗೆ ಭರ್ತಿ ಮಾಡಿದ ಅರ್ಜಿ ನಮೂನೆಯ ಜೊತೆಗೆ ಪೂರಕ ದಾಖಲಾತಿಗಳನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡುವುದು. ಇ–ಮೇಲ್ ವಿಳಾಸಕ್ಕೆ (eddanhatti@gmail.com) ಕಳುಹಿಸಿಕೊಡಬಹುದಾಗಿದೆ. ಖುದ್ದು ಅಥವಾ ನೇರವಾಗಿ ಅರ್ಜಿ ಸಲ್ಲಿಸುವ ಅರ್ಜಿದಾರರು ಈ ಕೆಳಕಂಡ ವಿಳಾಸಕ್ಕೆ ಭರ್ತಿ ಮಾಡಿದ ಅರ್ಜಿಯ ನಮೂನೆ ಮತ್ತು ಪೂರಕ ದಾಖಲಾತಿಗಳನ್ನು ಸಲ್ಲಿಸುವುದು. (ಶ್ರೀಮತಿ ಉಷಾ ಕೆ ಸಹಾಯಕ ಆಡಳಿತ ಅಧಿಕಾರಿಗಳು, ಸಿ.ಬಿ.ಎಂ ಇಂಡಿಯಾ ಟ್ರಸ್ಟ್ #140, ಕಮರ್ ಕ್ಯೂಬ್, 5ನೇ ಮುಖ್ಯ ರಸ್ತೆ, ಪುಟ್ಟಣ ಚೆಟ್ಟಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು–560018, ದೂರವಾಣಿ ಸಂಖ್ಯೆ–080–26673635ಕ್ಕೆ ಸಂಪರ್ಕಿಸಬಹುದಾಗಿದೆ.

# ಆಗ್ನೇಯ ಪದವೀಧರ ಕಾಂಗ್ರೆಸ್ ಪಕ್ಷದ ಟಿಕೆಟ್ ಆಕಾಂಕ್ಷಿಯಾಗಿ ಅನೀಸ್ ಪಾಷ

**ದಾವಣಗೆರೆ:** ಆಗ್ನೇಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ-2026 ಮತದಾರರ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅರ್ಹ ಮತದಾರರು ತಮ್ಮ ಹೆಸರನ್ನು ನೋಂದಾವಣೆ ಮಾಡಿಸುವಂತೆ ಆಗ್ನೇಯ ಪದವೀಧರ ಕಾಂಗ್ರೆಸ್ ಪಕ್ಷದ ಟಿಕೆಟ್ ಆಕಾಂಕ್ಷಿ ಅನೀಸ್ ಪಾಷ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಗ್ನೇಯ ಪದವೀಧರ ಕ್ಷೇತ್ರಕ್ಕೆ 2026ರಲ್ಲಿ ಚುನಾವಣೆ ನಡೆಯಲಿದ್ದು ಚುನಾವಣಾ ಆಯೋಗದ ಅಧಿಸೂಚನೆಯ ಪ್ರಕಾರ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೊಂದಯಿಸಿಕೊಳ್ಳಲು ಬರುವ ನವಂಬರ್ 6ರಂದು ಕೊನೆಯ ದಿನವಾಗಿರುತ್ತದೆ. ಆದ್ದರಿಂದ ಗಜೆಟೆಡ್ ಅಧಿಕಾರಿಗಳಿಂದ ದೃಢೀಕೃತ ದಾಖಲೆಗಳೊಂದಿಗೆ ನವಂಬರ್ 6ರ ಒಳಗಾಗಿ ನಿಗದಿಪಡಿಸಿದ ಚುನಾವಣಾ ಅಧಿಕಾರಿಗಳಿಗೆ ಅರ್ಜಿ ಸಲ್ಲಿಸಿ ಸ್ವೀಕೃತಿ ಪಡೆಯುವಂತೆ ಅವರು ತಿಳಿಸಿದರು.

ಕಳೆದ 30 ವರ್ಷಗಳಿಂದ ವಿವಿಧ ನ್ಯಾಯಾಲಯಗಳಲ್ಲಿ ನ್ಯಾಯವಾದಿಯಾಗಿ ಬಡವರ, ರೈತರ, ಶೋಷಿತರ, ದಲಿತ ದಮನಿತರಿಗೆ ನ್ಯಾಯ ಕೊಡಿಸುವ ನಿಟ್ಟಿನಲ್ಲಿ ಕೆಲಸ ಮಾಡಿರುತ್ತೇನೆ ಹಾಗೂ ಹಲವಾರು ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯವಾಗಿ ಕಾರ್ಯಕರ್ತನಾಗಿ ಕೆಲಸ ಮಾಡಿಕೊಂಡು ಬಂದಿರುತ್ತೇನೆ. ಈಗಾಗಲೇ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕರೆ ನೀಡಿದ ಆಧಾರದ ಮೇರೆಗೆ ಅಧಿಕೃತವಾಗಿ ಅರ್ಜಿಯನ್ನು ಪಕ್ಷದ ವರಿಷ್ಠರಿಗೆ ಸಲ್ಲಿಸಿದ್ದು ಟಿಕೆಟ್ ಸಿಗುವ ನಿರೀಕ್ಷೆ ಇದೆ. ಪ್ರಜ್ಞಾವಂತರು ನಮ್ಮನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜಸ್ಟಿನ್ ಜಯಕುಮಾರ್, ಆಂಜನೇಯ ಗುರೂಜಿ, ಎಂ.ನಾಗೇಂದ್ರಪ್ಪ, ಹನೀಫ್, ನಾಗರಾಜ, ಅರುಣ್ ಕುಮಾರ್ ಇದ್ದರು.

# ಹೋರಾಟದಲ್ಲಿ ಮಡಿದವರ ಕುಟುಂಬಗಳಿಗೆ ಕಾಂಗ್ರೆಸ್ ಏನು ಸಹಾಯ ಮಾಡಿದೆ ತಿಳಿಸಿಲಿ: ಯಶವಂತ್‌ರಾವ್ ವಾಗ್ದಾಳಿ

**ದಾವಣಗೆರೆ:** ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಮಡಿದ ಜಿಲ್ಲೆಯ 6 ಜನ ಹಾಗೂ ರಾಮಜ್ಯೋತಿ ಸಮಯದಲ್ಲಿ ಮಡಿದ 8 ಕುಟುಂಬಗಳಿಗೆ ಜಿಲ್ಲಾ ಕಾಂಗ್ರೆಸ್ ಪಕ್ಷ ಏನು ಮಾಡಿದೆ ತಿಳಿಸಲಿ ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಯಶವಂತರಾವ್ ಜಾಧವ್ ಸವಾಲು ಹಾಕಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಜಿಲ್ಲೆಯಲ್ಲಿನ ಹೋರಾಟಗಾರರಿಗೆ ಏನು ಮಾಡಿಲ್ಲ. ಅವರದ್ದು ಬರೀ ರಾಜಕೀಯ ಎನ್ನುವ ಕಾಂಗ್ರೆಸ್‌ನ ದಿಬೇಶ್ ಶೆಟ್ಟಿ. ಸ್ವಾತಂತ್ರಕ್ಕೋಸ್ಕರ ಭಾರತ್ ವಿಮೋಚನಾ ಚಳುವಳಿಯಲ್ಲಿ ಹೋರಾಡಿ ಬ್ರಿಟಿಷರ ಗುಂಡಿಗೆ ಬಲಿಯಾದ ನಗರದ ಹಳ್ಳೂರು ನಾಗಪ್ಪ, ಅಕ್ಕಾಲಿ ವಿರೂಪಾಕ್ಷಪ್ಪ, ಬಿದರಕುಂದಿ ನಿಂಗಪ್ಪ, ಹಮಾಲಿ ತಿಮ್ಮಣ್ಣ, ಹದಡಿ ನಿಂಗಪ್ಪ, ಮಾಗನಹಳ್ಳಿ ಹನುಮಂತಪ್ಪ ಈ ಆರು ಜನರ ಕುಟುಂಬಕ್ಕೆ ನಗರಾಭಿವೃದ್ಧಿ ಪ್ರಾಧಿಕಾರದಿಂದ ಎಷ್ಟು ಸೈಟ್‌ಗಳನ್ನ ಕೊಡಿಸಿದ್ದಾನೆ. ಹಾಗೂ ಶಾಮನೂರು ಕುಟುಂಬ ಇವರಿಗೆ ಎಷ್ಟು ಬಂಗಲೆಗಳನ್ನು ಕಟ್ಟಿಸಿ ಕೊಟ್ಟಿದ್ದಾರೆ ಇವರ ಮನೆಗಳಿಗೆ ಎಷ್ಟು ಹಣದ ಸಹಾಯ ಮಾಡಿದ್ದಾರೆ ಎಂಬುದನ್ನು ಮೊದಲು ಸಾರ್ವಜನಿಕವಾಗಿ ತಿಳಿಸಿಲಿ ಎಂದು ಸವಾಲು ಹಾಕಿದರು.

ಹಿಂದೂ ಧರ್ಮದ ಹೋರಾಟಕ್ಕೆ ಬಡವರ ಮಕ್ಕಳನ್ನು ಬಿಜೆಪಿ ಬಳಸಿಕೊಳ್ಳುತ್ತಿದೆ ಎನ್ನುವ ದಿನೇಶ್ ಶೆಟ್ಟಿ ಮತ್ತು ಅವರ ಅಪ್ಪ ಯಾವ ಹೋರಾಟದಲ್ಲಿ ಭಾಗವಹಿಸಿದ್ದರು? ಶಾಮನೂರು ಶಿವಶಂಕರಪ್ಪ, ಎಸ್.ಎಸ್.ಮಲ್ಲಿಕಾರ್ಜುನ್ ಹಾಗೂ ಪ್ರಭಾ ಮಲ್ಲಕಾರ್ಜುನ್ ಯಾವ ಹೋರಾಟದಲ್ಲಿ ಭಾಗವಹಿಸಿದ್ದರು. ಎಷ್ಟು ಬಾರಿ ಜೈಲಿಗೆ ಹೋಗಿಬಂದಿದ್ದಾರೆ ಅನ್ನುವುದನ್ನು ಸಾರ್ವಜನಿಕವಾಗಿ ತಿಳಿಸಲಿ ಎಂದ ಅವರು, ಮೊದಲು ಅಧಿಕಾರದಲ್ಲಿದ್ದ ಮಾಜಿ ಶಾಸಕ ಸಿದ್ದವೀರಪ್ಪ ಅವರ ಬಳಿ ನೀನು, ನಿನ್ನ ಅಪ್ಪ ಸೇವೆ ಮಾಡುತಿದ್ರಿ. ಈಗ ಶಾಮನೂರು ಕುಟುಂಬಕ್ಕೆ ಶಿಫ್ಟ್ ಆಗಿ ಸೇವೆ ಮಾಡುತ್ತಿದ್ದೀರಿ. ಅದೇ ಸೇವೆಯಿಂದಲೇ ನೀನು ದೂಡ ಅಧ್ಯಕ್ಷ ಆಗಿದ್ದು ಎಂದು ದಿನೇಶ್ ಶೆಟ್ಟಿ ವಿರುದ್ಧ ಕಿಡಿಕಾರಿದರು.

ನಗರಕ್ಕೆ ರಾಮಜ್ಯೋತಿ ಆಗಮಿಸಿದ ಸಂದರ್ಭದಲ್ಲಿ ಮಡಿದ ಸಂಬಂಧಿಯಾದ ಚೇತು ಬಾಯಿ ಮಾತನಾಡಿ, ಕಾಂಗ್ರೆಸ್‌ನವರು ಒಣ ರಾಜಕೀಯ ಮಾಡಲು ಹೋರಾಟದಲ್ಲಿ ಮಡಿದ ನಮ್ಮನ್ನು ಸೇರಿದಂತೆ 8 ಜನ ಕುಟುಂಬದ ಹೆಸರುಗಳನ್ನು ಬಳಸಿಕೊಳ್ಳುತ್ತಿದ್ದಾರೆ. ಇವರುಗಳು ನಮಗೆ ಏನೂ ಮಾಡಿಲ್ಲ. ಇದೇ ರೀತಿ ಶೆಟ್ಟಿ ಆಗಲಿ ಕಾಂಗ್ರೆಸ್‌ನವರಾಗಲಿ ನಮ್ಮ ಹೆಸರು ಬಳಸಿಕೊಂಡರೆ ಪರಿಣಾಮ ಬೇರೇನೆ ಆಗಿರುತ್ತೆ ಎಂದು ಎಚ್ಚರಿಕೆ ನೀಡಿದರು.

ಮಾಜಿ ದೂಡ ಅಧ್ಯಕ್ಷ ರಾಜನಹಳ್ಳಿ ಶಿವಕುಮಾರ್ ಮಾತನಾಡಿ, ದಿನೇಶ್ ಶೆಟ್ಟಿ ಒಬ್ಬ ಅವಿವೇಕಿ. ನಮಗೆ ನಿವೇಶನ ನೀಡಲಿ, ಹಣ ನೀಡಲಿ ಎಂದು ಯಾರೂ ಸ್ವಾತಂತ್ರ್ಯಕ್ಕಾಗಿ ಹಾಗೂ ರಾಮಮಂದಿರ ನಿರ್ಮಾಣಕ್ಕಾಗಿ ಹೋರಾಟ ಮಾಡಲಿಲ್ಲ ಎಂದು ಅರಿಯಬೇಕು ಎಂದ ಅವರು, ಅಯೋಧ್ಯಗೆ ನಾವೂ ಹಾಗೂ ವಿರಕ್ತ ಮಠದ ಶ್ರೀ ಬಸವ ಪ್ರಭು ಸ್ವಾಮಿಗಳು ಹೋಗಿ ಅಲ್ಲಿನ ಗೋವಿಂದರಾಜ ಸ್ವಾಮಿಗಳಿಗೆ ಬೆಳ್ಳಿ ಇಟ್ಟಿಗೆ ಸಮರ್ಪಿಸಿದ್ದೇವೆ. ಈ ಅಯೋಗ್ಯ ದಿನೇಶ್ ಶೆಟ್ಟಿ ಸಾರ್ವಜನಿಕರಿಗೆ ತಪ್ಪು ಮಾಹಿತಿ ನೀಡುವ ಮೊದಲು ಬಸವಪ್ರಭು ಸ್ವಾಮಿಗಳನ್ನು ವಿಚಾರಿಸಲಿ ಎಂದು ಏಕವಚನದಲ್ಲೇ ತಿರುಗೇಟು ನೀಡಿದರು.

ಸುದ್ದಿಗೋಷ್ಠಿಯಲ್ಲಿ ಟಿಂಕರ್ ಮಂಜಣ್ಣ, ಪರುಶುರಾಮ್, ಬಾಲಚಂದ್ರ, ಶಿವನಗೌಡ ಪಾಟೀಲ್, ಗೋವಿಂದ್ ರಾಜು ಇತರರು ಇದ್ದರು.

# ಅ.28 ರಂದು ಸುವರ್ಣ ಮಹೋತ್ಸವ

**ಹಾಸನ :** ಜಿಲ್ಲಾಡಳಿತ ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆಯ ಸಹಯೋಗದಲ್ಲಿ ಅ.28 ರಂದು ಮ.02 ಗಂಟೆಗೆ ಹಾಸನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮೈದಾನದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನೆಲೆಯಲ್ಲಿ ಸುವರ್ಣ ಮಹೋತ್ಸವವನ್ನು ಆಯೋಜಿಸಲಾಗಿದೆ.

ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಹೆಚ್.ಡಿ.ದೇವೇಗೌಡ ಅವರು ಘನ ಉಪಸ್ಥಿತಿವಹಿಸಲಿದ್ದಾರೆ. ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಭೈರೇಗೌಡ, ಇಂದನ ಸಚಿವರು ಹಾಗೂ ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಜೆ ಜಾರ್ಜ್ ಅವರು ಗೌರವ ಉಪಸ್ಥಿತಿವಹಿಸಲಿದ್ದಾರೆ.ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆಯ ಸಚಿವರಾದ ಈಶ್ವರ್ ಖಂಡ್ರೆ ಅವರು ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಿದ್ದಾರೆ. ಕನಾಟಕ ವಿಧಾನ ಪರಿಷತ್ ಉಪ ಸಭಾಪತಿಗಳಾದ ಎಂ.ಕೆ ಪ್ರಾಣೇಶ್, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಹಾಗೂ ಮಳವಳ್ಳಿಯ ಶಾಸಕರಾದ ಪಿ.ಎಂ ನರೇಂದ್ರಸ್ವಾಮಿ, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶೃಂಗೇರಿಯ ಶಾಸಕರಾದ ಬಿ.ಡಿ ರಾಜೇಗೌಡ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ ಶ್ರೀನಿವಾಸ್ ಅವರು ಗೌರವ ಉಪಸ್ಥಿತಿವಹಿಸಲಿದ್ದಾರೆ. ಶಾಸಕರಾದ ಸ್ವರೂಪ್ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಹಾಸನದ ಸಂಸದರಾದ ಶ್ರೇಯಸ್ ಎಂ.ಪಟೇಲ್, ಚಿಕ್ಕಮಗಳೂರು ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ಹನಿವಾಸಿ, ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ಶಾಸಕರುಗಳಾದ ಹೆಚ್.ಡಿ.ರೇವಣ್ಣ, ಡಾ.ಸಿ.ಎನ್.ಬಾಲಕೃಷ್ಣ, ಎ.ಮಂಜು, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು,ಸರ್ಜಿ ಅವರು ಭಾಗವಹಿಸಲಿದ್ದಾರೆ.

# ಅ.27-ನ.15: ವನ್ಯಜೀವಿ ಸಂರಕ್ಷಣೆಯ ಬಗ್ಗೆ ಜಾಗೃತಿ ಕಾರ್ಯಕ್ರಮ

**ಚಿಕ್ಕಮಗಳೂರು:** ಜಿಲ್ಲೆಯ ವೈಲ್ಡ್‌ಕ್ಯಾಟ್-ಸಿ. ತಂಡದ ಆಶ್ರಯದಲ್ಲಿ ಅರಣ್ಯ ಇಲಾಖೆಯ ಸಹಕಾರದೊಂದಿಗೆ ವನ್ಯಜೀವಿ ಸಂರಕ್ಷಣೆಯ ಬಗ್ಗೆ ಜಾಗೃತಿ ಕಾರ್ಯಕ್ರಮ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಅಕ್ಟೋಬರ್ 27 ರಿಂದ ನವೆಂಬರ್ 15ರವರೆಗೆ ನಡೆಯಲಿದೆ.

ಈ ಕಾರ್ಯಕ್ರಮ ಪೂರ್ವ ಪ್ರಾಥಮಿಕದಿಂದ ಆರಂಭವಾಗಿ ಪ್ರೌಢಶಾಲೆ, ಕಾಲೇಜು ಮಟ್ಟದವರೆಗೆ ಹಾಗೂ ಶಾಲಾ ಶಿಕ್ಷಕರು ಮತ್ತು ಸಾರ್ವಜನಿಕರು ಭಾಗವಹಿಸುವಂತೆ ಏರ್ಪಡಿಸಲಾಗಿದೆ.

ಪ್ರಕೃತಿ ಬಗ್ಗೆ ಜಾಗೃತಿ ಕಾರ್ಯಕ್ರಮ ಅನುಕ್ರಮವಾಗಿ ಮುತ್ತೋಡಿ ವಲಯದಲ್ಲಿ ಅಕ್ಟೋಬರ್ 28 ಮತ್ತು 30 ಹಾಗೂ ನವೆಂಬರ್ 3 ರಂದು ನಡೆಯಲಿದ್ದರೆ, ಹೆಬ್ಬೆ ವಲಯದಲ್ಲಿ ಅಕ್ಟೋಬರ್ 27 ರಂದು, ಲಕ್ಕವಳ್ಳಿಯಲ್ಲಿ 29 ರಂದು ಹಾಗೂ ತಣಿಗೆಬೈಲಿನಲ್ಲಿ ಅಕ್ಟೋಬರ್ 31 ರಂದು ನಡೆಯಲಿವೆ.

ನಗರದ ಸ್ಕೌಟ್ ಭವನದಲ್ಲಿ ನವೆಂಬರ್ 4 ರಂದು ಮಧ್ಯಾಹ್ನ 2 ಗಂಟೆಯಿಂದ ಮಣ್ಣಿನಲ್ಲಿ ವನ್ಯಜೀವಿ ಪ್ರತಿಕೃತಿ ರಚನೆ ಮಾಡುವ ಸ್ಪರ್ಧೆಯನ್ನು ಕಿರಿಯ, ಹಿರಿಯ ಪ್ರಾಥಮಿಕ, ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿದೆ.

ನವೆಂಬರ್ 5 ರಂದು ಮಧ್ಯಾಹ್ನ 2 ರಿಂದ ಪ್ರೌಢಶಾಲೆ ಮತ್ತು ಪದವಿ ಪೂರ್ವ ಮತ್ತು ಪದವಿ ಕಾಲೇಜು ವಿದ್ಯಾರ್ಥಿಗಳಿಗಾಗಿ 'ಉಳಿದಿರುವ ಕಾಡುಗಳು, ಸಂರಕ್ಷಿತ ಪ್ರದೇಶಗಳು, ಅಭಯಾರಣ್ಯಗಳನ್ನು ನಾವು ಮಾನವರ ಉಪಯೋಗಕ್ಕಾಗಿ ಬಳಸಿಕೊಳ್ಳಬೇಕೆ?' ಎಂಬ ಬಗ್ಗೆ ಪ್ರಬಂಧ ಸ್ಪರ್ಧೆ ನಡೆಯಲಿದೆ.

ಆಶು ಭಾಷಣ ಸ್ಪರ್ಧೆ ನವೆಂಬರ್ 6 ರಂದು ಮಧ್ಯಾಹ್ನ 2 ರಿಂದ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜು ಮತ್ತು ಕಾಲೇಜು ವಿದ್ಯಾರ್ಥಿಗಳಿಗಾಗಿ ನಡೆಯಲಿದ್ದರೆ,

ನವೆಂಬರ್ 7 ರಂದು ಮಧ್ಯಾಹ್ನ 2 ಗಂಟೆಯಿಂದ ರಸಪ್ರಶ್ನೆ ಸ್ಪರ್ಧೆ ಪ್ರೌಢಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗಾಗಿ 'ಭಾರತೀಯ ಪರಿಸರ ಮತ್ತು ವನ್ಯಜೀವಿಗಳು'

ಕುರಿತು ನಡೆಯಲಿವೆ. ನವೆಂಬರ್ 8 ರಂದು ಮಧ್ಯಾಹ್ನ 2 ರಿಂದ ಪರಿಸರ ಮತ್ತು ವನ್ಯಜೀವಿಗಳ ಬಗ್ಗೆ ರಂಗೋಲಿ ಸ್ಪರ್ಧೆಯನ್ನು ಏರ್ಪಡಿಸಿದ್ದು, ಈ ಸ್ಪರ್ಧೆಯಲ್ಲಿ ಪ್ರೌಢಶಾಲೆ, ಪ.ಪೂ. ಕಾಲೇಜು ಮತ್ತು ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಬಹುದಾಗಿದೆ.

ನವೆಂಬರ್ 9 ರಂದು ಬೆಳಿಗ್ಗೆ 10 ರಿಂದ ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆ ನಡೆಯಲಿದ್ದು, ಪೂರ್ವ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು ಹೂವುಗಳ ಬಗ್ಗೆ, ಕಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು ಭಾರತೀಯ

ಚಿಟ್ಟೆಗಳ ಬಗ್ಗೆ, ಹಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಮತ್ತು ಮಧ್ಯಾಹ್ನ 2 ರಿಂದ ಪ್ರೌಢಶಾಲೆ, ಪ.ಪೂ. ಕಾಲೇಜು ಹಾಗೂ ಚಿತ್ರಕಲಾ ಕಾಲೇಜು ವಿದ್ಯಾರ್ಥಿಗಳು, ವೃತ್ತಿಪರರು ಹಾಗೂ ಸಾರ್ವಜನಿಕರಿಗೆ ಭಾರತೀಯ ಹಕ್ಕಿಗಳ ಚಿತ್ರ ಬರೆಯುವ ಸ್ಪರ್ಧೆ ನಡೆಯಲಿದೆ.

ನ.10 ರಂದು ಮಧ್ಯಾಹ್ನ 2 ಗಂಟೆಯಿಂದ ಭಾರತೀಯ ವನ್ಯಜೀವಿಗಳ ಮುಖ ಚಿತ್ರಣ ರಚಿಸುವ ಸ್ಪರ್ಧೆ ಪ್ರೌಢಶಾಲೆ, ಪದವಿ ಪೂರ್ವ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಆರಂಭವಾಗಲಿದೆ. ನವೆಂಬರ್ 11 ರಂದು ಮಧ್ಯಾಹ್ನ 2 ಗಂಟೆಯಿಂದ ಪರಿಸರ ಮತ್ತು ವನ್ಯಜೀವಿಗಳ ಸಂರಕ್ಷಣೆ ಬಗ್ಗೆ ಕಿರುನಾಟಕ ನಡೆಯಲಿದೆ.

ಪ್ರತೀ ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು ಮತ್ತು ಕಾಲೇಜಿನಿಂದ ತಲಾ ಐದು ಜನರ ಒಂದು ತಂಡ ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ.

ನವೆಂಬರ್ 12 ರಂದು ಮಧ್ಯಾಹ್ನ 2 ರಿಂದ ನಡೆಯುವ ಪರಿಸರ ಗೀತಗಾಯನ ಸ್ಪರ್ಧೆಯಲ್ಲಿ ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು ಮತ್ತು ಕಾಲೇಜಿನಿಂದ ಮೂವರ ಒಂದು ತಂಡ ಭಾಗವಹಿಸಬಹುದು. ನವೆಂಬರ್ 13 ರಂದು ಮಧ್ಯಾಹ್ನ 2 ರಿಂದ ಆಶು ಭಾಷಣ ಸ್ಪರ್ಧೆಯು ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ನಡೆಯಲಿದ್ದು, ಉಳಿದಿರುವ ಕಾಡುಗಳು, ಸಂರಕ್ಷಿತ ಪ್ರದೇಶಗಳು, ಅಭಯಾರಣ್ಯಗಳನ್ನು ನಾವು ಮಾನವರ ಉಪಯೋಗಕ್ಕಾಗಿ ಬಳಸಿಕೊಳ್ಳಬೇಕೆ? ಎಂಬ ವಿಷಯ ನೀಡಲಾಗಿದೆ. ವನ್ಯಜೀವಿ ಛಾಯಾಚಿತ್ರ ಸ್ಪರ್ಧೆಯಲ್ಲಿ ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು, ಕಾಲೇಜು, ಕರ್ನಾಟಕ ಅರಣ್ಯ ಇಲಾಖೆಯ ಅಧಿಕಾರಿ,

ಸಿಬ್ಬಂದಿ ಹಾಗೂ ಸಾರ್ವಜನಿಕರು ಭಾಗವಹಿಸಬಹುದಾಗಿದೆ. ಚಿತ್ರದ ಸಾಫ್ಟ್ ಪ್ರತಿಗಳನ್ನು ನವೆಂಬರ್ 13ರೊಳಗೆ ತಿಟಜಥಿಚಣಥಿ22@ರಟಚಿಟ.ಛಿಂಟ ಗೆ ಕಳುಹಿಸುವುದು. ಅಂದೇ ಪರಿಸರ ಮತ್ತು ವನ್ಯಜೀವಿ ಸಂರಕ್ಷಣೆ ಬಗ್ಗೆ 2 ನಿಮಿಷಗಳ ಕಿರುಚಿತ್ರ ಸ್ಪರ್ಧೆ ಈ ವಿಭಾಗದಲ್ಲೇ ನಡೆಯಲಿದೆ. ಈ ಕಿರುಚಿತ್ರವನ್ನು telegram ಆ್ಯಪ್‌ಗೆ ಕಳುಹಿಸಬೇಕಾಗಿದ್ದು, ಮೊಬೈಲ್ ಸಂಖ್ಯೆ (84314 41473) ಗೆ ಕಳುಹಿಸಬೇಕು. ಸೈಕಲ್ ತುಳಿ, ಪರಿಸರ ತಿಳಿ ಕಾರ್ಯಕ್ರಮ ನವೆಂಬರ್ 15 ರಂದು ಬೆಳಿಗ್ಗೆ 7 ಗಂಟೆಗೆ ನಗರದ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಿಂದ ಆರಂಭವಾಗಲಿದೆ. ಸ್ಪರ್ಧಿಗಳು ಬೆಳಿಗ್ಗೆ 7 ಗಂಟೆಗೆ ಹೆಸರು ನೋಂದಾಯಿಸಿಕೊಳ್ಳಬೇಕು. ಪೋಷಕರಿಂದ ನಿರಾಕ್ಷೇಪಣಾ ಪತ್ರ ಹಾಗೂ ಶಾಲೆಯಿಂದ ಅನುಮತಿ ಪತ್ರ ತರುವುದು ಕಡ್ಡಾಯ. ಸ್ಪರ್ಧಿಗಳಿಗೆ ಬೆಳಿಗ್ಗೆ ಉಪಾಹಾರ, ಮಧ್ಯಾಹ್ನ ಊಟದ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಸಂಘಟಕರು ತಿಳಿಸಿದ್ದಾರೆ.

# ದಾಖಲೆ ಪ್ರಮಾಣದಲ್ಲಿ ದೇವಿ ದರ್ಶನ

**ಹಾಸನ :** ಹಾಸನಾಂಬೆ ದರ್ಶನ ವಿಧ್ಯುಕ್ತವಾಗಿ ಇಂದು ಮುಕ್ತಾಯವಾಗಿದ್ದು, ಈ ಬಾರಿ ದಾಖಲೆ ಪ್ರಮಾಣದಲ್ಲಿ ಭಕ್ತರು ದೇವಿಯ ದರ್ಶನ ಪಡೆದಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.



ಇಂದು ಹಾಸನಾಂಬೆ ದೇವಾಲಯದ ಬಾಗಿಲು ಮುಚ್ಚಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಈ ಬಾರಿ 26.13 ಲಕ್ಷ ಜನರು ದರ್ಶನ ಪಡೆದಿದ್ದಾರೆ ಟಿಕೆಟ್ ಮತ್ತು ಲಾಡು ಪ್ರಸಾದ ಮಾರಾಟದಿಂದ 21.82 ಕೋಟಿ ಆದಾಯ ಬಂದಿದೆ ಎಂದರು.

ಹುಂಡಿ ಎಣಿಕೆ ನಂತರ ಒಟ್ಟಾರೆ 25 ಕೋಟಿ ಆದಾಯ ಬರುವ ಸಾಧ್ಯತೆ ಇದೆ ಎಂದು ವಿವರಿಸಿದರು. ಹುಂಡಿ ಎಣಿಕೆ ಕಾರ್ಯ ನಾಳೆ ನಡೆಯಲಿದೆ.

ಕಳೆದ ವರ್ಷ 17.47 ಲಕ್ಷ ಭಕ್ತರು ದೇವಿ ದರ್ಶನ ಪಡೆದಿದ್ದರು. ಟಿಕೆಟ್ ಮತ್ತು ಲಾಡು ಪ್ರಸಾದ ಮಾರಾಟದಿಂದ 9.68 ಕೋಟಿ ಆದಾಯ ಬಂದಿತ್ತು ಎಂದರು.

ಹಾಸನಾಂಬೆ ಜಾತ್ರಾ ಮಹೋತ್ಸವದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಬರೋಬ್ಬರಿ 26 ಲಕ್ಷ ಜನ ದೇವಿಯ ದರ್ಶನ ಪಡೆದಿರುವುದು ಐತಿಹಾಸಿಕ ದಾಖಲೆ ಆಗಿದೆ.

ಈ ಬಾರಿ ಹಾಸನಾಂಬೆ ದರ್ಶನ ಅತ್ಯಂತ ಯಶಸ್ವಿಯಾಗಿದ್ದು, ಇದಕ್ಕೆ ಸಹಕಾರ ನೀಡಿದ ಸಂಸದರು, ಜಿಲ್ಲೆಯ ಎಲ್ಲಾ ಶಾಸಕರು, ಮಾಜಿ ಶಾಸಕರು, ಜಿಲ್ಲಾಡಳಿತದ ಎಲ್ಲಾ ಇಲಾಖೆಯ ಅಧಿಕಾರಿಗಳು, ಎನ್ ಸಿಸಿ ಹಾಗೂ ಸ್ಕೌಟ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಗೂ ಸಹ ಧನ್ಯವಾದ ತಿಳಿಸಿದರು.

ಸ್ಥಳೀಯರಿಗೂ ಸಹ ಈ ಭಾರಿ ನೆನ್ನೆ ಸಂಜೆ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿದೆ. ಎಲ್ಲಾ ಅತಿಥಿ ಗಣ್ಯರು ಸಹ ಈ ಕಾರ್ಯಕ್ರಮಕ್ಕೆ ಸಹಕಾರವನ್ನು ನೀಡುವ ಮೂಲಕ ಜಿಲ್ಲಾಡಳಿತ ನಿಗಧಿ ಪಡಿಸಿದ ಸಮಯಕ್ಕೆ ಆಗಮಿಸಿ ದರ್ಶನ ಪಡೆದಿದ್ದಾರೆ. ಕೆಲವು ಮಂತ್ರಿಗಳು ಸರತಿ ಸಾಲಿನಲ್ಲಿ ಬಂದು ದರ್ಶನ ಪಡೆದಿದ್ದಾರೆ ಎಂದರು.

ಕಂದಾಯ, ಪೊಲೀಸ್ ಸೇರಿ ಎಲ್ಲಾ ಇಲಾಖೆಯವರು ಶ್ರಮವಹಿಸಿ ಕೆಲಸ ಮಾಡಿದ್ದಾರೆ ಎಂದರಲ್ಲದೆ, ಈ ಸಲ ಜನಸಾಮಾನ್ಯರು ಸಂತೋಷದಿಂದ ದರ್ಶನ ಪಡೆದಿದ್ದಾರೆ. ನೂಕು ನುಗ್ಗಲು ಇಲ್ಲದೆ ಸರಳ, ಸುಲಲಿತವಾಗಿ ದರ್ಶನ ಆಗಿರುವುದು ಅತೀವ ಸಂತಸ ತಂದುಕೊಟ್ಟಿದೆ. ಇದರಿಂದ ಹಾಸನದ ಕೀರ್ತಿ ಪ್ರಜ್ವಲಿಸಿದೆ ಎಂದು ತಿಳಿಸಿದರು.

ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿತ್ತು, ವಿವಿಧ ರಾಜ್ಯಗಳಿಂದ ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದಿದ್ದಾರೆ. ಜಿಲ್ಲೆಯ ಗೌರವ ವೃದ್ಧಿಸಿದೆ ಎಂದು ತಿಳಿಸಿದರಲ್ಲದೆ,

ಸಂಸದರಾದ ಶ್ರೇಯಸ್ ಎಂ ಪಟೇಲ್, ಶಾಸಕರಾದ ಸ್ವರೂಪ್ ಪ್ರಕಾಶ್, ಸಿಮೆಂಟ್ ಮಂಜು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಟೇಲ್ ಶಿವಪ್ಪ, ಮಹಾನಗರಪಾಲಿಕೆ ಮೇಯರ್ ಗಿರೀಶ್ ಚೆನ್ನವೀರಪ್ಪ, ಉಪ ಮೇಯರ್ ಹೇಮಾಲತಾ, ಜಿಲ್ಲಾಧಿಕಾರಿ ಲತಾ ಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಪೂರ್ಣಿಮಾ, ಉಪ ವಿಭಾಗಾಧಿಕಾರಿ ಹಾಗೂ ದೇವಾಲಯದ ಆಡಳಿತಾಧಿಕಾರಿ ಮಾರುತಿ ಮತ್ತಿತರರು ಹಾಜರಿದ್ದರು.

# ಸಂಡೂರು: ದೇಶಿ ಕೋಳಿ ಮರಿಗಳ ವಿತರಣೆಗಾಗಿ ಗ್ರಾಮೀಣ ರೈತ ಮಹಿಳೆಯರಿಂದ ಅರ್ಜಿ ಆಹ್ವಾನ

**ಬಳ್ಳಾರಿ:** ಸಂಡೂರು ಪಶು ಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ವತಿಯಿಂದ 2025-26 ನೇ ಸಾಲಿನಲ್ಲಿ 05 ವಾರದ ದೇಶಿ ಕೋಳಿ ಮರಿಗಳನ್ನು ವಿತರಿಸಲು ಗ್ರಾಮೀಣ ರೈತ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಗ್ರಾಮೀಣ ಭಾಗದ ಪರಿಶಿಷ್ಟ ಜಾತಿ-ಶೇ.17, ಪರಿಶಿಷ್ಟ ಪಂಗಡ-ಶೇ.07, ಹಿಂದುಳಿದ ವರ್ಗ-ಶೇ.32 ಮತ್ತು ಸಾಮಾನ್ಯ ವರ್ಗ-ಶೇ.44 ರ ಶೇಕಡವಾರು 05 ವಾರದ ದೇಶಿ ಕೋಳಿ ಮರಿಗಳನ್ನು ತಲಾ 20 ರಂತೆ ಒಟ್ಟಾರೆ ಸಂಡೂರು ತಾಲ್ಲೂಕಿನ 99 ಗ್ರಾಮೀಣ ಭಾಗದ ಮಹಿಳಾ ಫಲಾನುಭವಿಗಳಿಗೆ ವಿತರಿಸಲಾಗುತ್ತದೆ.

ಅರ್ಜಿಗಳನ್ನು ಪಶುವೈದ್ಯಕೀಯ ಸಂಸ್ಥೆಯಿಂದ ಪಡೆದು ಭರ್ತಿ ಮಾಡಿ ಇದೇಆ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನವೆಂಬರ್ 04 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಸಂಡೂರಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳ ಕಚೇರಿ (ಆಡಳಿತ) ಹಾಗೂ ತಮ್ಮ ಹತ್ತಿರದ ಪಶುವೈದ್ಯಕೀಯ ಸಂಸ್ಥೆ ಅಥವಾ ದೂ. 08395-260338 ಗೆ ಸಂಪರ್ಕಿಸಬಹುದು.ಆಸಕ್ತ ಗ್ರಾಮೀಣ ರೈತ ಮಹಿಳೆಯರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು ಎಂದು ಸಂಡೂರಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ (ಆಡಳಿತ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತಮ ಆಹಾರಕ್ಕಾಗಿ ಕೈಜೋಡಿಸೋಣ: ಡಾ.ಪಾಲಯ್ಯ

**ಬಳ್ಳಾರಿ:** ಇಂದಿನ ಆಹಾರ ಪದ್ಧತಿಯಲ್ಲಿ ಸಿರಿಧಾನ್ಯಗಳ ಪುನರುಜ್ಜೀವನೆ ಅತ್ಯಂತ ಅಗತ್ಯವಾಗಿದೆ. ಪೌಷ್ಠಿಕ ಆಹಾರದ ಮಹತ್ವ ಜನರಲ್ಲಿ ಅರಿವು ಮೂಡಿಸುವ ಮೂಲಕ ಉತ್ತಮ ಆಹಾರಕ್ಕಾಗಿ ಕೈಜೋಡಿಸೋಣ ಎಂದು ಹಗರಿಯ ಐಸಿಎಆರ್‌ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ.ಪಾಲಯ್ಯ.ಪಿ ಅವರು ಹೇಳಿದರು.




'ವಿಶ್ವ ಆಹಾರ ದಿನ'ದ ಅಂಗವಾಗಿ "ಉತ್ತಮ ಆಹಾರ ಮತ್ತು ಉತ್ತಮ ಭವಿಷ್ಯಕ್ಕಾಗಿ ಎಲ್ಲರೂ ಕೈಜೋಡಿಸೋಣ" ಎಂಬ ಘೋಷವಾಕ್ಯದೊಂದಿಗೆ ಬಳ್ಳಾರಿ ತಾಲ್ಲೂಕಿನ ಹಗರಿಯ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ಸಾಂಪ್ರದಾಯಿಕ ಹಾಗೂ ಸಿರಿಧಾನ್ಯ ಆಧಾರಿತ ಅಡುಗೆ ಸ್ಪರ್ಧೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕೇಂದ್ರದ (ಮಣ್ಣು ವಿಜ್ಞಾನ) ವಿಜ್ಞಾನಿ ಡಾ.ರವಿ.ಎಸ್ ಅವರು ಮಾತನಾಡಿ, ಆರೋಗ್ಯಕರ ಆಹಾರವನ್ನು ಉತ್ಪಾದಿಸಲು ಮಣ್ಣಿನ ಪೌಷ್ಟಿಕತೆ ಮಹತ್ವದ ಪಾತ್ರವಹಿಸುತ್ತದೆ. ಮಣ್ಣು ಮತ್ತು ಆಹಾರ ಎರಡೂ ಪರಸ್ಪರ ಸಂಬಂಧಿತವಾಗಿವೆ ಎಂದು ಅಭಿಪ್ರಾಯಪಟ್ಟರು.

ಜಿಪಂ ನ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಾಜೇಂದ್ರ ಅವರು ಮಾತನಾಡಿ, ಮಹಿಳೆಯರು ತಮ್ಮ ಸಾಂಪ್ರದಾಯಿಕ ಪಾಕಕಲೆ ಮೂಲಕ ಆರೋಗ್ಯಕರ ಹಾಗೂ ಸ್ಥಳೀಯ ಆಹಾರ ಪದ್ಧತಿಯನ್ನು ಪ್ರೋತ್ಸಾಹಿಸುತ್ತಿರುವುದು ಶ್ಲಾಘನೀಯ. ಇಂತಹ ಸ್ಪರ್ಧೆಗಳು ಅವರ ಆತ್ಮವಿಶ್ವಾಸ ಹೆಚ್ಚಿಸುತ್ತವೆ ಎಂದರು.

ವಿಜ್ಞಾನಿ (ಆಹಾರ ಮತ್ತು ಪೋಷಣೆ) ಡಾ.ರಾಜೇಶ್ವರಿ.ಆರ್ ಅವರು ಮಾತನಾಡಿ, ಸಿರಿಧಾನ್ಯಗಳು ನಮ್ಮ ಸಂಪ್ರದಾಯದ ಭಾಗವಾಗಿದ್ದು,

ಪೌಷ್ಠಿಕತೆ ಹಾಗೂ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದವು. ಇಂತಹ ಸ್ಪರ್ಧೆಗಳ ಮೂಲಕ ಮಹಿಳೆಯರು ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವುದರ ಜೊತೆಗೆ ಆರೋಗ್ಯಕರ ಆಹಾರದ ಅರಿವು ಪಡೆಯುತ್ತಾರೆ ಎಂದು ತಿಳಿಸಿದರು.

ಇನ್ನೋರ್ವ ವಿಜ್ಞಾನಿ (ವಿಸ್ತರಣೆ ಶಿಕ್ಷಣ) ಡಾ.ನವೀನ್ ಕುಮಾರ್.ಪಿ ಅವರು ಮಾತನಾಡಿ, ಗ್ರಾಮೀಣ ಮಹಿಳೆಯರು ತಮ್ಮ ಪಾಕಕೌಶಲ್ಯವನ್ನು ಸಮಾಜದ ಅಭಿವೃದ್ಧಿಗೆ ಬಳಸಿಕೊಳ್ಳುತ್ತಿರುವುದು ಸಂತೋಷದ ಸಂಗತಿ. ಇಂತಹ ಕಾರ್ಯಕ್ರಮಗಳು ಮಹಿಳಾ ಸಬಲೀಕರಣಕ್ಕೆ ಮಾರ್ಗದರ್ಶಿಯಾಗುತ್ತವೆ ಎಂದರು.

ಸ್ಥಳೀಯವಾಗಿ ಲಭ್ಯವಿರುವ ಪೌಷ್ಠಿಕ ಆಹಾರ ಪದಾರ್ಥಗಳ ಬಳಕೆಯನ್ನು ಉತ್ತೇಜಿಸುವುದು ಹಾಗೂ ಸಾಂಪ್ರದಾಯಿಕ ಆಹಾರ ಪದ್ಧತಿಗಳನ್ನು ಪುನರುಜ್ಜೀವಗೊಳಿಸುವ ಉದ್ದೇಶಕ್ಕಾಗಿ ಸುಮಾರು 30 ಮಂದಿ ಗ್ರಾಮೀಣ ಮಹಿಳೆಯರು ಉತ್ಸಾಹದಿಂದ ಪಾಲ್ಗೊಂಡು ಸಾಂಪ್ರದಾಯಿಕ ಪದಾರ್ಥಗಳನ್ನು ಸಿರಿಧಾನ್ಯಗಳ ಬಳಕೆಯಿಂದ ಪೌಷ್ಠಿಕ ಹಾಗೂ ಸವಿಯಾದ ರೀತಿಯಲ್ಲಿ ತಯಾರಿಸಿ ತಮ್ಮ ಪಾಕಕೌಶಲ್ಯ ಪ್ರದರ್ಶಿಸಿದರು.

ಕಾರ್ಯಕ್ರಮದಲ್ಲಿ ವಿಜೇತರಿಗೆ ಬಹುಮಾನ ಹಾಗೂ ಪ್ರಮಾಣಪತ್ರ ವಿತರಿಸಲಾಯಿತು.

ಸುಮಾರು 120 ಮಂದಿ ಶಾಲಾ ಮಕ್ಕಳು ಪಾಲ್ಗೊಂಡು ಪೌಷ್ಠಿಕ ಆಹಾರ ಸೇವನೆ ಮತ್ತು ಆಹಾರ ವ್ಯರ್ಥತೆಯನ್ನು ತಡೆಗಟ್ಟುವ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ವಿಜ್ಞಾನ ಕೇಂದ್ರದ ಅಧಿಕಾರಿ-ಸಿಬ್ಬಂದಿ ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

**ಬಳ್ಳಾರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ 2025-26ನೇ ಸಾಲಿನ ಬಳ್ಳಾರಿ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಅ.28 ರಂದು ಬೆಳಿಗ್ಗೆ 10.30 ಕ್ಕೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯ ಯುವಕ, ಯುವತಿಯರು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು, ಶಾಲಾ/ ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಬಹುದು. ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಸ್ಪರ್ಧಿಗಳು ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸಲು ಅವಕಾಶ ಇರುತ್ತದೆ. ಸ್ಪರ್ಧಾಳುಗಳು 15 ರಿಂದ 29 ವರ್ಷದೊಳಗಿನವರಾಗಿರಬೇಕು.

*ಸ್ಪರ್ಧೆಗಳ ವಿವರ:*

ಜಾನಪದ ನೃತ್ಯ(10 ಜನರ ಗುಂಪು): ಸ್ಪರ್ಧೆಯಲ್ಲಿ ಯಾವುದೇ ಕ್ಯಾಸೆಟ್, ಪೆನ್‌ಡ್ರೈವ್, ಸಿಡಿ ಹಾಡುಗಳಿಗೆ ಅವಕಾಶ ಇರುವುದಿಲ್ಲ, 15 ನಿಮಿಷ ಮಾತ್ರ.

ಜಾನಪದ ಗೀತೆ(10 ಜನರ ಗುಂಪು): ಸ್ಪರ್ಧೆಯಲ್ಲಿ ಯಾವುದೇ ಸಿನಿಮಾ ಹಾಡುಗಳನ್ನು ಪ್ರಸ್ತುತಪಡಿಸುವಂತಿಲ್ಲ ಹಾಗೂ ಹಾಡುಗಳಲ್ಲಿ ಸಿನಿಮಾ ಮಿಶ್ರಣಕ್ಕೆ ಅವಕಾಶವಿರುವುದಿಲ್ಲ, 7 ನಿಮಿಷ ಮಾತ್ರ ಕಾಲಾವಕಾಶ.

ಕಥೆ ಬರೆಯುವುದು(ಒಬ್ಬರಿಗೆ ಅವಕಾಶ): 1000 ಪದಗಳಿಗೆ ಮೀರದಂತೆ ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿರಬೇಕು, 60 ನಿಮಿಷ ಮಾತ್ರ ಕಾಲಾವಕಾಶ.ಚಿತ್ರಕಲೆ(ಒಬ್ಬರಿಗೆ ಅವಕಾಶ): ಎ3 ಸೈಜ್ (ಥೀಮ್: ನಶೆ ಮುಕ್ತ ಯುವ/ ಯೂತ್ ಫಾರ್ ಹೆಲ್ದಿ ಸ್ಟೈಲ್), 90 ನಿಮಿಷ ಮಾತ್ರ ಕಾಲಾವಕಾಶ.ಭಾಷಣ(ಒಬ್ಬರಿಗೆ): ವಿಷಯ-ಭಾರತದಲ್ಲಿ ತುರ್ತು ಪರಿಸ್ಥಿತಿಯ ಅವಧಿ ಮತ್ತು ಸಂವಿಧಾನ ಉಲ್ಲಂಘನೆ ಮತ್ತು ಪ್ರಜಾಪ್ರಭುತ್ವವನ್ನು ಕಾಪಾಡುವುದು ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳು. ಭಾಷಣವು 7 ನಿಮಿಷಗಳ ಅವಧಿಯಲ್ಲಿ ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ ಪ್ರಸ್ತುತಪಡಿಸಬೇಕು.

ಕವಿತೆ ಬರೆಯುವುದು(ಒಬ್ಬರಿಗೆ): 1000 ಪದ ಮೀರದಂತೆ ಕನ್ನಡ, ಆಂಗ್ಲ ಮತ್ತು ಹಿಂದಿ ಭಾಷೆಯಲ್ಲಿರಬೇಕು, ಅವಧಿ 60 ನಿಮಿಷ.

ವಿಜ್ಞಾನ ಮೇಳ(ಪ್ರತಿ ಗುಂಪಿಗೆ 5 ಜನ): ನಾವಿನ್ಯಾತ ವಿಜ್ಞಾನ ಮೇಳ ಪ್ರದರ್ಶನ.

ಜಿಲ್ಲಾ ಮಟ್ಟದ ಯುವ ಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಕಡ್ಡಾಯವಾಗಿ ಆನ್‌ಲೈನ್ ನಲ್ಲಿ ನೋಂದಣಿ ಮಾಡಿಕೊಳ್ಳಬೇಕು. ನೋಂದಣಿ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸಿದಲ್ಲಿ ಮಾತ್ರ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶ ಇರುತ್ತದೆ.ಭಾಗವಹಿಸಲು ಇಚ್ಚಿಸುವ ಸ್ಪರ್ಧಾರ್ಥಿಗಳು ಅ.27 ರೊಳಗಾಗಿ ತಮ್ಮ ಹೆಸರುಗಳನ್ನು ಆನ್ ಲೈನ್ ಕ್ಯೂರ್ ಕೋಡ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾ ಕ್ರೀಡಾಂಗಣದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಾರ್ಯಾಲಯ ಅಥವಾ ಮೊ.8971238689, 7026401500 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಮಾಪಕವನ್ನು 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಲು ಜೆಸ್ಕಾಂ ಸೂಚನೆ

**ಬಳ್ಳಾರಿ:** ಬಳ್ಳಾರಿ ನಗರ ಉಪವಿಭಾಗ-1 ಜೆಸ್ಕಾಂ ವ್ಯಾಪ್ತಿಯಲ್ಲಿ ಕಂಪನಿಯ ನಿಯಮಾನುಸಾರ ಎಲ್ಲಾ ಸ್ಥಾವರದಲ್ಲಿರುವ ಮೀಟರ್‌ಗಳನ್ನು ಆಪ್ಟಿಕಲ್ ಪ್ರೋಬ್ ಡಿವೈಸ್ ಮೂಲಕವೇ ರೀಡಿಂಗ್ ಮಾಡಬೇಕಾಗಿದ್ದು, ವಿದ್ಯುತ್ ಗ್ರಾಹಕರು ತಮ್ಮ ಸ್ಥಾವರದ ವಿದ್ಯುತ್ ಮಾಪಕವನ್ನು ಕಡ್ಡಾಯವಾಗಿ ನೆಲದಿಂದ 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಬೇಕು.

ವಿದ್ಯುತ್ ಮಾಪಕಗಳು ಗೋಚರಿಸುವ ಹಾಗೂ ಓದಲು ಅನುಕೂಲವಾಗುವ ಸ್ಥಳದಲ್ಲಿ ಇರಬೇಕು. ಮೀಟರ್ ಓದುವವರಿಗೆ ಸ್ಥಳವಿಲ್ಲದಿದ್ದಲ್ಲಿ ಸ್ಥಳವಿರುವ ಜಾಗದಲ್ಲಿ ಇರಿಸಬೇಕು. ಅ.25 ರೊಳಗಾಗಿ ನಿಗದಿತ ಎತ್ತರದ ಜಾಗದಲ್ಲಿ ಅಳವಡಿಸಿಕೊಳ್ಳಬೇಕು.

ಈ ನಿಯಮ ಪಾಲನೆ ಮಾಡದಿದ್ದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1 ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿತೀಶ್ ಕುಮಾರ್ ನೇತೃತ್ವದಲ್ಲಿ ಬಿಹಾರದಲ್ಲಿ ಎನ್‌ಡಿಎ ಮೈತ್ರಿಕೂಟ ಗೆಲ್ಲಲಿದೆ
### ನರೇಂದ್ರ ಮೋದಿ ಭಾಷಣದಲ್ಲಿ ಸಿಎಂ ಅಭ್ಯರ್ಥಿ ಸುಳಿವು



**ಸಮಸ್ತಿಪುರ:** ಬಿಹಾರ ವಿಧಾನಸಭಾ ಚುನಾವಣಾ ಪ್ರಚಾರಕ್ಕೆ ಅಧಿಕೃತವಾಗಿ ಧುಮುಕಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದು (ಅ.24– ಶುಕ್ರವಾರ) ಸಮಸ್ತೀಪುರದಲ್ಲಿ ಭರ್ಜರಿ ಚುನಾವಣಾ ಪ್ರಚಾರ ನಡೆಸಿದ್ದಾರೆ. ತಮ್ಮ ಭಾಷಣದಲ್ಲಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನು ಹಾಡಿ ಹೊಗಳಿರುವ ಪ್ರಧಾನಿ ಮೋದಿ, ನಿತೀಶ್ ಕುಮಾರ್ ಅವರನ್ನು "ಸುಶಾಸನ್ ಬಾಬು (ಉತ್ತಮ ಆಡಳಿತಗಾರ) ಎಂದು ಕರೆದಿದ್ದಾರೆ.

"ನಿತೀಶ್ ಕುಮಾರ್ ನೇತೃತ್ವದಲ್ಲಿ ರಾಷ್ಟ್ರೀಯ ಪ್ರಜಾಪ್ರಭುತ್ವಾತ್ಮಕ ಒಕ್ಕೂಟ (ಎನ್‌ಡಿಎ)ವು, ಈ ಹಿಂದಿನ ಎಲ್ಲಾ ದಾಖಲೆಗಳನ್ನು ಮುರಿದು ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಗೆಲುವು ಸಾಧಿಸಲಿದೆ. ಇಡೀ ಬಿಹಾರ 'ಫಿರ್ ಏಕ್ ಬಾರ್ ಎನ್‌ಡಿಎ ಸರ್ಕಾರ್, ಫಿರ್ ಏಕ್ ಬಾರ್ ಸುಶಾಸನ್ ಸರ್ಕಾರ್' (ಮತ್ತೊಮ್ಮೆ ಎನ್‌ಡಿಎ ಸರ್ಕಾರ, ಮತ್ತೊಮ್ಮೆ ಸುಶಾಸನ ಸರ್ಕಾರ) ಎಂದು ಕೂಗುತ್ತಿದೆ" ಎಂದು ಪ್ರಧಾನಿ ಹೇಳಿದರು.

"ಬಿಹಾರಕ್ಕೆ ಕಾನೂನು ಆಡಳಿತದ ಅವಶ್ಯಕತೆ ಇದೆ. ಕೇಂದ್ರದಲ್ಲೂ ಎನ್‌ಡಿಎ ಸರ್ಕಾರವಿದ್ದು, ಬಿಹಾರದಲ್ಲೂ ಎನ್‌ಡಿಎ ಸರ್ಕಾರವೇ ಮುಂದುವರೆದರೆ, ಡಬಲ್ ಎಂಜಿನ್ ಸರ್ಕಾರವು ಅಭಿವೃದ್ಧಿಗೆ ವೇಗ ನೀಡುತ್ತದೆ" ಎಂದು ಪ್ರಧಾನಿ ಮೋದಿ ಮತದಾರರಿಗೆ ಮನವರಿಕೆ ಮಾಡಿದರು.

ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಗೆಲುವು ಸಾಧಿಸುವ ಮೂಲಕ, ಬಿಜೆಪಿ–ಜೆಡಿಯು ನೇತೃತ್ವದ ಎನ್‌ಡಿಎ ಅಧಿಕಾರ ಉಳಿಸಿಕೊಂಡರೆ, ನಿತೀಶ್ ಕುಮಾರ್ ಅವರೇ ಮುಖ್ಯಮಂತ್ರಿಯಾಗುತ್ತಾರಾ ಎಂಬ ಪ್ರಶ್ನೆಗೆ ಇದುವರೆಗೂ ಸ್ಪಷ್ಟ ಉತ್ತರ ಸಿಕ್ಕಿಲ್ಲ. ಆದರೆ ಪ್ರಧಾನಿ ಮೋದಿ ಅವರು ತಮ್ಮ ಭಾಷಣದಲ್ಲಿ, ಬಿಹಾರದಲ್ಲಿ ಎನ್‌ಡಿಎ ಪ್ರಚಾರದ ಮುಖವಾಗಿ ನಿತೀಶ್ ಕುಮಾರ್ ಅವರನ್ನು ಉಲ್ಲೇಖಿಸಿರುವುದು ಕುತೂಹಲ ಕೆರಳಿಸಿದೆ.

ಬಿಜೆಪಿ ಮುಖ್ಯಮಂತ್ರಿ ಅಭ್ಯರ್ಥಿಯನ್ನು ಹೆಸರಿಸಲು ಹಿಂಜರಿಯುತ್ತಿರುವ ಬಗ್ಗೆ ಮಹಾಘಟಬಂಧನ್ ಮೈತ್ರಿಕೂಟದ ತೀವ್ರ ಟೀಕೆ ಮಾಡುತ್ತಿದೆ. ಏಕೆಂದರೆ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಮಹಾಘಟಬಂಧನ್ ಸಿಎಂ ಅಭ್ಯರ್ಥಿ ಎಂದು ಘೋಷಿಸಲಾಗಿದೆ. ಆದರೆ ವಿಪಕ್ಷ ಮೈತ್ರಿಕೂಟದ ನಿರಂತರ ಟೀಕೆಗಳ ಹೊರತಾಗಿಯೂ, ಆಡಳಿತಾರೂಢ ಎನ್‌ಡಿಎ ಮೈತ್ರಿಕೂಟ ಇದುವರೆಗೂ ತನ್ನ ಸಿಎಂ ಅಭ್ಯರ್ಥಿಯನ್ನು ಘೋಷಿಸಿಲ್ಲ.

ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಎನ್‌ಡಿಎ ಪ್ರಮುಖ ನಾಯಕರು, ಈ ಬಾರಿಯೂ ಬಿಹಾರ ವಿಧಾನಸಭೆ ಚುನಾವಣೆಯನ್ನು ನಿತೀಶ್ ಕುಮಾರ್ ನೇತೃತ್ವದಲ್ಲೇ ಎದುರಿಸಲಾಗುವುದು ಎಂದು ಹೇಳುತ್ತಿದ್ದಾರೆ. ಆದರೆ ಎನ್‌ಡಿಎ ಚುನಾವಣೆಯಲ್ಲಿ ಗೆಲುವು ಸಾಧಿಸಿದರೆ, ನಿತೀಶ್ ಕುಮಾರ್ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರಾ ಎಂಬ ಪ್ರಶ್ನೆಗೆ, ಎಲ್ಲರೂ ಅಡ್ಡಗೋಡೆ–ಯ ಮೇಲೆ ದೀಪವಿಟ್ಟಂತೆ ಮಾತನಾಡುತ್ತಿದ್ದಾರೆ.

ಆದರೆ ಎನ್‌ಡಿಎ ಅಂಗಪಕ್ಷ ಜೆಡಿಯು ಮಾತ್ರ, ನಿತೀಶ್ ಕುಮಾರ್ ಅವರೇ 2030ರವರೆಗೆ ಬಿಹಾರದ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಎಂದು ಅತ್ಯಂತ ಭರವಸೆಯಿಂದ ಹೇಳುತ್ತಿದೆ. ಆದರೆ ನಿತೀಶ್ ಕುಮಾರ್ ಅವರ ವಯಸ್ಸು ಮತ್ತು ಆರೋಗ್ಯವನ್ನು ಗಮನಿಸಿದರೆ, ಅವರು ಈ ಬಾರಿಯೂ ಮುಖ್ಯಮಂತ್ರಿಯಾಗಲಿದ್ದಾರಾ ಎಂಬ ಅನುಮಾನಗಳು ಮೂಡುತ್ತವೆ.

ಅಷ್ಟೇ ಅಲ್ಲದೇ ಸಾರ್ವಜನಿಕ ವೇದಿಕೆಗಳಲ್ಲಿ ನಿತೀಶ್ ಕುಮಾರ್ ವಿಚಿತ್ರ ವರ್ತನೆ, ಅವರ ಮಾನಸಿಕ ಸ್ಥಿತಿಗತಿ ಬಗ್ಗೆಯೂ ಬಿಹಾರದ ಜನ ಮಾತನಾಡಿಕೊಳ್ಳಲು ಅವಕಾಶ ಒದಗಿಸಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿ ಅವರು ತಮ್ಮ ಇಂದಿನ ಭಾಷಣದಲ್ಲಿ, ನಿತೀಶ್ ಕುಮಾರ್ ಅವರನ್ನು ಹಾಡಿಹೊಗಳಿರುವುದು ತೀವ್ರ ಕುತೂಹಲ ಕೆರಳಿಸಿದೆ.

## ಸರಕಾರಿ ನೌಕರರಿಗೆ ಸಿಹಿ ಸುದ್ದಿ, ಯುಜಿಸಿ ವೇತನ ಶ್ರೇಣಿಯ ಸಿಬ್ಬಂದಿಗೆ ತುಟ್ಟಿ ಭತ್ಯೆ ಹೆಚ್ಚಿಸಿ ಸರ್ಕಾರ ಆದೇಶ

**ಬೆಂಗಳೂರು:** ಸರಕಾರಿ ನೌಕರರಿಗೆ ರಾಜ್ಯ ಸರಕಾರ ಸಿಹಿ ಸುದ್ದಿ ನೀಡಿದೆ. 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳಿಗೆ ತುಟ್ಟಿಭತ್ಯೆ ದರಗಳನ್ನು ಪರಿಷ್ಕರಿಸುವ ಕುರಿತು ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ. ಮೂಲ ವೇತನದ ಶೇಕಡ 55ರಿಂದ ಶೇಕಡ 58ಕ್ಕೆ ಏರಿಸಿ 1ನೇ ಜುಲೈ 2025ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿದೆ.



2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ ಶೇಕಡ 55 ರಿಂದ ಶೇಕಡ 58ಕ್ಕೆ 1ನೇ ಜುಲೈ 2025 ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

ಈ ಆದೇಶದ ಉದ್ದೇಶಗಳಿಗಾಗಿ ಮೂಲ ವೇತನ ಎಂದರೆ ಸರ್ಕಾರಿ ನೌಕರರು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಪಡೆಯುತ್ತಿರುವ ಮೂಲ ವೇತನ. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳು, ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳು, ಸರ್ಕಾರಿ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಪೂರ್ಣಕಾಲಿಕ ನೌಕರರಿಗೆ ಈ ಆದೇಶಗಳು ಅನ್ವಯಿಸುತ್ತವೆ.

ವೇತನ ಎಂದು ಪರಿಗಣಿಸಲ್ಪಡುವ ಯಾವುದೇ ಉಪಲಬ್ಧಗಳನ್ನು ಮೂಲ ವೇತನಕ್ಕೆ ಸೇರಿಸತಕ್ಕದ್ದಲ್ಲ.

ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳ ನಿವೃತ್ತ ನೌಕರರಿಗೆ ಈ ಆದೇಶಗಳು ಅನ್ವಯಿಸುವುದಿಲ್ಲ.

ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು 2025ರ ಅಕ್ಟೋಬರ್ ಮಾಹೆಯ ವೇತನ ಬಟವಾಡೆಗೂ ಮೊದಲು ಪಾವತಿ ಮಾಡತಕ್ಕದ್ದಲ್ಲ.

ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

## ದೀಪ ಬೆಳಗಿಸಿ, ರಸ್ತೆ ಗುಂಡಿಗಳಿಗೆ ಹೂವಿನ ಅಲಂಕಾರ: ವಿನೂತನ ಪ್ರತಿಭಟನೆ

**ಮಂಡ್ಯ:** ರಾಜ್ಯದ ಹಲವೆಡೆಗಳಲ್ಲಿ ಗುಂಡಿಯಲ್ಲಿ ರಸ್ತೆಯಿದೆಯೋ ಅಥವಾ ರಸ್ತೆಯಲ್ಲಿ ಗುಂಡಿಯಿದೆಯೋ ಎಂಬುದು ಗೊತ್ತಾಗುತ್ತಿಲ್ಲ. ನಗರದಲ್ಲಿ ಎಲ್ಲಿ ನೋಡಿದರೂ ಗುಂಡಿಗಳದ್ದೇ ಹಾವಳಿ. ಈ ಬಗ್ಗೆ ಜನರು ಎಷ್ಟೇ ದೂರು ನೀಡಿದ್ರೂ ಯಾವುದೇ ಪ್ರಯೋಜನವಾಗಿಲ್ಲ. ಇದೀಗ ಮಂಡ್ಯ ಜಿಲ್ಲೆಯ ಜನರು ವಿಶಿಷ್ಟವಾಗಿ ತಮ್ಮ ಧ್ವನಿಯನ್ನು ಎತ್ತುತ್ತಿದ್ದಾರೆ. ಈ ದೀಪಾವಳಿಯಲ್ಲಿ, ಮನೆಯಲ್ಲಿ ದೀಪಗಳನ್ನು ಬೆಳಗಿಸುವ ಬದಲು, ನಿವಾಸಿಗಳು ಗುಂಡಿಗಳ ಒಳಗೆ ದೀಪಗಳನ್ನು ಬೆಳಗಿಸಿದರು. ಸ್ಥಳೀಯ ವೃದ್ಧಾಶ್ರಮದ ಹಿರಿಯ ಸದಸ್ಯರು ಶಾಂತಿಯುತ ಪ್ರತಿಭಟನೆಯನ್ನು ನಡೆಸಿದರು. ಗುಂಡಿಗಳನ್ನು ಹೂವುಗಳು ಮತ್ತು ಮೇಣದಬತ್ತಿಗಳನ್ನು ಅಲಂಕರಿಸಿದರು. ಇದರ ವಿಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.



ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಳ್ಳಲಾದ ವಿಡಿಯೊದಲ್ಲಿ, ನಿವಾಸಿಗಳು ಜನನಿಬಿಡ ರಸ್ತೆಯ ಮಧ್ಯದಲ್ಲಿ ಗುಂಡಿಯನ್ನು ದೊಡ್ಡ ಹಾರ, ದೀಪಗಳು ಮತ್ತು ಧೂಪದ್ರವ್ಯದ ಕೋಲುಗಳಿಂದ ಅಲಂಕರಿಸಿದ್ದಾರೆ. ಬಹಳ ಹಿಂದಿನಿಂದಲೂ ನಿರ್ಲಕ್ಷಿಸಲ್ಪಟ್ಟಿರುವ ರಸ್ತೆಗಳ ಕಳಪೆ ಸ್ಥಿತಿಯ ಕಡೆಗೆ ಗಮನ ಸೆಳೆಯಲು ಅವರು ಈ ರೀತಿಯಾಗಿ ಪ್ರತಿಭಟಿಸಿದರು.

ಬೆಂಗಳೂರಿನ ನಂತರ, ಈಗ ಮಂಡ್ಯದ ನಿವಾಸಿಗಳು ಗುಂಡಿಗಳ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ. ಕೆ.ಆರ್. ಪೇಟೆಯಲ್ಲಿ, ವೃದ್ಧಾಶ್ರಮದ ನಿವಾಸಿಗಳು ಹಾನಿಗೊಳಗಾದ ಕಿಕ್ಕೇರಿ–ಕೆ.ಆರ್. ಪೇಟೆ ಹೆದ್ದಾರಿಯಲ್ಲಿ ದೀಪಗಳನ್ನು ಬೆಳಗಿಸುವ ಮೂಲಕ ಮತ್ತು ಗುಂಡಿಗಳನ್ನು ಹೂವುಗಳಿಂದ ಅಲಂಕರಿಸುವ ಮೂಲಕ ವಿಶಿಷ್ಟ ಪ್ರತಿಭಟನೆ ನಡೆಸಿದರು ಎಂಬ ಶೀರ್ಷಿಕೆಯೊಂದಿಗೆ ಎಕ್ಸ್ (ಹಿಂದಿನ ಟ್ವಿಟರ್) ನಲ್ಲಿ ವಿಡಿಯೊವನ್ನು ಪೋಸ್ಟ್ ಮಾಡಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಈ ವಿಡಿಯೊ ಚರ್ಚೆಗೆ ನಾಂದಿ ಹಾಡಿದೆ. ಈ ಪೋಸ್ಟ್‌ಗೆ ಪ್ರತಿಕ್ರಿಯಿಸುತ್ತಾ, ಒಬ್ಬ ಬಳಕೆದಾರರು, ಕನಿಷ್ಠ ಪಕ್ಷ ಅವರು ಪ್ರತಿಭಟಿಸುತ್ತಿದ್ದಾರೆ. ಅಂತಹ ರಸ್ತೆಗಳು ಭಾರತದಾದ್ಯಂತ ಇವೆ. ಗುಂಡಿಗಳು, ಧೂಳು, ಕಸ, ಕೆಸರು ನೀರು ಇತ್ಯಾದಿಗಳಿಂದ ತುಂಬಿವೆ. ಆದರೆ, ಜನರಿಗೆ ಬೇರೆ ಸ್ಥಳಗಳಲ್ಲಿ ಪ್ರತಿಭಟಿಸಲು ಧೈರ್ಯ ಅಥವಾ ಸಮಯವಿಲ್ಲ ಎಂದು ಬರೆದಿದ್ದಾರೆ. ನಾಸಾದ ಮುಂದಿನ ರೋವರ್ ಇಲ್ಲಿ ಇಳಿಯಬಹುದು ಎಂದು ಮತ್ತೊಬ್ಬ ಬಳಕೆದಾರರು ತಮಾಷೆಯಾಗಿ ಪ್ರತಿಕ್ರಿಯಿಸಿದ್ದಾರೆ. ರಸ್ತೆಗಳ ನಿರ್ವಹಣೆ ಮತ್ತು ದುರಸ್ತಿಗೆ ಕಾರಣರಾದ ಅಧಿಕಾರಿಗಳನ್ನು ನಾಚಿಕೆಪಡಿಸಲು ಇದು ಉತ್ತಮ ಮಾರ್ಗವಾಗಿದೆ.

ಮುಂದಿನ ಹಂತವೆಂದರೆ ಕಾರ್ಪೊರೇಟರ್‌ಗಳು, ಪುರಸಭೆ ಅಧಿಕಾರಿಗಳು, ಶಾಸಕರು ಮತ್ತು ಸಂಸದರನ್ನು ಹೆಸರಿಸಿ ನಾಚಿಕೆಪಡಿಸುವುದು ಎಂದು ಮಗದೊಬ್ಬರು ಕಾಮೆಂಟ್ ಮಾಡಿದ್ದಾರೆ. ಒಂದು ದಿನ ಯಾರಾದರೂ ಇದೇ ವಿಷಯದ ಬಗ್ಗೆ ಮನ್ ಕಿ ಬಾತ್ ಮಾಡಲಿ. ಇದರಿಂದ ಸಂಬಂಧಪಟ್ಟ ಜನರು ಅದಕ್ಕೆ ತಕ್ಕಂತೆ ವರ್ತಿಸುತ್ತಾರೆ ಎಂದು ಆಶಿಸುತ್ತೇನೆ ಎಂದು ವ್ಯಕ್ತಿಯೊಬ್ಬರು ಹೇಳಿದರು.

**ಬೆಂಗಳೂರಿನಲ್ಲೂ ಗುಂಡಿಗೆ ಪೂಜೆ**

ಸೆಪ್ಟೆಂಬರ್‌ನಲ್ಲಿ, ಬೆಂಗಳೂರಿನ ಭಾರತಿನಗರ ನಿವಾಸಿಗಳು ಕಾಕ್ಸ್ ಟೌನ್‌ನ ವೆಬ್‌ಸ್ಟರ್ ರಸ್ತೆಯಲ್ಲಿ ಒಂದು ವಿಶಿಷ್ಟವಾದ ಗುಂಡಿ ಪೂಜೆಯನ್ನು ನಡೆಸಿದರು. ಕೆಟ್ಟ ರಸ್ತೆಗಳಿಂದಾಗಿ ಇನ್ನು ಮುಂದೆ ಯಾವುದೇ ಜೀವಗಳು ತಮ್ಮ ಪ್ರಾಣಾಪಾಯಕ್ಕೆ ಒಳಗಾಗಬಾರದು ಎಂದು ಪ್ರಾರ್ಥಿಸಲು ಜನರು ಒಟ್ಟುಗೂಡಿದರು. ಗುಂಡಿಯಿರುವ ಸ್ಥಳವನ್ನು ಹೂವುಗಳಿಂದ ಅಲಂಕರಿಸಿದರು. ಪುರೋಹಿತರನ್ನು ಕರೆಸಿ ಪೂಜೆ–ಪುನಸ್ಕಾರ ನೆರವೇರಿಸಿದರು. ಇದು ಸ್ಥಳೀಯರ ಹತಾಶೆ ಮತ್ತು ಅಸಹಾಯಕತೆಯನ್ನು ಪ್ರತಿಬಿಂಬಿಸುತ್ತದೆ. ಇಂತಹ ಪ್ರತಿಭಟನೆಯು ಅಂತಿಮವಾಗಿ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಪ್ರೇರೇಪಿಸಬಹುದು ಎಂಬ ಆಶಯವನ್ನು ಹೊಂದಿದೆ.

## ರಸ್ತೆ ಗುಂಡಿ ಚರ್ಚೆ ನಡುವೆ ಉದ್ಯಮ ಸ್ನೇಹಿ ವಾತಾವರಣಕ್ಕೆ ಸರ್ಕಾರ ಪ್ಲ್ಯಾನ್: ಅಧಿಕಾರಿಗಳಿಗೆ ಸಿದ್ದರಾಮಯ್ಯ ಸೂಚನೆ

**ಬೆಂಗಳೂರು:** ರಾಜ್ಯದಲ್ಲಿ ರಸ್ತೆ ಗುಂಡಿ ಕುರಿತಾಗಿ ಪ್ರಮುಖ ಉದ್ಯಮಿಗಳು ಆಕ್ಷೇಪ ಎತ್ತಿದ ಬೆನ್ನಲ್ಲೇ ಉದ್ಯಮ ಸ್ನೇಹಿ ವಾತಾವರಣ ನಿರ್ಮಾಣ ಮಾಡಲು ಸರ್ಕಾರದ ಮುಂದಾಗಿದೆ. ಈ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಕೆಲವೊಂದು ಖಡಕ್ ಸೂಚನೆ ನೀಡಿ–ದ್ದಾರೆ.



ಶುಕ್ರವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಬಂಡವಾಳ ಹೂಡಿಕೆ ಆಕರ್ಷಣೆ ಸಭೆಯಲ್ಲಿ ಪ್ರಮುಖ ವಿಚಾರಗಳ ಬಗ್ಗೆ ಚರ್ಚೆ ನಡೆಯಿತು. ಅಲ್ಲದೆ, ರಾಜ್ಯದಲ್ಲಿ ಬಂಡವಾಳ ಹೂಡಿಕೆದಾರ ಸ್ನೇಹಿ ವಾತಾವರಣವನ್ನು ಇನ್ನಷ್ಟು ಉತ್ತಮಪಡಿಸಬೇಕು ಎಂಬ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಪ್ರಮುಖ ಸಲಹೆಗಳನ್ನು ನೀಡಿದ್ದಾರೆ.

ಉದ್ಯಮ ಸ್ನೇಹಿ ವಾತಾವರಣ ನಿರ್ಮಾಣಕ್ಕೆ ಭೂ ಬಳಕೆ ಬದಲಾವಣೆ ಪ್ರಕ್ರಿಯೆ ಸೇರಿದಂತೆ ವಿವಿಧ ಎನ್‌ಒಸಿಗಳ ನೀಡಿಕೆಯ ಕಾಲಮಿತಿಯನ್ನು ಕಡಿಮೆ ಮಾಡಬೇಕು ಎಂದು ಸೂಚಿಸಿದ್ದಾರೆ. ಅಲ್ಲದೆ, ಕಾಲಮಿತಿಯನ್ನು ಕಡಿಮೆ ಮಾಡುವ ಬಗ್ಗೆ ವಿವರವಾದ ಪ್ರಸ್ತಾವನೆಯನ್ನು ಸಲ್ಲಿಸಬೇಕು.

## ಹೆಣ್ಣನ್ನು ಸುರಕ್ಷಿತವಾಗಿರಿಸಲು ಸರ್ಕಾರಗಳು ಅನೇಕ ಕಾಯ್ದೆಗಳ ರಚನೆ: ವಿ.ಹನುಮಂತಪ್ಪ

**ಚಿಕ್ಕಮಗಳೂರು:** ಹೆಣ್ಣು ಸಮಾಜದ ಕಣ್ಣು. ದೇಶದ ವಿವಿಧ ಸ್ಥರಗಳಲ್ಲಿ ಮಹಿಳೆಯರು ಗೌರವಾನ್ವಿತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಮಾದರಿಯಾಗಿದ್ದು, ಹೆಣ್ಣನ್ನು ತಿರಸ್ಕರಿಸುವ ಅಥವಾ ಅಸಡ್ಡೆ ತೋರುವ ಆಲೋಚನೆ ಪಾಲಕರು ಬಿಡಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ಹೇಳಿದರು.




ತಾಲ್ಲೂಕಿನ ಮೈಲಿಮನೆ ಗ್ರಾಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಟಾಟಾ ಕಾಫಿ ಲಿಮಿಟೆಡ್ ಮೈಲಿಮನೆ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ ಹಾಗೂ ವಕೀಲರ ಸಂಘದಿಂದ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೆಣ್ಣು ಇಂದಿನ ಕಾಲಮಾನದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಮುಂಚೂಣಿ ಕಂಡಿದ್ದಾರೆ. ರಾಷ್ಟ್ರಪತಿ, ಪ್ರಧಾನಿ, ಐಪಿಎಸ್ ಹಾಗೂ ಐಎಎಸ್‌ನಂತ ಪ್ರಮುಖ ಸ್ಥಾನವನ್ನು ಅಲಂಕರಿಸಿದ್ದಾರೆ. ಹಾಗಾಗಿ ಹೆಣ್ಣುಮಕ್ಕಳನ್ನು ಅಲ್ಲಗಳೆಯದೆ ಗಂಡಿನಂತೆ ಸರಿಸಮಾನಾಗಿ ಗೌರವಿಸುವ ಪರಿಕಲ್ಪನೆ ರೂಢಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಇತ್ತೀಚೆಗೆ ಎಸ್ಟೇಟ್‌ನ ಕಾರ್ಮಿಕ ವಲಯದಲ್ಲಿ ಪೋಕ್ಸೋ, ಬಾಲ್ಯವಿವಾಹ ಪ್ರಕರಣಗಳು ದಾಖಲಾಗುತ್ತಿವೆ. ಹೆಣ್ಣುಮಕ್ಕಳನ್ನು ಪ್ರೌಢಾವಸ್ಥೆಯ ಮುಂಚೆಯೇ ಮದುವೆ ಮಾಡಿಸುವುದು, ಹೆಣ್ಣು–ಗಂಡೆಂದು ತಿಳಿಯಲು ಭ್ರೂಣಲಿಂಗ ಪತ್ತೆ ಪ್ರಕರಣಗಳು ಕಾನೂನು ಚೌಕಟ್ಟಿನಲ್ಲಿ ಶಿಕ್ಷಾರ್ಹ ಅಪರಾಧ ಜೊತೆಗೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದರು.

ಬಾಲ್ಯವಸ್ಥೆಯ ಹೆಣ್ಣುಮಕ್ಕಳಿಗೆ ಲೈಂಗಿಕ ದೌರ್ಜನ್ಯ, ಬಾಲಗರ್ಭಿಣಿ ಪ್ರಕರಣಕ್ಕೆ ಕಡಿವಾಣ ಹಾಕಲು ಪಾಲಕರು ನಿಗಾವಹಿಸಬೇಕು. ಮದುವೆ ವಯಸ್ಸಿಗಿಂತ ಮೊದಲೇ ಪ್ರೇಮವಿವಾಹಕ್ಕೆ ಮುಂದಾದರೆ ಎರಡು ಕಡೆಯ ಇಡೀ ಕುಟುಂಬ, ಮದುವೆಯಲ್ಲಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬರ ಮೇಲು ಪ್ರಕರಣ ದಾಖಲಾಗುತ್ತವೆ ಎಂಬುದು ಅರಿತುಕೊಳ್ಳಬೇಕು ಎಂದರು.

ಹೆಣ್ಣು ಸಮಾಜದಲ್ಲಿ ಶೋಷಣೆಗೆ ಒಳಗಾಗುತ್ತಿರುವ ಕಾರಣ ದೇಶದಲ್ಲಿ ಪ್ರತಿ ಎಂಟು ಗಂಟೆಗೊಮ್ಮೆ ಅತ್ಯಾಚಾರ ಪ್ರಕರಣ ದಾಖಲಾಗುತ್ತಿವೆ ಎಂದ ಅವರು, ಸರ್ಕಾರಗಳು ಆ ನಿಟ್ಟಿನಲ್ಲಿ ಹೆಣ್ಣನ್ನು ಸುರಕ್ಷಿತವಾಗಿರಿಸಲು ಅನೇಕ ಕಾಯ್ದೆಗಳನ್ನು ರಚಿಸುವ ಮೂಲಕ ಮಹಿಳೆಯರಿಗೆ ಕಾನೂನಿನ ತಿಳುವಳಿಕೆ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ರಾತ್ರಿಹೊತ್ತು ಒಂಟಿ ಹೆಣ್ಣೊಂದು ಸಿಕ್ಕರೆ ಯುವಕರು ಗುಂಪು ಕೆಟ್ಟ ರೀತಿಯಲ್ಲಿ ವ್ಯವಹಾರ ಮಾಡುತ್ತಾರೆ. ಈ ಆಲೋಚನೆಗಳು ಯುವಸಮೂಹಕ್ಕೆ ಬರಲು ಕಾರಣವೇ ಸಿನಿಮಾ, ಧಾರವಾಹಿಗಳಲ್ಲಿ ಪಾತ್ರದಾರಿಗಳು. ಆ ನಟ–ನಟಿಯರು ಚಿತ್ರಿಸುವ ದೃಶ್ಯಗಳು ಸಮಾಜಕ್ಕೆ ಕಂಟಕವಾಗಿ, ಯುವಜನತೆಗೆ ದಿಕ್ಕುತಪ್ಪಿಸುವತ್ತ ಕೆಲಸ ಮಾಡುತ್ತಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬಡವರ್ಗದ ಜನರು ಶೋಷಣೆ, ದೌರ್ಜನ್ಯ ಅಥವಾ ಅನ್ಯಾಯಕ್ಕೆ ಒಳಗಾಗಿ ಪ್ರಕರಣ ಎದುರಿಸಲು ಆರ್ಥಿಕ ಶಕ್ತಿಯಿಲ್ಲದವರಿಗೆ ನ್ಯಾಯ ಒದಗಿಸಲು ಕಾನೂನು ಸೇವೆಗಳ ಪ್ರಾಧಿಕಾರ ಉಚಿತವಾಗಿ ವಕೀಲರನ್ನು ನೇಮಿಸಿ ಪ್ರಕರಣ ಇತ್ಯರ್ಥಗೊಳ್ಳುವರೆಗೂ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಿಕೊಡಲಿದೆ. ಹೆಣ್ಣಿಗೆ ಸಮಸ್ಯೆ ಕಂಡುಬಂದಲ್ಲಿ ಮಹಿಳಾ ವಕೀಲರನ್ನು ನೇಮಿಸಲಾಗುವುದು ಎಂದು ಮನವರಿಕೆ ಮಾಡಿದರು.

ಕಾರ್ಮಿಕ ಇಲಾಖೆ ಚಿಕ್ಕಮಗಳೂರು ಉಪವಿಭಾಗದ ಸಹಾಯಕ ಆಯುಕ್ತ ಸುಭಾಷ್ ಎಂ. ಆಲದಕಟ್ಟಿ ಮಾತನಾಡಿ, ಕಾರ್ಮಿಕರ ಬದುಕಿಗಾಗಿ ಕೇಂದ್ರ ಸರ್ಕಾರ 21 ಹಾಗೂ ರಾಜ್ಯಸರ್ಕಾರ 4 ಪ್ರಮುಖ ಕಾರ್ಮಿಕ ಕಾಯ್ದೆಗಳನ್ನು ರೂಪಿಸಿ ಅನುಷ್ಠಾನಗೊಳಿಸುವ ಮೂಲಕ ಕಾರ್ಮಿಕ ಶ್ರೇಯೋಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿದೆ ಎಂದು ಹೇಳಿದರು.

ಕಾರ್ಮಿಕ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬರಿಗೆ ಮಾಲೀಕರು ಕನಿಷ್ಠ ವೇತನ, ವೈದ್ಯಕೀಯ ಸೌಲಭ್ಯ, ನಿವಾಸದ ವ್ಯವಸ್ಥೆ ಕಲ್ಪಿಸಿಕೊಡಬೇಕು. ಪ್ರತಿದಿನವು 9 ಗಂಟೆಗಳ ಕಾಲ ಮಾತ್ರ ಕೆಲಸ ಮಾಡಬೇಕು. ಹೆಚ್ಚು ಕೆಲಸ ನಿರ್ವಹಿಸಿದರೆ ಹೆಚ್ಚುವರಿ ವೇತನ ನಿಗಧಿಗೊಳಿಸುವುದು ಕಾನೂನಿನ ನಿಯಮವಾಗಿದೆ ಎಂದು ತಿಳಿಸಿದರು.

ಮಲ್ಲಂದೂರು ಠಾಣೆ ಸಬ್‌ಇನ್ಸ್‌ಪೆಕ್ಟರ್ ಗುರುಸಜ್ಜನ್ ಮಾತನಾಡಿ, ಮಲ್ಲಂದೂರು ವ್ಯಾಪ್ತಿಯಲ್ಲಿ ಹೆಚ್ಚು ಪೋಕ್ಸೋ ಪ್ರಕರಣ ಕಂಡುಬರುತ್ತಿದೆ. ಹೆಣ್ಣುಮಕ್ಕಳು ಜೋಪಾಗಿರಿಸುವ ಜವಾಬ್ದಾರಿ ಪಾಲಕರು ಹೊರಬೇಕು. ಮಕ್ಕಳು ಶಿಕ್ಷಣವಂತರಾದರೆ ಮಾತ್ರ ಕಾನೂನು ತಿಳುವಳಿಕೆ ಮೂಡಿಬರಲಿದ್ದು, ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಹಾಯಕ ಕಾನೂನು ಅಭಿರಕ್ಷಕ ಜಿ.ಆರ್. ರಮೇಶ್, ಕಾರ್ಮಿಕ ಇಲಾಖೆ ಚಿಕ್ಕಮಗಳೂರು ವಿಭಾಗದ ಅಧಿಕಾರಿ ಬಿ.ಸಿ.ಸುರೇಶ್, ಹಿರಿಯ ಕಾರ್ಮಿಕ ನಿರೀಕ್ಷಕರಾದ ಹೆಚ್.ಕೆ.ಪ್ರಭಾಕರ್, ಪ್ರವೀಣ್‌ಕುಮಾರ್, ಮೈಲಿಮನೆ ಎಸ್ಟೇಟ್‌ನ ಜನರಲ್ ಮ್ಯಾನೇಜರ್ ರೋಷನ್, ಕಟ್ಟಡ ಕಾರ್ಮಿಕ ಮಂಡಳಿ ಕಾರ್ಯನಿರ್ವಾಹಕ ಮಹಮ್ಮದ್ ಹ್ಯಾರಿಸ್ ಹಾಗೂ ಕಾರ್ಮಿಕರು ಉಪಸ್ಥಿತರಿದ್ದರು.

## 'ಅಮಾವಾಸ್ಯೆ ಸೂರ್ಯ' ಎಂದು ಜರಿದಿದ್ದ ಸಿಎಂ ಸಿದ್ದರಾಮಯ್ಯ: ತೇಜಸ್ವಿ ಸೂರ್ಯ ಕೊಟ್ಟ ಖಡಕ್ ತಿರುಗೇಟು

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ಟೀಕೆ ಹಾಗೂ ಸಂಸದ ತೇಜಸ್ವಿ ಸೂರ್ಯ ಅವರ ಖಡಕ್ ಪ್ರತಿಕ್ರಿಯೆ ಈಗ ಚರ್ಚೆಗೆ ಗ್ರಾಸವಾಗಿದೆ. ಅಮಾವಾಸ್ಯೆ ಸೂರ್ಯ ಎಂದಿದ್ದ ಸಿಎಂಗೆ, "ಸೂರ್ಯನ ಪೂಜೆ ಮಾಡೋರಿಗೂ– ಚಂದ್ರನ ಪೂಜೆ ಮಾಡೋರಿಗೂ ವ್ಯತ್ಯಾಸ ತಿಳ್ಕೊಂಡು ಮುಂದೆ ಈ ರೀತಿಯ ಹೇಳಿಕೆ ಕೊಡಿ" ಎಂದು ತೇಜಸ್ವಿ ಸೂರ್ಯ ತಿರುಗೇಟು ನೀಡಿದ್ದಾರೆ.



ಬೆಂಗಳೂರಿನ ಗಾಂಧಿನಗರದ ವೈಟ್ ಟಾಪಿಂಗ್ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಅ.21 ರಂದು ಸಿಎಂ ಸಿದ್ದರಾಮಯ್ಯ ಮಾತನಾಡುತ್ತಾ, ಕೇಂದ್ರದಿಂದ ರಾಜ್ಯ–ಕ್ಕೆ ಅನುದಾನ ತರದಿರುವ ಬಗ್ಗೆ ಹಾಗೆಯೇ ಮೋದಿ ಸರ್ಕಾರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯ, ದ್ರೋಹದ ಬಗ್ಗೆ ಅಮಾವಾಸ್ಯೆ ಸೂರ್ಯ ಬಾಯಿ ಬಿಟ್ಟಿದ್ದಾರಾ? ಎಂದು ಟೀಕಿಸಿದ್ದರು. "ಸಂಸದ ತೇಜಸ್ವಿ ಸೂರ್ಯ. ನಾನು ಇವರನ್ನು ಅಮಾವಾಸ್ಯೆ ಸೂರ್ಯ ಅಂತ ಕರೀತೀನಿ ಎಂದಿದ್ದರು. "

ಈ ಬಗ್ಗೆ ಇಂದು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಸಂಸದ ತೇಜಸ್ವಿ ಸೂರ್ಯ "ಸಿದ್ದರಾಮಯ್ಯ ಅವರು, ಹಲವಾರು ಬಾರಿ ನನ್ನ ಬಗ್ಗೆ ಮಾತನಾಡುತ್ತಾ ವೈಯಕ್ತಿಕವಾಗಿ ಟೀಕೆಗಳನ್ನು ಮಾಡಿದ್ದಾರೆ. ಅವರು ಇರುವ ಸ್ಥಾನಕ್ಕೆ ಶೋಭೆ ತರುವುದಿಲ್ಲ. ಈ ಹಿಂದೆ ಕೂಡಾ ಚುನಾವಣೆ ಸಂದರ್ಭದಲ್ಲಿ ಟೀಕಿಸಿದ್ರು. ಈಗ ಎರಡು ದಿನದ ಹಿಂದೆ ಕೂಡಾ ಮತ್ತೆ ಅದೇ ಶಬ್ಧ ಬಳಸಿ ಟೀಕೆ ಮಾಡಿದ್ದಾರೆ" ಎಂದರು,

"ಪ್ರತೀ ಬಾರಿಯೂ ನನಗೆ ಆಶ್ಚರ್ಯ ಆಗುವುದೇನಂದ್ರೆ, ಸಿದ್ದರಾಮಯ್ಯ ಅವರು ಹಿರಿಯರಿದ್ದಾರೆ. ಲೋಕಾನುಭವ ಇರುವವರು ಇದ್ದಾರೆ. ಆದರೆ ಅವರಿಗೆ ಬಹುಷಃ ಅಮಾವಾಸ್ಯೆಗೂ– ಹುಣ್ಣಿಮೆಗೂ ಇರುವ ವ್ಯತ್ಯಾಸನೇ ಗೊತ್ತಿಲ್ವೇನೋ. ಹೊರಗಡೆ ಹೋಗಿ ನೋಡೋದೆ ಇಲ್ವೇನೋ ಎಂದು ಭಾಸ ಆಗುತ್ತೆ. ಅಮಾವಾಸ್ಯೆ ದಿನಾನೂ ಸೂರ್ಯ ಇರ್ತಾನೆ, ಹುಣ್ಣಿಮೆ ದಿನಾನೂ ಇರ್ತಾನೆ. ವರ್ಷದ 365 ದಿನ ಕೂಡಾ ಪ್ರಕಾಶಮಾನ ಆಗಿರೋದು ಯಾರಂದ್ರೆ ಸೂರ್ಯನೇ"

## ರಮೇಶ್ ಕತ್ತಿ ವಿರುದ್ಧ ಜಾತಿ ನಿಂದನೆ ಪ್ರಕರಣ ದೂರು ದಾಖಲಿಸಲು ಮನವಿ



**ತರೀಕೆರೆ:** ಬೆಳಗಾವಿಯ ಬಿ.ಕೆ. ಮಾಡೇಲ್ ಹೈಸ್ಕೂಲ್ ಮೈದಾನದಲ್ಲಿ ಡಿಸಿಸಿ ಬ್ಯಾಂಕಿನ ಚುನಾವಣಾ ಮತದಾನ ಪ್ರಕ್ರಿಯೆ ನಡೆಯುತ್ತಿರುವ ಸಂದರ್ಭದಲ್ಲಿ ಚಿಕ್ಕೋಡಿ ಮಾಜಿ ಸಂಸದ ಬೆಲ್ಲದ ಬಾಗೇವಾಡಿಯ ರಮೇಶ ಕತ್ತಿ ತಂದೆ, ಡಿಸಿಸಿ ಬ್ಯಾಂಕಿನ ಮಾಜಿ ಅಧ್ಯಕ್ಷ ವಿಶ್ವನಾಥ ಕತ್ತಿರವರು ತನ್ನ ಬೆಂಬಲಿಗರೊಂದಿಗೆ ಮಾತನಾಡುತ್ತ, ಬೇಡರ ಸೂಳೆ ಮಕ್ಕಳು ಎಂದು ಸಾರ್ವಜನಿಕವಾಗಿ ಜಾತಿ ನಿಂದನೆ ಮಾಡಿ ವಾಲ್ಮೀಕಿ ಸಮಾಜಕ್ಕೆ ಅವಮಾನಿಸಿದ್ದು, ಇವರ ವಿರುದ್ಧ ತರೀಕೆರೆ ವಾಲ್ಮೀಕಿ ಸಮಾಜದ ಮುಖಂಡರು ಸ್ಥಳೀಯ ಠಾಣೆಗೆ ದೂರು ಸಲ್ಲಿಸಿದ್ದಾರೆ.

ಈ ಘಟನೆ ಬಗ್ಗೆ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಇದ–ರಿಂದ ರಾಜ್ಯದಾದ್ಯಂತ 75 ಲಕ್ಷ ವಾಲ್ಮೀಕಿ ಸಮುದಾಯದ ಜನರ ಮನಸ್ಸಿಗೆ ತೀವ್ರ ನೋವು ಉಂಟಾಗಿದೆ ಹಾಗೂ ನಮ್ಮ ಭಾವನೆಗಳಿಗೆ ಧಕ್ಕೆ ಆಗಿದೆ. ಇದರಿಂದ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡುವ ಸಂಭವವಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ರಾಜ್ಯದಲ್ಲಿ ಪರಿಶಿಷ್ಟರು ಹಾಗೂ ಮೇಲ್ವರ್ಗದ ಸಮುದಾಯಗಳ ನಡುವೆ ಸಂಘರ್ಷ ಹಾಗೂ ಸಮುದಾಯಗಳ ಮಧ್ಯೆ ತೀವ್ರ ಘರ್ಷಣೆ ಉಂಟಾಗುವ ಸಂಭವವಿದೆ. ಇವರು ಸತತವಾಗಿ ಎಸ್.ಸಿ/ಎಸ್.ಟಿ ಸಮುದಾಯಕ್ಕೆ ಅವಹೇಳನಕಾರಿಯಾಗಿ ಅವಮಾನಿಸುವ ಕೆಲಸ ಮಾಡುತ್ತಿದ್ದು, ಭಾವನೆಗಳಿಗೆ ಧಕ್ಕೆ ಉಂಟುಮಾಡುವುರ ಮೂಲಕ ಬಾಬಾ ಸಾಹೇಬ್ ಅಂಬೇಡ್ಕರ್ ಸಂವಿಧಾನವನ್ನು ಅವಮಾನಿಸಿದ್ದಾರೆ ಎಂದು ದೂರಿನಲ್ಲಿದೆ..

ಈ ಸಂದರ್ಭದಲ್ಲಿ ಪುರಸಭಾಧ್ಯಕ್ಷ ವಸಂತಕುಮಾರ್, ಮಾನವ ಬಂಧುತ್ವ ವೇದಿಕೆಯ ಪರಶುರಾಮ್, ಮದರಿ ನಾಯಕ ಸಂಘದ ಅಧ್ಯಕ್ಷ ರಾಮೇಗೌಡ, ಮುಖಂಡರಾದ ರಾಮೇಗೌಡ, ಗುರುಮೂರ್ತಿ, ಸಂತೋಷ್, ಹೊನ್ನಕೆಂಪಯ್ಯ ಇದ್ದರು.

## ಸಮ್ಮೇಳನಾಧ್ಯಕ್ಷರಾದ ಚಿಕ್ಕಬಾಸೂರು ಅನಂತು ಅವರಿಗೆ ಗ್ರಾಮ ಸಾಹಿತ್ಯ ಸಮ್ಮೇಳನಕ್ಕೆ ಆಹ್ವಾನ

**ಕಡೂರು:** ಗ್ರಾಮೀಣ ಭಾಗದಲ್ಲಿ ಸಮ್ಮೇಳನಗಳು ನಡೆದಾಗ ನಮ್ಮಂತಹ ಎಲೆಮರೆ ಕಾಯಿಯಂತೆ ಇರುವ ಪ್ರತಿಭೆ ಗುರುತಿಸಲು ಸಾಧ್ಯವಾಗುತ್ತದೆ ಎಂದು ಪ್ರಥಮ ಗ್ರಾಮ ಕನ್ನಡ ಸಾಹಿತ್ಯ ಸಮ್ಮೇಳನ ಅಧ್ಯಕ್ಷರಾದ ಚಿಕ್ಕಬಾಸೂರು ಅನಂತು ತಿಳಿಸಿದರು.



ಅವರು ತಮ್ಮ ಸ್ವಗೃಹದಲ್ಲಿ ಸಮ್ಮೇಳನದ ಆಹ್ವಾನವನ್ನು ಸ್ವೀಕರಿಸಿ ಮಾತನಾಡಿ, ನನಗೆ ಈ ಅವಕಾಶ ಸಿಕ್ಕಿದ್ದು ನನ್ನ ಸೌಭಾಗ್ಯ, ತಾವೆಲ್ಲರೂ ಕೂಡಿ ಈ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕಾಗಿ ತಮ್ಮಲ್ಲಿ ಕೋರುತ್ತೇನೆ ಎಂದು ತಿಳಿಸಿದರು.

ಚಿಕ್ಕಬಾಸೂರು ಗ್ರಾಮದ ಕನ್ನಡ ಸಾಹಿತ್ಯ ಸಮ್ಮೇಳನವನ್ನು ವಾಲ್ಮೀಕ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಮೈದಾನದಲ್ಲಿ ಅಕ್ಟೋಬರ್ 26ರ ಭಾನುವಾರ ಏರ್ಪಡಿಸಿದ್ದು, ಈ ಸಮ್ಮೇಳನಕ್ಕೆ ಲೇಖಕ ಚಿಕ್ಕಬಾಸೂರು ಅನಂತು ಅವರ ಆಯ್ಕೆ ಹೆಚ್ಚು ಮಹತ್ವವನ್ನು ತಂದುಕೊಟ್ಟಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸೂರಿ ಶ್ರೀನಿವಾಸ್ ತಿಳಿಸಿದರು.

ಸ್ವಾಗತ ಸಮಿತಿಯ ಅಧ್ಯಕ್ಷರಾದ ಸಿ ಜಿ ತಿಮ್ಮಯ್ಯ ಮಾತನಾಡಿ ನಮ್ಮ ಭಾಗದಲ್ಲಿ ಇದೇ ಪ್ರಥಮ ಬಾರಿಗೆ ಗ್ರಾಮೀಣ ಭಾಗದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುತ್ತಿದೆ ಇದನ್ನು ಅತ್ಯಂತ ಯಶಸ್ವಿಯಾಗಿ ನಮ್ಮ ಗ್ರಾಮದ ಎಲ್ಲ ಗ್ರಾಮಸ್ಥರು ಕೂಡಿ ಈ ಸಮ್ಮೇಳನವನ್ನು ಯಶಸ್ವಿಗೊಳಿಸುತ್ತೇವೆ ಎಂದು ತಿಳಿಸಿದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಚಿಕ್ಕನಲ್ಲೂರು ಎಸ್ ಪರಮೇಶ್ ಈ ಸಮ್ಮೇಳನವನ್ನು ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯ ಅಧ್ಯಕ್ಷ ನಾಡೋಜ ಡಾ. ಮಹೇಶ್ ಜೋಶಿ ಹಾಗೂ ಕಡೂರು ಕ್ಷೇತ್ರದ ಶಾಸಕರಾದ ಕೆಎಸ್ ಆನಂದ್ ಉದ್ಘಾಟಿಸಲಿದ್ದಾರೆ. ಸಮ್ಮೇಳನದಲ್ಲಿ ಎರಡು ಗೋಷ್ಠಿಗಳನ್ನು ಇರಿಸಿದ್ದು ಅದರಲ್ಲಿ ಪ್ರಮುಖವಾಗಿ ಕೃಷಿಗೋಷ್ಠಿಯಲ್ಲಿ ಪ್ರಗತಿಪರ ರೈತ ಮನಸುಳಿ ಮೋಹನ್ ಅವರು ಮಾತನಾಡಲಿದ್ದಾರೆ ಶಿಕ್ಷಣ ಮತ್ತು ಉದ್ಯೋಗ ಗೋಷ್ಠಿಯಲ್ಲಿ ಶಿಕ್ಷಣ ತಜ್ಞರಾದ ಹರ್ಷಿಣಿ ಪ್ರವೇಶ ನುಡಿಯನ್ನು ನುಡಿಯಲಿದ್ದಾರೆ. ರಘು ಅವರು ಸ್ಪರ್ಧಾತ್ಮಕ ಜಗತ್ತಿನ ಶಿಕ್ಷಣ ಮತ್ತು ಉದ್ಯೋಗ ವಿಷಯ ಕುರಿತಂತೆ ಪ್ರಬಂಧ ಮಂಡಿಸಲಿದ್ದಾರೆ

ಜಾನಪದ ಗೋಷ್ಠಿಯಲ್ಲಿ ಆಶಯ ನುಡಿಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಎಸ್.ಎಸ್ ವೆಂಕಟೇಶ್ ನುಡಿಯಲಿದ್ದಾರೆ, ಪ್ರವೇಶ ನುಡಿಯನ್ನು ತರೀಕೆರೆ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮಹಿಳಾ ಘಟಕದ ಅಧ್ಯಕ್ಷರಾದ ಸುನಿತಾ ಕಿರಣ್ ನುಡಿಯಲಿದ್ದಾರೆ. ಹಾಸನ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಮತ್ತು ಜಾನಪದ ವರ್ತಮಾನದಲ್ಲಿ ಜಾನಪದ ಕುರಿತು ಮಾತನಾಡಲಿದ್ದು, ಇದರ ಉದ್ಘಾಟನೆಯನ್ನು ರಾಜ್ಯ ಕನ್ನಡ ಜಾನಪದ ಪರಿಷತ್ತಿನ ಅಧ್ಯಕ್ಷ ಜಾನಪದ ಬಾಲಾಜಿ ಉದ್ಘಾಟಿಸಲಿದ್ದಾರೆ.

ಸಮಾರೋಪ ನುಡಿಯನ್ನು ಜಿಲ್ಲಾ ಪಂಚಾಯಿತಿಯ ಕಾರ್ಯನಿರ್ವಹಣಾಧಿಕಾರಿಗಳಾದ ಹಾಗೂ ಹಲವು ಚಲನಚಿತ್ರಗಳಲ್ಲಿ ಬಾಲನಟಿಯಾಗಿ ನಟಿಸಿದ್ದ ಎಚ್.ಎಸ್. ಕೀರ್ತನ ಮಾತನಾಡಲಿದ್ದಾರೆ ಇದೇ ಸಂದರ್ಭದಲ್ಲಿ ಕನ್ನಡ ಶ್ರೀ ಪ್ರಶಸ್ತಿಯನ್ನು ಸ್ವರ್ಣಾಂಬ ದೇವಾಲಯದ ಧರ್ಮದರ್ಶಿಗಳಾದ ಡಾ. ಎಂಟಿ ಸತ್ಯನಾರಾಯಣ ಅವರಿಗೂ ಹಾಗೂ ಶ್ರೀಮತಿ ಕವಿತಾ ಆನಂದ್ ಅವರಿಗೂ ಮತ್ತು ಸಾಹಿತ್ಯ ಸಿರಿ ಪ್ರಶಸ್ತಿಯನ್ನು ಸತೀಶ್ ಮತ್ತು ಸಿ. ಜಿ. ತಿಮ್ಮಯ್ಯ ಮತ್ತು ಗ್ರಾಮದ ವಿವಿಧ ಗಣ್ಯರ ಸಾಧನೆಯನ್ನು ಗುರುತಿಸಿ ಕನ್ನಡ ಸಿರಿ ಪ್ರಶಸ್ತಿಯನ್ನು ನೀಡಲಾಗುವುದು ಎಂದು ಅವರು ತಿಳಿಸಿದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**